VOLUME: 16 | 28 JULY 2026 | ಮಂಗಳವಾರ | RS: 2 | PAGE: 06 ISSUE: 163 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

'ಟಾಕ್ಸಿಕ್' ಸಿನಿಮಾದ ಬ್ಯಾಕ್-ಟು-ಬ್ಯಾಕ್ ರೊಮ್ಯಾಂಟಿಕ್ ಹಾಡುಗಳ ಯಶಸ್ಸಿನ ಬೆನ್ನಲ್ಲೇ ಈಗ ಮೂರನೇ ಸಾಂಗ್ ರಿಲೀಸ್‌ಗೆ ಕೌಂಟ್‌ಡೌನ್ ಶುರುವಾಗಿದೆ. ಗ್ಯಾಂಗ್‌ಸ್ಟರ್ ಹಿನ್ನೆಲೆಯ ಈ ಚಿತ್ರದಲ್ಲಿ ಯಶ್ ಹಾಗೂ ಕಿಯಾರಾ ಅಡ್ವಾಣಿ ಕಾಂಬಿನೇಷನ್‌ನ ಮತ್ತೊಂದು ಪ್ರಣಯ ಗೀತೆ ವಿಶಾಲ್ ಮಿಶ್ರಾ ಸಂಗೀತದಲ್ಲಿ ಮೂಡಿಬರಲಿದ್ದು, ಅಭಿಮಾನಿಗಳಲ್ಲಿ ಭಾರಿ ಕುತೂಹಲ ಮೂಡಿಸಿದೆ.



prabhavaa.com

BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669

RNI KARKAN2011/44806

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಅನುದಾನ ಬಿಡುಗಡೆ ಮಾಡುವಂತೆ ಕೇಂದ್ರದ ಮೇಲೆ ಒತ್ತಡ

ನವದೆಹಲಿ: ಜಲಸಂಪನ್ಮೂಲ ಇಲಾಖೆಗೆ ಸಂಬಂಧಿಸಿದ ವಿಷಯಗಳನ್ನು ಹೊರತುಪಡಿಸಿ, ಕರ್ನಾಟಕಕ್ಕೆ ಸಂಬಂಧಿಸಿದ ಕೇಂದ್ರ ಸರ್ಕಾರದ ಬಳಿ ಬಾಕಿ ಇರುವ ಪ್ರಮುಖ ಯೋಜನೆಗಳಿಗೆ ಅನುಮೋದನೆ ಹಾಗೂ ಅನುದಾನ ಬಿಡುಗಡೆ ಸೇರಿದಂತೆ ಒಟ್ಟು 13 ಪ್ರಮುಖ ವಿಷಯಗಳ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ಸಚಿವರು ಹಾಗೂ ರಾಜ್ಯದ ಸಂಸದರೊಂದಿಗೆ ಚರ್ಚೆ ನಡೆಸಿದರು.

ನವದೆಹಲಿಯ ಕರ್ನಾಟಕ ಭವನದಲ್ಲಿ ಸೋಮವಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ರಾಜ್ಯದ ಎಲ್ಲಾ ಸಂಸದರ ಸಭೆ ನಡೆಯಿತು. ರಾಜ್ಯದ ಅಭಿವೃದ್ಧಿಗೆ ಸಂಬಂಧಿಸಿದಂತೆ ಕೇಂದ್ರದ ವಿವಿಧ ಸಚಿವಾಲಯಗಳಲ್ಲಿ ಬಾಕಿ ಇರುವ ಯೋಜನೆಗಳಿಗೆ ಶೀಘ್ರ ಅನುಮೋದನೆ ಹಾಗೂ ಅನುದಾನ ದೊರಕಿಸಿಕೊಡಲು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರುವಂತೆ ಸಂಸದರಿಗೆ ಮುಖ್ಯಮಂತ್ರಿ ಮನವಿ ಮಾಡಿದರು.

ಸಭೆಯಲ್ಲಿ 15ನೇ ಹಣಕಾಸು ಆಯೋಗದಡಿ ಗ್ರಾಮ ಪಂಚಾಯಿತಿಗಳಿಗೆ ಬಾಕಿ ಇರುವ ಅನುದಾನ ಬಿಡುಗಡೆ, ಬೆಂಗಳೂರು ಸ್ಯಾಟಲೈಟ್ ಟೌನ್ ರಿಂಗ್ ರಸ್ತೆ, ಬೆಂಗಳೂರು ಉಪನಗರ ರೈಲು ಯೋಜನೆ, ಕೋಲಾರ ರೈಲ್ವೆ ಕೋಚ್ ಕಾರ್ಖಾನೆ,




ಎಚ್‌ಎಎಲ್ ವಿಮಾನ ನಿಲ್ದಾಣವನ್ನು ವಾಣಿಜ್ಯ ಬಳಕೆಗೆ ಪುನರಾರಂಭಿಸುವುದು, ಸಾಗರಮಾಲಾ 2.0 ಕಾರ್ಯಯೋಜನೆಗೆ ಅನುಮೋದನೆ, ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆ, ಕುದುರೆಮುಖ ರಾಷ್ಟ್ರೀಯ ಉದ್ಯಾನದಿಂದ ಕುಟುಂಬಗಳ ಸ್ಥಳಾಂತರ, ರಕ್ಷಣಾ ಇಲಾಖೆಯ ಭೂಮಿಯನ್ನು ರಾಜ್ಯಕ್ಕೆ ವರ್ಗಾವಣೆ, ಬೆಂಗಳೂರು–ಮುಂಬೈ ಅತಿ ವೇಗದ ರೈಲು ಮಾರ್ಗ, ತೆಂಗು ಮತ್ತು ಅಡಿಕೆ ಬೆಳೆಗಳ ಕೀಟ ನಿಯಂತ್ರಣ ಹಾಗೂ ಪೊಲೀಸ್ ಆಧುನೀಕರಣ ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚಿಸಲಾಯಿತು.

2025–26ನೇ ಸಾಲಿನ 15ನೇ ಹಣಕಾಸು ಆಯೋಗದ ಶಿಫಾರಸಿನಂತೆ ಗ್ರಾಮ ಪಂಚಾಯಿತಿಗಳಿಗೆ ರೂ.2,186.20 ಕೋಟಿ ಅನುದಾನ ಬಿಡುಗಡೆ ಮಾಡಬೇಕಿದ್ದು, ಈ ಮೊತ್ತ ಇನ್ನೂ ಬಿಡುಗಡೆಯಾಗಿಲ್ಲ. ಅನುದಾನವನ್ನು ಶೀಘ್ರ ಬಿಡುಗಡೆ ಮಾಡಿಸಲು ಕೇಂದ್ರ ಪಂಚಾಯತ್ ರಾಜ್ ಸಚಿವಾಲಯದೊಂದಿಗೆ ನಿರಂತರವಾಗಿ ಅನುಸರಿಸುವಂತೆ ಸಭೆಯಲ್ಲಿ ಮನವಿ ಮಾಡಲಾಯಿತು.

ಬೆಂಗಳೂರು ಸುತ್ತಮುತ್ತಲಿನ ಸ್ಯಾಟಲೈಟ್ ನಗರಗಳನ್ನು ಸಂಪರ್ಕಿಸುವ 288 ಕಿ.ಮೀ. ಉದ್ದದ ಸ್ಯಾಟಲೈಟ್ ಟೌನ್ ರಿಂಗ್ ರಸ್ತೆ ಯೋಜನೆಯ ಉಳಿದ ರೂ.9,613 ಕೋಟಿ ಮೊತ್ತದ ಕಾಮಗಾರಿಗೆ ಕೇಂದ್ರ ಸಚಿವ ಸಂಪುಟದ ಅನುಮೋದನೆ ಬಾಕಿ ಇದೆ.

**148 ಕಿ.ಮೀ. ಉದ್ದದ ಬೆಂಗಳೂರು ಉಪನಗರ ರೈಲು ಯೋಜನೆಯ ಪರಿಷ್ಕೃತ ಯೋಜನಾ ವೆಚ್ಚ ರೂ.23,343 ಕೋಟಿಯಾಗಿದ್ದು, ಈವರೆಗೆ ರೂ.3,342.77 ಕೋಟಿ ವೆಚ್ಚವಾಗಿದೆ. ಯೋಜನೆಗೆ ಅಗತ್ಯವಿರುವ 153 ಕೋಚ್‌ಗಳ ಖರೀದಿಗೆ ಕೇಂದ್ರ ಸಚಿವ ಸಂಪುಟ ಹಾಗೂ ರೈಲ್ವೆ ಇಲಾಖೆಯ ಅನುಮೋದನೆ ಪಡೆಯುವಂತೆ ಸಂಸದರು ಕೇಂದ್ರದ ಮೇಲೆ ಒತ್ತಡ ಹೇರಬೇಕು ಎಂದು ಮನವಿ ಮಾಡಲಾಯಿತು. ಕೋಲಾರದಲ್ಲಿ ರೈಲ್ವೆ ಕೋಚ್ ಕಾರ್ಖಾನೆ ಸ್ಥಾಪನೆಗೆ 2014ರಲ್ಲೇ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದ್ದರೂ, ರಾಜ್ಯ ಸರ್ಕಾರ ಭೂಮಿ ಒದಗಿಸಿದ ಬಳಿಕವೂ ಯೋಜನೆ ಕಾರ್ಯಗತಗೊಂಡಿಲ್ಲ.**

ಭೂಸ್ವಾಧೀನ ವೆಚ್ಚದ ಶೇ.30ರಷ್ಟನ್ನು ರಾಜ್ಯ ಸರ್ಕಾರ ಭರಿಸುತ್ತಿದ್ದು, ಖನಿಜ ರಾಯಲ್ಟಿ ಹಾಗೂ ಜಿಎಸ್‌ಟಿ ವಿನಾಯಿತಿಗೂ ರಾಜ್ಯ ಸರ್ಕಾರ ಒಪ್ಪಿಗೆ ನೀಡಿದೆ ಎಂದು ಸಭೆಯಲ್ಲಿ ವಿವರಿಸಲಾಯಿತು.

148 ಕಿ.ಮೀ. ಉದ್ದದ ಬೆಂಗಳೂರು ಉಪನಗರ ರೈಲು ಯೋಜನೆಯ ಪರಿಷ್ಕೃತ ಯೋಜನಾ ವೆಚ್ಚ ರೂ.23,343 ಕೋಟಿಯಾಗಿದ್ದು, ಈವರೆಗೆ ರೂ.3,342.77 ಕೋಟಿ ವೆಚ್ಚವಾಗಿದೆ. ಯೋಜನೆಗೆ ಅಗತ್ಯವಿರುವ 153 ಕೋಚ್‌ಗಳ ಖರೀದಿಗೆ ಕೇಂದ್ರ ಸಚಿವ ಸಂಪುಟ ಹಾಗೂ ರೈಲ್ವೆ ಇಲಾಖೆಯ ಅನುಮೋದನೆ ಪಡೆಯುವಂತೆ ಸಂಸದರು ಕೇಂದ್ರದ ಮೇಲೆ ಒತ್ತಡ ಹೇರಬೇಕು ಎಂದು ಮನವಿ ಮಾಡಲಾಯಿತು.

ಕೋಲಾರದಲ್ಲಿ ರೈಲ್ವೆ ಕೋಚ್ ಕಾರ್ಖಾನೆ ಸ್ಥಾಪನೆಗೆ 2014ರಲ್ಲೇ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದ್ದರೂ, ರಾಜ್ಯ ಸರ್ಕಾರ ಭೂಮಿ ಒದಗಿಸಿದ ಬಳಿಕವೂ ಯೋಜನೆ ಕಾರ್ಯಗತಗೊಂಡಿಲ್ಲ. ಈ ಯೋಜನೆಯನ್ನು ಶೀಘ್ರ ಅನುಷ್ಠಾನಗೊಳಿಸುವಂತೆ ಕೇಂದ್ರದ ಗಮನ ಸೆಳೆಯಲು ಕೋರಲಾಯಿತು. ಇದೇ ವೇಳೆ ಬೆಂಗಳೂರಿನ ಎಚ್‌ಎಎಲ್ ವಿಮಾನ ನಿಲ್ದಾಣವನ್ನು ವಾಣಿಜ್ಯ ಬಳಕೆಗೆ ಪುನರಾರಂಭಿಸುವ ಕುರಿತು ನಾಗರಿಕ ವಿಮಾನಯಾನ ಸಚಿವಾಲಯದಿಂದ ಅಂತಿಮ ನಿರ್ಧಾರ ಕೈಗೊಳ್ಳಬೇಕಿದೆ ಎಂದು ತಿಳಿಸಲಾಯಿತು.

ಕುದುರೆಮುಖ ರಾಷ್ಟ್ರೀಯ ಉದ್ಯಾನದಿಂದ ಕುಟುಂಬಗಳ ಸ್ಥಳಾಂತರಕ್ಕಾಗಿ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದಿಂದ ರೂ.300 ಕೋಟಿ ಅನುದಾನದ ಅನುಮೋದನೆ ಬಾಕಿ ಇದೆ. ಬೆಂಗಳೂರಿನಲ್ಲಿ 40 ಎಕರೆ ಹಾಗೂ ಬೆಳಗಾವಿಯಲ್ಲಿ 668 ಎಕರೆ ರಕ್ಷಣಾ ಇಲಾಖೆಯ ಭೂಮಿಯನ್ನು ರಾಜ್ಯ ಸರ್ಕಾರಕ್ಕೆ ವರ್ಗಾಯಿಸುವ ಪ್ರಸ್ತಾವನೆಗೂ ಕೇಂದ್ರ ರಕ್ಷಣಾ ಸಚಿವಾಲಯದ ಅನುಮೋದನೆ ಅಗತ್ಯವಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಬೆಂಗಳೂರು–ಮೈಸೂರು ಹಾಗೂ ಬೆಂಗಳೂರು–ಮುಂಬೈ ಮಾರ್ಗಗಳನ್ನು ಅತಿ ವೇಗದ ರೈಲು ಸಂಪರ್ಕದ ವ್ಯಾಪ್ತಿಗೆ ಸೇರಿಸುವಂತೆ ರಾಜ್ಯ ಸರ್ಕಾರ ಮನವಿ ಮಾಡಿದ್ದು, ಇದರಿಂದ ಕಿತ್ತೂರು ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗಗಳ ಕೈಗಾರಿಕಾ ಅಭಿವೃದ್ಧಿ, ವೇಗದ ಸಾರಿಗೆ ವ್ಯವಸ್ಥೆ ಹಾಗೂ ಪ್ರಾದೇಶಿಕ ಸಮತೋಲನಕ್ಕೆ ಅನುಕೂಲವಾಗಲಿದೆ ಎಂದು ಮುಖ್ಯಮಂತ್ರಿ ವಿವರಿಸಿದರು.

## ವಿಮಾನದ ತುರ್ತು ಭೂಸ್ಪರ್ಶ

ಗಾಂಧಿನಗರ: ದುಬೈನಿಂದ ಮುಂಬೈಗೆ ತೆರಳುತ್ತಿದ್ದ ಇಂಡಿಗೋ ವಿಮಾನದ ಕಾರ್ಗೋ ಹೋಲ್ಡ್‌ನಲ್ಲಿ ಹೊಗೆ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಗುಜರಾತ್‌ನ ರಾಜ್‌ಕೋಟ್ ವಿಮಾನ ನಿಲ್ದಾಣದಲ್ಲಿ ವಿಮಾನವನ್ನು ತುರ್ತಾಗಿ ಭೂಸ್ಪರ್ಶ ಮಾಡಲಾಗಿದೆ. ವಿಮಾನದಲ್ಲಿದ್ದ 194 ಪ್ರಯಾಣಿಕರು ಸುರಕ್ಷಿತವಾಗಿದ್ದಾರೆ.

ಇಂಡಿಗೋ ಸಂಸ್ಥೆಯ 6ಇ 1452 ವಿಮಾನವು ದುಬೈನಿಂದ ಮುಂಬೈಗೆ ಹಾರಾಟ ನಡೆಸುತ್ತಿದ್ದ ವೇಳೆ ಕಾರ್ಗೋ ಹೋಲ್ಡ್‌ನಲ್ಲಿ ಹೊಗೆ ಕಾಣಿಸಿಕೊಂಡಿದೆ. ಕೂಡಲೇ ಎಚ್ಚೆತ್ತ ಪೈಲಟ್ ರಾಜ್‌ಕೋಟ್ ವಿಮಾನ ನಿಲ್ದಾಣದ ಅಧಿಕಾರಿಗಳನ್ನು ಸಂಪರ್ಕಿಸಿ ತುರ್ತು ಭೂಸ್ಪರ್ಶಕ್ಕೆ ಅನುಮತಿ ಕೋರಿದ್ದಾರೆ. ಪರಿಸ್ಥಿತಿಯ ಗಂಭೀರತೆಯನ್ನು ಪರಿಗಣಿಸಿದ ಅಧಿಕಾರಿಗಳು ವಿಮಾನವನ್ನು ತುರ್ತಾಗಿ ಇಳಿಸಲು ಅನುಮತಿ ನೀಡಿದ್ದು, ವಿಮಾನ ನಿಲ್ದಾಣದಲ್ಲಿ ಮುನ್ನೆಚ್ಚರಿಕೆಯಾಗಿ ತುರ್ತು ಪರಿಸ್ಥಿತಿ ಘೋಷಿಸಲಾಗಿತ್ತು.

ವಿಮಾನ ಸುರಕ್ಷಿತವಾಗಿ ಭೂಸ್ಪರ್ಶ ಮಾಡಿದ ಬಳಿಕ ಅದರಲ್ಲಿದ್ದ ಎಲ್ಲಾ ಪ್ರಯಾಣಿಕರನ್ನು ಸುರಕ್ಷಿತವಾಗಿ ಕೆಳಗಿಳಿಸಲಾಯಿತು. ಘಟನೆಯಲ್ಲಿ ಯಾವುದೇ ಪ್ರಯಾಣಿಕರಿಗೆ ಅಪಾಯ ಸಂಭವಿಸಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಕುರಿತು ಪ್ರತಿಕ್ರಿಯಿಸಿರುವ ರಾಜ್‌ಕೋಟ್ ವಿಮಾನ ನಿಲ್ದಾಣದ ನಿರ್ದೇಶಕ ದಿಗಂತ ಬೋರಾ, ದುಬೈನಿಂದ ಮುಂಬೈಗೆ ತೆರಳುತ್ತಿದ್ದ ಇಂಡಿಗೋ ವಿಮಾನದ ಕಾರ್ಗೋ ಹೋಲ್ಡ್‌ನಲ್ಲಿ ಹೊಗೆ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ರಾಜ್‌ಕೋಟ್‌ನಲ್ಲಿ ತುರ್ತು ಭೂಸ್ಪರ್ಶ ಮಾಡಲಾಗಿದೆ. ವಿಮಾನ ಸುರಕ್ಷಿತವಾಗಿ ಇಳಿದಿದ್ದು, ಎಲ್ಲಾ ಪ್ರಯಾಣಿಕರು ಸುರಕ್ಷಿತವಾಗಿದ್ದಾರೆ ಎಂದು ತಿಳಿಸಿದ್ದಾರೆ.

ಘಟನೆಯ ಹಿನ್ನೆಲೆಯಲ್ಲಿ ವಿಮಾನದಲ್ಲಿ ಹೊಗೆ ಕಾಣಿಸಿಕೊಳ್ಳಲು ಕಾರಣವೇನು ಎಂಬುದರ ಕುರಿತು ಪರಿಶೀಲನೆನಡೆಸಲಾಗುತ್ತಿದೆ.

## 4,500 ಹೊಸ ಬಸ್‌ಗಳ ಖರೀದಿಸಲು ಸಾರಿಗೆ ಸಚಿವರ ಸೂಚನೆ

ಬೆಂಗಳೂರು: ಶಕ್ತಿ ಯೋಜನೆ ಜಾರಿಯಾದ ಬಳಿಕ ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಸೇರಿದಂತೆ ರಾಜ್ಯದ ನಾಲ್ಕು ಸಾರಿಗೆ ನಿಗಮಗಳ ಬಸ್‌ಗಳಲ್ಲಿ ಪ್ರಯಾಣಿಕರ ದಟ್ಟಣೆ ಗಣನೀಯವಾಗಿ ಹೆಚ್ಚಾಗಿದೆ. ನಿತ್ಯ ಕೋಟ್ಯಂತರ ಮಂದಿ ಬಸ್‌ಗಳಲ್ಲಿ ಸಂಚರಿಸುತ್ತಿರುವ ಹಿನ್ನೆಲೆಯಲ್ಲಿ ಪ್ರಯಾಣಿಕರಿಗೆ ಸಮಯಕ್ಕೆ ಸರಿಯಾಗಿ ಬಸ್‌ಗಳು ಸಿಗದೆ ಪರದಾಡುವಂತಾಗಿದೆ.

ಇದರ ಬೆನ್ನಲ್ಲೇ ಈ ವರ್ಷ ನಾಲ್ಕು ಸಾರಿಗೆ ನಿಗಮಗಳ ಸುಮಾರು 6 ಸಾವಿರ ಹಳೆಯ ಬಸ್‌ಗಳು ಗುಜರಿಗೆ ಸೇರುವ ಸಾಧ್ಯತೆ ಇದ್ದು, ಸಮಸ್ಯೆ ಮತ್ತಷ್ಟು ಉಲ್ಬಣಿಸುವ ಆತಂಕ ಎದುರಾಗಿದೆ. ಹೀಗಾಗಿ 4,500 ಹೊಸ ಬಸ್‌ಗಳನ್ನು ಖರೀದಿಸಲು ಕ್ರಮ ಕೈಗೊಳ್ಳುವಂತೆ ಸಾರಿಗೆ ಸಚಿವ ಭೈರತಿ ಸುರೇಶ್ ಸಾರಿಗೆ ಇಲಾಖೆ ಕಾರ್ಯದರ್ಶಿಗೆ ಸೂಚನೆ ನೀಡಿದ್ದಾರೆ.

ಶಕ್ತಿ ಯೋಜನೆ ಜಾರಿಯಾದ ನಂತರ ರಾಜ್ಯದ ನಾಲ್ಕು ಸಾರಿಗೆ ನಿಗಮಗಳ ಬಸ್‌ಗಳಲ್ಲಿ ಪ್ರತಿದಿನ ಸುಮಾರು 1.50 ಕೋಟಿಯಿಂದ 1.80 ಕೋಟಿ ಪ್ರಯಾಣಿಕರು ಸಂಚರಿಸುತ್ತಿದ್ದಾರೆ. ಪ್ರಯಾ ಣಿಕರ ಸಂಖ್ಯೆ ಹೆಚ್ಚಿರುವುದರಿಂದ ಹಲವು ಮಾರ್ಗಗಳಲ್ಲಿ ಬಸ್‌ಗಳು ತುಂಬಿ ತುಳುಕುತ್ತಿದ್ದು, ಪ್ರಯಾಣಿಕರಿಗೆ ಕುಳಿತುಕೊಳ್ಳಲು ಮಾತ್ರವಲ್ಲದೆ ನಿಂತುಕೊಳ್ಳಲೂ ಜಾಗವಿಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಕೆಲವು ಕಡೆಗಳಲ್ಲಿ ಸಮಯಕ್ಕೆ ಸರಿಯಾಗಿ ಬಸ್‌ಗಳು ಸಿಗದೆ ಪ್ರಯಾಣಿಕರು ತೊಂದರೆ ಅನುಭವಿಸುತ್ತಿದ್ದಾರೆ.



ಇದರ ನಡುವೆ ಈ ವರ್ಷ ಸುಮಾರು 6 ಸಾವಿರ ಹಳೆಯ ಬಸ್‌ಗಳನ್ನು ಗುಜರಿಗೆ ಹಾಕಬೇಕಿರುವ ಹಿನ್ನೆಲೆಯಲ್ಲಿ ಸಾರಿಗೆ ಸಚಿವ ಭೈರತಿ ಸುರೇಶ್ ಅವರು ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗಳಿಗೆ ಹೊಸ ಬಸ್‌ಗಳ ವ್ಯವಸ್ಥೆ ಮಾಡುವಂತೆ ಸೂಚಿಸಿದ್ದಾರೆ.

ಫ್ಲೈ ಬಸ್, ಅಂಬಾರಿ, ಐರಾವತ, ಅಂಬಾರಿ ಡ್ರೀಮ್ ಕ್ಲಾಸ್, ಐರಾವತ ಕ್ಲಬ್ ಕ್ಲಾಸ್, ರಾಜಹಂಸ ಹಾಗೂ ಪಲಕ್ಕಿ ಉತ್ಸವ ಸೇರಿದಂತೆ ವಿವಿಧ ಸೇವೆಗಳಿಗೆ 3,500 ಹೊಸ ಡೀಸೆಲ್ ಬಸ್‌ಗಳನ್ನು ಖರೀದಿಸಲು ಉದ್ದೇಶಿಸಲಾಗಿದೆ. ಇದರ ಜೊತೆಗೆ ರಾಜ್ಯದಲ್ಲಿ ಇನ್ನೂ ಬಸ್ ಸೇವೆ ಇಲ್ಲದ ಗ್ರಾಮಗಳು ಹಾಗೂ ಪ್ರದೇಶಗಳಿಗೆ ಸಂಪರ್ಕ ಕಲ್ಪಿಸಲು 1,000 ಹೊಸ ಬಸ್‌ಗಳನ್ನು ಒದಗಿಸುವ ಯೋಜನೆಯೂ ಇದೆ.

ಈಗಾಗಲೇ 1,000 ಹೊಸ ಬಸ್‌ಗಳ ಖರೀದಿಗೆ ಸರ್ಕಾರ ಅನುಮತಿ ನೀಡಿದೆ ಎಂದು ತಿಳಿದುಬಂದಿದೆ. ರಾಜ್ಯದ ನಾಲ್ಕು ಸಾರಿಗೆ ನಿಗಮಗಳಲ್ಲಿ ಒಟ್ಟು 23,989 ಬಸ್‌ಗಳಿದ್ದು, ಈ ಪೈಕಿ 6 ಸಾವಿರ ಬಸ್‌ಗಳು ಗುಜರಿಗೆ ಸೇರಿದರೆ ಉಳಿಯುವ ಬಸ್‌ಗಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಲಿದೆ.

ಇದರಿಂದ ಪ್ರಯಾಣಿಕರಿಗೆ ಮತ್ತಷ್ಟು ಸಮಸ್ಯೆಯಾಗುವ ಸಾಧ್ಯತೆ ಇದೆ. ಹೀಗಾಗಿ ಸರ್ಕಾರ ಕೂಡಲೇ ಹೊಸ ಡೀಸೆಲ್ ಬಸ್‌ಗಳನ್ನು ಖರೀದಿಸಲು ಮುಂದಾಗಬೇಕು ಎಂದು ಸಾರಿಗೆ ನೌಕರರ ಮುಖಂಡ ಜಗದೀಶ್ ಒತ್ತಾಯಿಸಿದ್ದಾರೆ.



ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ ಶಾಂತಿನಗರದಲ್ಲಿ ಅನಾಥ ವಾಹನಗಳ ತೆರವು ಕಾರ್ಯಾಚರಣೆಗೆ ಮುಂದಾಗಿರುವ ಪಾಲಿಕೆ ಅಧಿಕಾರಿಗಳು, ವಾಹನಗಳನ್ನು ಗುರುತಿಸುವ ನಿಟ್ಟಿನಲ್ಲಿ ಸ್ಟಿಕ್ಕರ್ ಅಂಟಿಸುವ ಕಾರ್ಯ ಕೈಗೊಂಡರು. ಶಾಂತಿನಗರ ಶಾಸಕ ಎನ್.ಎ. ಹ್ಯಾರಿಸ್ ಹಾಗೂ ಬೆಂಗಳೂರು ಕೇಂದ್ರ ನಗರ ಪಾಲಿಕೆ ಆಯುಕ್ತ ಜಗದೀಶ್ ಜಿ. ಅವರು ಈ ಕಾರ್ಯಾಚರಣೆಯಲ್ಲಿ ಭಾಗವಹಿಸಿ ಪರಿಶೀಲನೆ ನಡೆಸಿದರು.

## ತುಮಕೂರು ರಸ್ತೆ ಮತ್ತೆ ಬಂದ್

ಬೆಂಗಳೂರು: ರಾಷ್ಟ್ರೀಯ ಹೆದ್ದಾರಿ–4ರ ಪೀಣ್ಯ ಎಲಿವೇಟೆಡ್ ಫ್ಲೈಓವರ್ ಮೇಲೆ ಡಾಂಬರೀಕರಣ ಕಾಮಗಾರಿ ಕೈಗೊಳ್ಳಲಾಗಿರುವ ಹಿನ್ನೆಲೆಯಲ್ಲಿ ಜುಲೈ 27ರಿಂದ ಆಗಸ್ಟ್ 5ರವರೆಗೆ ಬೆಂಗಳೂರು ನಗರ ಕಡೆಗೆ ಬರುವ ಎಲ್ಲಾ ರೀತಿಯ ವಾಹನಗಳ ಸಂಚಾರವನ್ನು ನಿರ್ದಿಷ್ಟ ಅವಧಿಯಲ್ಲಿ ನಿರ್ಬಂಧಿಸಲಾಗಿದೆ. ವಾಹನ ಸವಾರರು ಪರ್ಯಾಯ ಮಾರ್ಗಗಳನ್ನು ಬಳಸುವಂತೆ ಬೆಂಗಳೂರು ಸಂಚಾರ ವಿಭಾಗ ಪೊಲೀಸರು ಸೂಚಿಸಿದ್ದಾರೆ.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ಪೀಣ್ಯ ಸಂಚಾರ ಪೊಲೀಸ್ ಠಾಣೆ ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿ–4ರ ಪೀಣ್ಯ ಎಲಿವೇಟೆಡ್ ಫ್ಲೈಓವರ್, ಅಂದರೆ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಮೇಲ್ಸೇತುವೆಯಲ್ಲಿ ಡಾಂಬರೀಕರಣ ಕಾಮಗಾರಿ ಕೈಗೊಂಡಿದೆ. ಸಾರ್ವಜನಿಕರ ಸುಗಮ ಸಂಚಾರದ ದೃಷ್ಟಿಯಿಂದ ಕಾಮಗಾರಿ ನಡೆಯುವ ಅವಧಿಯಲ್ಲಿ ಸಂಚಾರ ನಿರ್ಬಂಧ ಜಾರಿಗೊಳಿಸಲಾಗಿದೆ.

ಜುಲೈ 27ರಿಂದ ಆಗಸ್ಟ್ 5ರವರೆಗೆ ರಾತ್ರಿ 10 ಗಂಟೆಯಿಂದ ಬೆಳಗ್ಗೆ 5 ಗಂಟೆಯವರೆಗೆ ಪೀಣ್ಯ ಮೇಲ್ಸೇತುವೆ ಮೇಲೆ ಬೆಂಗಳೂರು ನಗರ ಕಡೆಗೆ ಬರುವ ವಾಹನಗಳ ಸಂಚಾರವನ್ನು ನಿರ್ಬಂಧಿಸಲಾಗಿದೆ. ಶನಿವಾರ ಮತ್ತು ಭಾನುವಾರ ರಾತ್ರಿ 12 ಗಂಟೆಯಿಂದ ಬೆಳಗ್ಗೆ 5 ಗಂಟೆಯವರೆಗೆ ಸಂಚಾರ ನಿರ್ಬಂಧ ಇರಲಿದೆ.

ಕೆನ್ನಮೆಟಲ್ ಮೀಡಿಯಾ ಮೇಲ್ಸೇತುವೆ ಏರುವ ಮಾರ್ಗದಿಂದ ಎಸ್‌ಆರ್‌ಎಸ್ ಕೆಳಸೇತುವೆ ಇಳಿಯುವ ಮಾರ್ಗದವರೆಗೆ ಪೀಣ್ಯ ಎಲಿವೇಟೆಡ್ ಫ್ಲೈಓವರ್‌ನಲ್ಲಿ ವಾಹನ ಸಂಚಾರಕ್ಕೆ ನಿರ್ಬಂಧ ವಿಧಿಸಲಾಗಿದೆ.

ನೆಲಮಂಗಲದಿಂದ ಬೆಂಗಳೂರು ಕಡೆಗೆ ತೆರಳುವ ವಾಹನಗಳು ಕೆನ್ನಮೆಟಲ್ ಫ್ಯಾಕ್ಟರಿ ಬಳಿ ಮೇಲ್ಸೇತುವೆ ಕೆಳಭಾಗದ ರಾಷ್ಟ್ರೀಯ ಹೆದ್ದಾರಿ–4 ಹಾಗೂ ಸರ್ವಿಸ್ ರಸ್ತೆಯ ಮೂಲಕ 8ನೇ ಮೈಲಿ ತಲುಪಬೇಕು.

ಅಲ್ಲಿಂದ ದಾಸರಹಳ್ಳಿ, ಜಾಲಹಳ್ಳಿ ಕ್ರಾಸ್, ಪೀಣ್ಯ ಪೊಲೀಸ್ ಠಾಣೆ ಜಂಕ್ಷನ್, ಎಸ್‌ಆರ್‌ಎಸ್ ಜಂಕ್ಷನ್ ಹಾಗೂ ಗೊರಗುಂಟೆಪಾಳ್ಯ ಮಾರ್ಗವಾಗಿ ಬೆಂಗಳೂರು ನಗರ ಪ್ರವೇಶಿಸಬಹುದಾಗಿದೆ.

ಕಾಮಗಾರಿ ಅವಧಿಯಲ್ಲಿ ವಾಹನ ಸವಾರರು ಸಂಚಾರ ನಿರ್ಬಂಧಗಳನ್ನು ಗಮನಿಸಿ ಪರ್ಯಾಯ ಮಾರ್ಗಗಳನ್ನು ಬಳಸುವಂತೆ ಹಾಗೂ ಸಂಚಾರ ಪೊಲೀಸರ ಸೂಚನೆಗಳನ್ನು ಪಾಲಿಸುವಂತೆ ಬೆಂಗಳೂರು ಸಂಚಾರ ವಿಭಾಗ ಪೊಲೀಸರು ಮನವಿ ಮಾಡಿದ್ದಾರೆ.

## ಮೆಟ್ರೋ ನಿಲ್ದಾಣದಲ್ಲಿ ಹಳಿಗೆ ಜಿಗಿದು ವ್ಯಕ್ತಿ ಆತ್ಮಹತ್ಯೆ

ಬೆಂಗಳೂರು: ರಾಜಧಾನಿ ಬೆಂಗಳೂರಿನ ಸಂಚಾರದ ಪ್ರಮುಖ ಜೀವನಾಡಿಯಾಗಿರುವ ನಮ್ಮ ಮೆಟ್ರೋದಲ್ಲಿ ಆತ್ಮಹತ್ಯೆ ಹಾಗೂ ಆತ್ಮಹತ್ಯೆ ಯತ್ನದ ಘಟನೆಗಳು ಮುಂದುವರಿದಿದ್ದು, ಸೋಮವಾರ ಯೆಲ್ಲೋ ಲೈನ್‌ನ ಹುಸ್ಕೂರ್ ರೋಡ್ ಮೆಟ್ರೋ ನಿಲ್ದಾಣದಲ್ಲಿ ರೈಲಿನ ಹಳಿಗೆ ಜಿಗಿದು 35 ವರ್ಷದ ವ್ಯಕ್ತಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಸೋಮವಾರ ಸಂಜೆ ರೈಲು ನಿಲ್ದಾಣಕ್ಕೆ ಆಗಮಿಸುತ್ತಿದ್ದ ವೇಳೆ ವ್ಯಕ್ತಿಯೊಬ್ಬರು ಹಳಿಗೆ ಹಾರಿದ್ದಾರೆ. ಇದನ್ನು ಗಮನಿಸಿದ ನಿಲ್ದಾಣ ನಿಯಂತ್ರಕ ಕೂಡಲೇ ವಿದ್ಯುತ್ ಸಂಪರ್ಕ ಕಡಿತಗೊಳಿಸಿದರೂ, ವ್ಯಕ್ತಿ ರೈಲಿನ ಕೆಳಗೆ ಸಿಲುಕಿ ಮೃತಪಟ್ಟಿದ್ದಾರೆ. ಬಳಿಕ ಮೃತದೇಹವನ್ನು ಹೊರತೆಗೆಯಲು ಸಿಬ್ಬಂದಿ ಹರಸಾಹಸಪಟ್ಟರು.

ಘಟನೆಯ ಹಿನ್ನೆಲೆಯಲ್ಲಿ ಯೆಲ್ಲೋ ಲೈನ್ ಮೆಟ್ರೋ ಸೇವೆಯಲ್ಲಿ ಕೆಲಕಾಲ ವ್ಯತ್ಯಯ ಉಂಟಾಯಿತು. ಸದ್ಯ ಆರ್.ವಿ. ರಸ್ತೆ ಮತ್ತು ಎಲೆಕ್ಟ್ರಾನಿಕ್ ಸಿಟಿ ಮೆಟ್ರೋ ನಿಲ್ದಾಣಗಳ ನಡುವೆ ಮಾತ್ರ ರೈಲು ಸಂಚಾರ ನಡೆಸಲಾಗುತ್ತಿದೆ. ಘಟನೆ ಕುರಿತು ಹೆಬ್ಬಗೋಡಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

## ಬೆಂಗಳೂರಿನಲ್ಲಿ ಮುಂದುವರೆದ ಒತ್ತುವರಿ ತೆರವು ಕಾರ್ಯ

ಬೆಂಗಳೂರು: ಪಾದಚಾರಿಗಳಿಗೆ ಸುರಕ್ಷಿತ, ಸುಗಮ ಹಾಗೂ ಅಡೆತಡೆಯಿಲ್ಲದ ಸಂಚಾರ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರಿದಿದ್ದು, ಜುಲೈ 1ರಿಂದ 27ರವರೆಗೆ ಒಟ್ಟು 166.50 ಕಿ.ಮೀ. ಉದ್ದದ ಪಾದಚಾರಿ ಮಾರ್ಗವನ್ನು ಅತಿಕ್ರಮಣ ಮುಕ್ತಗೊಳಿಸಲಾಗಿದೆ.

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ನಿರ್ದೇಶನದಂತೆ ಹಾಗೂ ಬೆಂಗಳೂರು ಉತ್ತರ ನಗರ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ಈ ಕಾರ್ಯಾಚರಣೆ ನಡೆಸಲಾಗುತ್ತಿದೆ.

ಜುಲೈ 27ರಂದು ದಾಸರಹಳ್ಳಿ ವಿಭಾಗದ ರಾಮಯ್ಯ ಲೇಔಟ್ ಮುಖ್ಯರಸ್ತೆಯಲ್ಲಿ, ನಾಗಸಂದ್ರ ಮೆಟ್ರೋ ನಿಲ್ದಾಣದ ಪಕ್ಕದಲ್ಲಿ 0.70 ಕಿ.ಮೀ. ಉದ್ದದ ಪಾದಚಾರಿ ಮಾರ್ಗವನ್ನು ಅತಿಕ್ರಮಣ ಮುಕ್ತಗೊಳಿಸಲಾಯಿತು. ಕಾರ್ಯಾಚರಣೆಯಲ್ಲಿ ಎರಡು ತಳ್ಳುವ ಗಾಡಿಗಳು, ನಾಲ್ಕು ಎಸಿ ಶೀಟ್‌ಗಳು, ಮುಂಭಾಗದ ವಿಸ್ತರಣೆಗಳು ಹಾಗೂ ಮೇಲ್ಚಾವಣಿ ವ್ಯವಸ್ಥೆಗಳು, 18 ಮೆಟ್ಟಿಲುಗಳು ಮತ್ತು ಇಳಿಜಾರು ಮಾರ್ಗಗಳು, ಮೂರು ಜಾಹೀರಾತು ಕಂಬಗಳು ಹಾಗೂ ಜಾಹೀರಾತು ಫಲಕಗಳನ್ನು ತೆರವುಗೊಳಿಸಲಾಯಿತು. ಇದೇ ವೇಳೆ 55 ಟನ್



ನಿರ್ಮಾಣ ತ್ಯಾಜ್ಯ ಮತ್ತು ಮಣ್ಣನ್ನು ತೆರವುಗೊಳಿಸಲಾಗಿದೆ.

ಕಾರ್ಯಾಚರಣೆಗೆ ಒಂದು ಜೆಸಿಬಿ, ಒಂದು ಟ್ರ್ಯಾಕ್ಟರ್, ಒಂದು ಟಿಪ್ಪರ್, ಒಂದು ಹಿಟಾಚಿ ಯಂತ್ರ ಹಾಗೂ 16 ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು.

ಜುಲೈ 1ರಿಂದ 27ರವರೆಗೆ ನಡೆದ ಒಟ್ಟಾರೆ ಕಾರ್ಯಾಚರಣೆಯಲ್ಲಿ 166.50 ಕಿ.ಮೀ. ಪಾದಚಾರಿ ಮಾರ್ಗವನ್ನು ಅತಿಕ್ರಮಣ ಮುಕ್ತಗೊಳಿಸಲಾಗಿದ್ದು, 380 ಅಂಗಡಿಗಳು ಮತ್ತು ಪೆಟ್ಟಿ ಅಂಗಡಿಗಳು, 596 ತಳ್ಳುವ ಗಾಡಿಗಳು, 1,294 ಎಸಿ ಶೀಟ್‌ಗಳು, ಮುಂಭಾಗದ ವಿಸ್ತರಣೆಗಳು ಹಾಗೂ ಮೇಲ್ಚಾವಣಿ ವ್ಯವಸ್ಥೆಗಳು, 1,143 ಮೆಟ್ಟಿಲುಗಳು ಮತ್ತು ಇಳಿಜಾರು ಮಾರ್ಗಗಳು, 1,280 ಜಾಹೀರಾತು ಕಂಬಗಳು ಹಾಗೂ ಜಾಹೀರಾತು ಫಲಕಗಳು ಮತ್ತು 43 ತಾತ್ಕಾಲಿಕ ಹಾಗೂ ಶಾಶ್ವತ ಶೆಡ್‌ಗಳನ್ನು ತೆರವುಗೊಳಿಸಲಾಗಿದೆ.

ಇದರ ಜೊತೆಗೆ 1,293.20 ಟನ್ ನಿರ್ಮಾಣ ತ್ಯಾಜ್ಯ ಮತ್ತು ಮಣ್ಣನ್ನು ತೆರವುಗೊಳಿಸಲಾಗಿದ್ದು, ಎಂಟು ಕಿ.ಮೀ. ಉದ್ದದ ಪಾದಚಾರಿ ಮಾರ್ಗವನ್ನು ದುರಸ್ತಿ ಮಾಡಲಾಗಿದೆ.

ಪಾದಚಾರಿ ಮಾರ್ಗಗಳನ್ನು ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸುವುದು, ಅತಿಕ್ರಮಣಗಳನ್ನು ಪರಿಣಾಮಕಾರಿಯಾಗಿ ತೆರವುಗೊಳಿಸುವುದು ಹಾಗೂ ನಗರದಲ್ಲಿ ಸುರಕ್ಷಿತ ಮತ್ತು ಸುಗಮ ಪಾದಚಾರಿ ಸಂಚಾರಕ್ಕೆ ಅಗತ್ಯ ಮೂಲಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಬೆಂಗಳೂರು ಉತ್ತರ ನಗರ ಪಾಲಿಕೆಯು ಇಂತಹ ವಿಶೇಷ ಕಾರ್ಯಾಚರಣೆಗಳನ್ನು ಮುಂದುವರಿಸಲಿದೆ.

ಭಾರತ ಸಾರಥಿ
27/07/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಶ್ರೀಮನ್ಮಾಧವತೀರ್ಥ ಮಠದ ಪೀಠಾಧಿಪತಿಗಳಾದ ಶ್ರೀಶ್ರೀ108ಶ್ರೀ ವಿದ್ಯಾ ವಲ್ಲಭ ಮಾಧವ ತೀರ್ಥ ಶ್ರೀಪಾದಂಗಳವರಿಂದ ತಂಬಿಹಳ್ಳಿಯಲ್ಲಿ ನೆರೆದ ನೂರಾರು ಭಕ್ತಾದಿಗಳಿಗೆ ಆಷಾಢ ಶುದ್ಧ ಏಕಾದಶೀಯ ಪರ್ವಕಾಲದಲ್ಲಿ ತಪ್ತಮುದ್ರಾಧಾರಣೆ ನೆರವೇರಿತು.

# ಕಾರ್ಗಿಲ್ ವಿಜಯ್ ದಿವಸ್: ಕಾರ್ಗಿಲ್ ಸಮರ ಸೇನಾನಿಗಳಿಗೆ ಸನ್ಮಾನ





ಬೆಂಗಳೂರು: ಕಾರ್ಗಿಲ್ ವಿಜಯ್ ದಿನದ ಹಿನ್ನೆಲೆಯಲ್ಲಿ ಇದು ನಿಮ್ಮ ವಾಹಿನಿ ಕಲಾ ವೇದಿಕೆ ಹಾಗೂ ಸುವರ್ಣ ಕರ್ನಾಟಕ ಡಿಜಿಟಲ್ ಮೀಡಿಯಾ ಅಸೋಸಿಯೇಷನ್ ಸಹಯೋಗದಲ್ಲಿ ನಗರದ ನಯನ ಸಭಾಂಗಣದಲ್ಲಿ ಕಾರ್ಗಿಲ್ ಯುದ್ಧದಲ್ಲಿ ಹೋರಾಡಿದ ವೀರ ಸೇನಾನಿಗಳನ್ನು ಗೌರವಿಸಲಾಯಿತು.

ಡಾಕ್ಟರ್ಸ್ ಡೇ, ಪತ್ರಿಕೋದ್ಯಮ ದಿನ ಹಾಗೂ ಕಾರ್ಗಿಲ್ ವಿಜಯ್ ದಿವಸ್ ಅಂಗವಾಗಿ ಆಯೋಜಿಸಿದ್ದ ಸಮಾರಂಭದಲ್ಲಿ ಕಾರ್ಗಿಲ್ ಸಮರ ವೀರನ್ನು ಸನ್ಮಾನಿಸಲಾಯಿತು.

ಮಾಜಿ ಸೈನಿಕರ ವೇದಿಕೆಯ ಅಧ್ಯಕ್ಷ ಬಿ.ಕೆ. ಕುಮಾರ ಸ್ವಾಮಿ ಮಾತನಾಡಿ, 1999 ರ ಇದೇ ಅವಧಿಯಲ್ಲಿ ನಾವೆಲ್ಲಾ ಕಾರ್ಗಿಲ್ ಸಮರ ಭೂಮಿಯಲ್ಲಿ ಹೋರಾಟ ಮಾಡುತ್ತಿದ್ದೇವು.

ದೇಶ ರಕ್ಷಣೆಗಾಗಿ ನಾವು ಟೊಂಕಕಟ್ಟಿ ನಿಂತೆವು. ಇದು ಇತಿಹಾಸದಲ್ಲಿ ಅಚ್ಚಳಿಯದೇ ಉಳಿಯುವ ದಿನಗಳು ಎಂದು ಸ್ಮರಿಸಿಕೊಂಡರು.

ಸುವರ್ಣ ಕರ್ನಾಟಕ ಡಿಜಿಟಲ್ ಮೀಡಿಯಾ ಅಸೋಸಿಯೇಷನ್ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ ಮಾತನಾಡಿ, ದೇಶದ ಗಡಿ ಕಾಪಾಡುವ ಯೋಧರು, "ವೈದ್ಯೋ ನಾರಾಯಣೋ ಹರಿಃ" ಎಂಬ ಮಾತಿಗೆ ತಕ್ಕಂತೆ ಜನರ ಆರೋಗ್ಯ ಕಾಪಾ

## ಶ್ರೀ ಸ್ನೇಹ ಕಾಂಬೈನ್ಸ್ ಬ್ಯಾನರ್‌ನಡಿ "ಈ ಪ್ರೀತಿಗಾಗಿ" ಚಿತ್ರದ
# ಸಾಹಸ ದೃಶ್ಯಗಳ ಅದ್ದೂರಿ ಚಿತ್ರೀಕರಣ



ಬೆಂಗಳೂರು: ನಗರದ ಫ್ರೀಡಂ ಪಾರ್ಕ್‌ನಲ್ಲಿ ಶ್ರೀ ಸ್ನೇಹ ಕಾಂಬೈನ್ಸ್ ಬ್ಯಾನರ್‌ನಡಿ ನಿರ್ಮಾಣವಾಗುತ್ತಿರುವ ಹೊಸ ಕನ್ನಡ ಚಲನಚಿತ್ರ "ಈ ಪ್ರೀತಿಗಾಗಿ" ಚಿತ್ರದ ಸಾಹಸ ದೃಶ್ಯಗಳ ಚಿತ್ರೀಕರಣ ಅದ್ದೂರಿಯಾಗಿ ನಡೆಯಿತು.

ಕಥೆ, ಚಿತ್ರ ಕಥೆ,ನಿರ್ದೇಶಕ ಡಿ.ಜಿ ಉಮೇಶ್ ಗೌಡ ನಿರ್ದೇಶಿಸುತ್ತಿದ್ದು, ಪ್ರೇಮಕಥೆಯೊಂದಿಗೆ ವಿಭಿನ್ನ ಕಥಾವಸ್ತುವನ್ನು ಒಳಗೊಂಡಿರುವ ಚಿತ್ರವಾಗಿ ಮೂಡಿಬರುತ್ತಿದೆ.

ಚಿತ್ರದಲ್ಲಿ ಸಂತೋಷ್ ನಾಯಕನಾಗಿ ಹಾಗೂ ದೀಪ್ತಿ ನಾಯಕಿಯಾಗಿ ಅಭಿನಯಿಸುತ್ತಿದ್ದಾರೆ. ಪ್ರಮುಖ ಪಾತ್ರಗಳಲ್ಲಿ ಸುಚರಿತಾ, ಸಾಧು ಕೋಕಿಲ, ಶೋಭ್‌ರಾಜ್, ಜೈಲರ್ ಪಾತ್ರದಲ್ಲಿ ಗಂಡಸಿ ಸದಾನಂದ್,ಕರಿಸುಬ್ಬು ಹಾಗೂ ವಿಕ್ಟರಿ ವಾಸು ಅಭಿನಯಿಸುತ್ತಿದ್ದು, ಚಿತ್ರದ ಮೇಲಿನ ನಿರೀಕ್ಷೆಯನ್ನು ಹೆಚ್ಚಿಸಿದ್ದಾರೆ.

ಚಿತ್ರದ ನಿರ್ಮಾಪಕರಾಗಿ ಶೇಖರ್ ಕಲೇರಿ ಕಾರ್ಯನಿರ್ವಹಿಸುತ್ತಿದ್ದು, ಛಾಯಾಗ್ರಹಕ ಬಾಲು, ಸಂಗೀತ ನಿರ್ದೇಶಕರಾಗಿ ಸುರಾಜ್ ವಾಸುದೇವ್ ಸಂಗೀತ ಸಂಯೋಜನೆ ಮಾಡುತ್ತಿದ್ದಾರೆ.

ಸಾಹಸ ದೃಶ್ಯಗಳನ್ನು ಚಿನ್ನಯ್ಯ ಮಾಸ್ಟರ್ ನಿರ್ದೇಶಿಸಿದ್ದು, ನೃತ್ಯ ನಿರ್ದೇಶನವನ್ನು ಆರ್ಯನ್ ರೋಷನ್ ವಹಿಸಿಕೊಂಡಿದ್ದಾರೆ. ನಿರ್ಮಾಣ ನಿರ್ವಹಣೆಯ ಜವಾಬ್ದಾರಿಯನ್ನು ಮಂಜುನಾಥ್ ದೇವಾಂಗಿ ನಿರ್ವಹಿಸುತ್ತಿದ್ದಾರೆ.

ಪ್ರೇಮ, ಭಾವನೆ, ಆಕ್ಷನ್ ಹಾಗೂ ಮನರಂಜನೆಯ ಅಂಶಗಳನ್ನು ಒಳಗೊಂಡಿರುವ "ಈ ಪ್ರೀತಿಗಾಗಿ" ಚಿತ್ರವು ಕನ್ನಡ ಸಿನಿರಸಿಕರಿಗೆ ಹೊಸ ಅನುಭವ ನೀಡುವ ನಿರೀಕ್ಷೆ ಮೂಡಿಸಿದ್ದು, ಚಿತ್ರವು ಅತಿ ಶೀಘ್ರದಲ್ಲೇ ತೆರೆಯ ಮೇಲೆ ಬರಲಿದೆ, ಚಿತ್ರದ ಮುಂದಿನ ಹಂತದ ಚಿತ್ರೀಕರಣ ಶೀಘ್ರದಲ್ಲೇ ವಿವಿಧ ಸ್ಥಳಗಳಲ್ಲಿ ನಡೆಯಲಿದೆ ಎಂದು ಚಿತ್ರತಂಡ ತಿಳಿಸಿದೆ.

## ಭಾರತದಲ್ಲಿ ಅಲ್ಮಾ ಹಾರ್ಮನಿ ಬಿಡುಗಡೆ ಮಾಡಿದ ಅಲ್ಮಾ ಲೇಸರ್ಸ್

ಬೆಂಗಳೂರು



ಶಕ್ತಿ ಆಧಾರಿತ ವೈದ್ಯಕೀಯ ಸೌಂದರ್ಯ ತಂತ್ರಜ್ಞಾನ ಕ್ಷೇತ್ರದಲ್ಲಿ ಜಾಗತಿಕ ಮುಂಚೂಣಿ ಸಂಸ್ಥೆಯಾಗಿರುವ ಅಲ್ಮಾ ಲೇಸರ್ಸ್, ತನ್ನ ಅತ್ಯಾಧುನಿಕ ಬಹು–ಉದ್ದೇಶದ ವೇದಿಕೆ ಅಲ್ಮಾ ಹಾರ್ಮನಿ ಅನ್ನು ಭಾರತದಲ್ಲಿ ಅಧಿಕೃತವಾಗಿ ಬಿಡುಗಡೆ ಮಾಡಿದೆ.

ಈ ಪ್ರಯುಕ್ತ ನವದೆಹಲಿಯಲ್ಲಿ ವಿಶೇಷ ಮಾಧ್ಯಮ ಕಾರ್ಯಕ್ರಮ ಆಯೋಜಿಸಲಾಗಿದ್ದು, ಪ್ರಮುಖ ಚರ್ಮರೋಗ ತಜ್ಞರು, ಸೌಂದರ್ಯ ಚಿಕಿತ್ಸಾ ವೈದ್ಯರು, ಉದ್ಯಮ ಪರಿಣಿತರು ಹಾಗೂ ಮಾಧ್ಯಮ ಪ್ರತಿನಿಧಿಗಳು ಭಾಗವಹಿಸಿದ್ದರು.

ಭಾರತದಲ್ಲಿ ಶಸ್ತ್ರಚಿಕಿತ್ಸೆಯ ಅಗತ್ಯವಿಲ್ಲದ ಸೌಂದರ್ಯ ಚಿಕಿತ್ಸೆಗಳ ಬೇಡಿಕೆ ನಿರಂತರವಾಗಿ ಹೆಚ್ಚುತ್ತಿದೆ. ಕಡಿಮೆ ಚೇತರಿಕೆ ಅವಧಿಯಲ್ಲಿ ಪರಿಣಾಮಕಾರಿ ಚಿಕಿತ್ಸೆ ಪಡೆಯಲು ರೋಗಿಗಳು ಬಯಸುತ್ತಿರುವ ಸಂದರ್ಭದಲ್ಲಿ, ಚಿಕಿತ್ಸಾ ಕೇಂದ್ರಗಳು ಸಹ ಬಹುಮುಖ, ವಿಶ್ವಾಸಾರ್ಹ ಹಾಗೂ ಸ್ಥಿರ ಫಲಿತಾಂಶಗಳನ್ನು ನೀಡುವ ಆಧುನಿಕ ತಂತ್ರಜ್ಞಾನಗಳತ್ತ ಹೆಚ್ಚಿನ ಆಸಕ್ತಿ ತೋರುತ್ತಿವೆ.

"ಭಾರತವು ಇಂದು ಸೌಂದರ್ಯ ವೈದ್ಯಕೀಯ ಕ್ಷೇತ್ರದಲ್ಲಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಮಾರುಕಟ್ಟೆಗಳಲ್ಲಿ ಒಂದಾಗಿದೆ. ವೈದ್ಯರಿಗೆ ವಿಶ್ವಾಸಾರ್ಹ, ಬಳಸಲು ಸುಲಭ ಹಾಗೂ ತಮ್ಮ ದೈನಂದಿನ ವೈದ್ಯಕೀಯ ಕಾರ್ಯದಲ್ಲಿ ಸುಲಭವಾಗಿ ಅಳವಡಿಸಿಕೊಳ್ಳಬಹುದಾದ ತಂತ್ರಜ್ಞಾನದ ಅಗತ್ಯವಿದೆ. ಅಲ್ಮಾ ಹಾರ್ಮನಿ ಅನ್ನು ಇದೇ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಅಭಿವೃದ್ಧಿಪಡಿಸಲಾಗಿದೆ. ವಿವಿಧ ರೀತಿಯ ಚರ್ಮಗಳಿಗೆ ಸುರಕ್ಷಿತ ಹಾಗೂ ಅತ್ಯುತ್ತಮ ಚಿಕಿತ್ಸಾ ಫಲಿತಾಂಶಗಳನ್ನು ನೀಡುವ ಉದ್ದೇಶದಿಂದ ಇದನ್ನು ವಿನ್ಯಾಸಗೊಳಿಸಲಾಗಿದೆ" ಎಂದು ಅಲ್ಮಾ ಲೇಸರ್ಸ್ ಸಂಸ್ಥೆಯ ಮಾರಾಟ ಮತ್ತು ಸೇವಾ ವಿಭಾಗದ ನಿರ್ದೇಶಕ ಮನೋಜ್ ಗೊಗಿಯಾ ಹೇಳಿದರು.

## ಕುಶಾಲನಗರದಲ್ಲಿ ರಾಯಲ್‌ಓಕ್ ಫರ್ನಿಚರ್ ಮಳಿಗೆ

ಕುಶಾಲನಗರ



ಭಾರತದ ನಂಬರ್ ಒನ್ ಪೀಠೋಪಕರಣ ಬ್ರಾಂಡ್ ಆಗಿರುವ ರಾಯಲ್‌ಓಕ್ ಫರ್ನಿಚರ್, ಕರ್ನಾಟಕದ ಕುಶಾಲನಗರದಲ್ಲಿ ತನ್ನ ಅಂತಾರಾಷ್ಟ್ರೀಯ ಗುಣಮಟ್ಟದ ಮಳಿಗೆಗೆ ಚಾಲನೆ ನೀಡಿದೆ.

ಮಡಿಕೇರಿ ಕ್ಷೇತ್ರದ ಗೌರವಾನ್ವಿತ ಶಾಸಕ ಮಂತರ್ ಗೌಡ, ಕೊಡಗು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿಯ ಅಧ್ಯಕ್ಷ ಬಿ. ಆರ್. ನಾಗೇಂದ್ರಪ್ರಸಾದ್, ಚಾರ್ಟರ್ಡ್ ಅಕೌಂಟೆಂಟ್ ಮತ್ತು ರೋಟರಿ ಅಧ್ಯಕ್ಷ ಸಿಎ ರುದ್ರೇಶ್ ಪಟೇಲ್, ಕುಶಾಲನಗರದ ಮಲ್ಲಿಗೆ ಗ್ಲಾಸ್ ಹೌಸ್‌ನ ಫ್ರಾಂಚೈಸಿ ಪಾಲುದಾರ ಶ್ರೀ ಮೋಹನ್, ರಾಯಲ್‌ಓಕ್ ಇನ್‌ಕಾರ್ಪೊರೇಷನ್ ಪ್ರೈವೇಟ್ ಲಿಮಿಟೆಡ್‌ನ ಅಧ್ಯಕ್ಷ ವಿಜಯ್ ಸುಬ್ರಮಣಿಯಂ ಮತ್ತು ರಾಯಲ್‌ಓಕ್ ಇನ್‌ಕಾರ್ಪೊರೇಷನ್ ಪ್ರೈವೇಟ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ಮಥನ್ ಸುಬ್ರಮಣಿಯಂ ನೂತನ ಮಳಿಗೆಗೆ ಚಾಲನೆ ನೀಡಿದರು. 8,000 ಚದರ ಅಡಿ ವಿಸ್ತೀರ್ಣದಲ್ಲಿರುವ ಈ ಮಳಿಗೆಯು ಮನೆಯ ಪ್ರತಿಯೊಂದು ಭಾಗಕ್ಕೂ ಅಗತ್ಯ ಪೀಠೋಪಕರಣಗಳ ವ್ಯಾಪಕ ಶ್ರೇಣಿಯನ್ನು ಹೊಂದಿದೆ. ವಾಸದ ಕೋಣೆಗಳು, ಮಲಗುವ ಕೋಣೆಗಳು, ಊಟದ ಹಾಲ್, ಅಧ್ಯಯನ ಮತ್ತು ಕಚೇರಿ, ಹೊರಾಂಗಣ, ಗೃಹಾಲಂಕಾರ, ಹಾಸಿಗೆಗಳು ಮುಂತಾದ ಅಗತ್ಯ ಪಿಠೋಪಕರಣಗಳು ಇಲ್ಲಿ ಲಭ್ಯವಿದೆ.

## ಬೆಂಗಳೂರಿನಲ್ಲಿ ಭಾರತದ ಅತಿದೊಡ್ಡ ಡ್ರೋನ್ ಬ್ಯಾಟರಿ ತಯಾರಿಕಾ ಘಟಕ ಸ್ಥಾಪನೆಗೆ ಸಜ್ಜು

ಬೆಂಗಳೂರು: ಮುಂದಿನ ಪೀಳಿಗೆಯ ಡ್ರೋನ್ ಬ್ಯಾಟರಿ ತಂತ್ರಜ್ಞಾನ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಭಾರತೀಯ ಡೀಪ್‌ಟೆಕ್ ಸಂಸ್ಥೆ ಡ್ರೀಮ್‌ಫ್ಲೈ ಇನ್ನೋವೇಷನ್ಸ್, ದೇಶದ ಡ್ರೋನ್ ಕ್ಷೇತ್ರಕ್ಕೆ ಮತ್ತಷ್ಟು ಉತ್ತೇಜನ ನೀಡುವ ಉದ್ದೇಶದಿಂದ ಬೆಂಗಳೂರಿನಲ್ಲಿ ಬೃಹತ್ ವಿಮಾನಯಾನ ಬ್ಯಾಟರಿ ತಯಾರಿಕಾ ಘಟಕ ಸ್ಥಾಪಿಸುವುದಾಗಿ ಘೋಷಿಸಿದೆ.

ಉತ್ತರ ಬೆಂಗಳೂರಿನಲ್ಲಿ 40 ಸಾವಿರ ಚದರ ಅಡಿ ವಿಸ್ತೀರ್ಣದಲ್ಲಿ ಈ ನೂತನ ಘಟಕವನ್ನು ಸ್ಥಾಪಿಸಲಾಗುತ್ತಿದ್ದು, ಆರಂಭಿಕ ಹಂತದಲ್ಲಿ ವಾರ್ಷಿಕ 100 ಮೆಗಾವ್ಯಾಟ್ ಅವರ್ ಉತ್ಪಾದನಾ ಸಾಮರ್ಥ್ಯ ಹೊಂದಿರಲಿದೆ. ಹಂತ ಹಂತವಾಗಿ ಉತ್ಪಾದನಾ ಸಾಮರ್ಥ್ಯವನ್ನು 200 ಮೆಗಾವ್ಯಾಟ್ ಅವರ್‌ಗೆ ವಿಸ್ತರಿಸುವ ಯೋಜನೆ ಇದೆ. ಡ್ರೋನ್ ಕ್ಷೇತ್ರಕ್ಕೆ ಮೀಸಲಾದ ದೇಶದ ಅತಿದೊಡ್ಡ ಬ್ಯಾಟರಿ ತಯಾರಿಕಾ ಘಟಕಗಳ ಪೈಕಿ ಇದು ಒಂದಾಗಲಿದೆ ಎಂದು ಸಂಸ್ಥೆ ತಿಳಿಸಿದೆ.

ನೂತನ ಘಟಕದಲ್ಲಿ ರಕ್ಷಣಾ ಕ್ಷೇತ್ರ, ಕಣ್ಗಾವಲು, ಗಡಿ ತಪಾಸಣೆ, ಕೃಷಿ ಸಿಂಪಡಣೆ, ಸರಕು ಸಾಗಣೆ ಹಾಗೂ ಭವಿಷ್ಯದ ವಾಯು ಟ್ಯಾಕ್ಸಿಗಳಂತಹ ಸುಧಾರಿತ ವಾಯು ಸಂಚಾರ ವೇದಿಕೆಗಳಿಗೆ ಅಗತ್ಯವಿರುವ ಅತ್ಯಾಧುನಿಕ ಬ್ಯಾಟರಿಗಳನ್ನು ತಯಾರಿಸಲಾಗುತ್ತದೆ.

ಚಾಲಕರಹಿತ ವಿಮಾನ ವ್ಯವಸ್ಥೆಗಳಲ್ಲಿ ಬ್ಯಾಟರಿ ಅತ್ಯಂತ ಪ್ರಮುಖ ಪಾತ್ರ ವಹಿಸುವ ಹಿನ್ನೆಲೆಯಲ್ಲಿ, ದೇಶೀಯವಾಗಿ ಬ್ಯಾಟರಿ ಉತ್ಪಾದನೆ ಆರಂಭಿಸುವುದರಿಂದ ಭಾರತದ ಡ್ರೋನ್ ಪೂರೈಕೆ ಸರಪಳಿಯನ್ನು ಮತ್ತಷ್ಟು ಬಲಪಡಿಸಲು ಸಾಧ್ಯವಾಗಲಿದೆ.

## 'ಫಾರ್ಮಾ ಪ್ರೊ ಅಂಡ್ ಪ್ಯಾಕ್ ಎಕ್ಸ್‌ಪೋ 2026'

ಹೈದರಾಬಾದ್

ಮೆಸ್ಸೆ ಮ್ಯೂನ್ಚೆನ್ ಇಂಡಿಯಾ ಮತ್ತು ಇಂಡಿಯನ್ ಫಾರ್ಮಾ ಮೆಷಿನರಿ ಮ್ಯಾನುಫ್ಯಾಕ್ಚರರ್ಸ್ ಅಸೋಸಿಯೇಷನ್ (ಐಪಿಎಂಎಂಎ) ಜಂಟಿಯಾಗಿ ಹೈದರಾಬಾದ್‌ನ ಹೈಟೆಕ್ಸ್‌ನಲ್ಲಿ ಆಯೋಜಿಸಿದ್ದ 'ಫಾರ್ಮಾ ಪ್ರೊ ಅಂಡ್ ಪ್ಯಾಕ್ ಎಕ್ಸ್‌ಪೋ 2026' ಉದ್ಯಮದ ನಿರೀಕ್ಷೆಗಳನ್ನು ಮೀರಿ ಅತ್ಯಂತ ಯಶಸ್ವಿಯಾಗಿ ಮುಕ್ತಾಯಗೊಂಡಿದ್ದು, ದಾಖಲೆಯ ಜಾಗತಿಕ ಭಾಗವಹಿಸುವಿಕೆ ಮತ್ತು ಬಲವಾದ ವಾಣಿಜ್ಯ ವಹಿವಾಟಿಗೆ ಸಾಕ್ಷಿಯಾಗಿದೆ.

ಹೊಸ ತಂತ್ರಜ್ಞಾನಗಳ ಅನಾವರಣ, ನವೀನ ಉತ್ಪನ್ನಗಳ ಬಿಡುಗಡೆ, ಉದ್ಯಮದ ಪ್ರಮುಖರ ನಡುವಿನ ವ್ಯಾಪಾರ ಸಭೆಗಳು ಹಾಗೂ ಜ್ಞಾನ ವಿನಿಮಯಕ್ಕೆ ವೇದಿಕೆಯಾದ ಈ ಬೃಹತ್ ಪ್ರದರ್ಶನವು ಈವರೆಗಿನ ಅತಿದೊಡ್ಡ ಆವೃತ್ತಿಯಾಗಿ ಹೊರಹೊಮ್ಮಿದೆ. ಹೈಟೆಕ್ಸ್‌ನ ಎಲ್ಲಾ ಏಳು ಹಾಲ್‌ಗಳನ್ನು ಒಳಗೊಂಡಂತೆ 35,000 ಚದರ ಮೀಟರ್‌ಗಿಂತಲೂ ಹೆಚ್ಚಿನ ವಿಸ್ತೀರ್ಣದಲ್ಲಿ ನಡೆದ ಪ್ರದರ್ಶನದಲ್ಲಿ 353 ಬ್ರ್ಯಾಂಡ್‌ಗಳು ತಮ್ಮ ಉತ್ಪನ್ನಗಳು ಮತ್ತು ತಂತ್ರಜ್ಞಾನಗಳನ್ನು ಪ್ರದರ್ಶಿಸಿದವು. ಮೂರು ದಿನಗಳ ಅವಧಿಯಲ್ಲಿ ಒಟ್ಟು 19,206 ಮಂದಿ ಪ್ರದರ್ಶನಕ್ಕೆ ಭೇಟಿ ನೀಡಿದರು.

ಪ್ರದರ್ಶನದಲ್ಲಿ 30ಕ್ಕೂ ಹೆಚ್ಚು ದೇಶಗಳ ಪ್ರತಿನಿಧಿಗಳು ಭಾಗವಹಿಸಿದ್ದು, 350ಕ್ಕೂ ಹೆಚ್ಚು ಆಹ್ವಾನಿತ ಖರೀದಿದಾರರು ಪಾಲ್ಗೊಂಡರು. ಇದರೊಂದಿಗೆ 1,000ಕ್ಕೂ ಹೆಚ್ಚು ಖರೀದಿದಾರರು ಮತ್ತು ಮಾರಾಟಗಾರರ ನಡುವಿನ ಸಭೆಗಳು ನಡೆದವು. ಮೂರು ದಿನಗಳ ಕಾಲ ನಡೆದ ವಿವಿಧ ಸಮ್ಮೇಳನಗಳು ಮತ್ತು ಜ್ಞಾನ ಹಂಚಿಕೆ ಕಾರ್ಯಕ್ರಮಗಳು ಫಾರ್ಮಾ ಉತ್ಪಾದನಾ ಕ್ಷೇತ್ರದ ಪ್ರಸ್ತುತ ಸವಾಲುಗಳು, ತಾಂತ್ರಿಕ ಬೆಳವಣಿಗೆಗಳು ಹಾಗೂ ಭವಿಷ್ಯದ ಅವಕಾಶಗಳ ಕುರಿತು ಚರ್ಚೆಗೆ ವೇದಿಕೆ ಒದಗಿಸಿದವು.

ಹಿಂದಿನ ಆವೃತ್ತಿಗೆ ಹೋಲಿಸಿದರೆ ಈ ಬಾರಿ ಪ್ರದರ್ಶನದ ಸ್ಥಳದಲ್ಲಿ ಶೇ.30ರಷ್ಟು ಹೆಚ್ಚಳವಾಗಿದ್ದು, ಸಂದರ್ಶಕರ ಸಂಖ್ಯೆಯಲ್ಲಿ ಶೇ.100ಕ್ಕಿಂತಲೂ ಹೆಚ್ಚಿನ ಏರಿಕೆ ಕಂಡುಬಂದಿದೆ.

ಕೆನಡಾ, ಜರ್ಮನಿ, ಇಟಲಿ, ಜಪಾನ್, ಸಿಂಗಾಪುರ, ಅಮೆರಿಕ, ಬ್ರಿಟನ್, ಯುಎಇ ಮತ್ತು ದಕ್ಷಿಣ ಕೊರಿಯಾ ಸೇರಿದಂತೆ 30ಕ್ಕೂ ಹೆಚ್ಚು ದೇಶಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

## ಹೆಪಟೈಟಿಸ್ ತಡೆಗೆ ಮುಂಚಿತ ತಪಾಸಣೆ ಅತ್ಯಗತ್ಯ: ಕೇರ್ ಹೆಲ್ತ್ ಇನ್ಶೂರೆನ್ಸ್

ಬೆಂಗಳೂರು

ವಿಶ್ವ ಹೆಪಟೈಟಿಸ್ ದಿನದ ಅಂಗವಾಗಿ ಕೇರ್ ಹೆಲ್ತ್ ಇನ್ಶೂರೆನ್ಸ್ ಸಾರ್ವಜನಿಕ ಜಾಗೃತಿ ಅಭಿಯಾನ ಹಮ್ಮಿಕೊಂಡಿದ್ದು, ಯಕೃತ್ತಿಗೆ ಸಂಬಂಧಿಸಿದ ಗಂಭೀರ ಕಾಯಿಲೆಗಳು ಹಾಗೂ ತಡೆಯಬಹುದಾದ ಸಾವುಗಳಿಗೆ ಪ್ರಮುಖ ಕಾರಣವಾಗಿರುವ ವೈರಲ್ ಹೆಪಟೈಟಿಸ್ ನಿಯಂತ್ರಣಕ್ಕೆ ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸುವಂತೆ ಕರೆ ನೀಡಿದೆ. ಹೆಪಟೈಟಿಸ್ ಕುರಿತು ಮುಂಚಿತವಾಗಿ ತಪಾಸಣೆ ಮಾಡಿಸಿಕೊಳ್ಳುವುದು, ಅಗತ್ಯವಿರುವವರಿಗೆ ಲಸಿಕೆ ಪಡೆಯುವುದು ಹಾಗೂ ಸೂಕ್ತ ವೈದ್ಯಕೀಯ ಚಿಕಿತ್ಸೆ ಪಡೆಯುವುದಕ್ಕೆ ಆದ್ಯತೆ ನೀಡಬೇಕು ಎಂದು ಸಂಸ್ಥೆ ತಿಳಿಸಿದೆ.

ಭಾರತದಲ್ಲಿ ಹೆಪಟೈಟಿಸ್ ಪ್ರಕರಣಗಳ ಸಂಖ್ಯೆ ಗಣನೀಯವಾಗಿ ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಆರಂಭಿಕ ಹಂತದಲ್ಲಿ ಯಾವುದೇ ಸ್ಪಷ್ಟ ರೋಗಲಕ್ಷಣಗಳನ್ನು ತೋರಿಸದೆ ಇರುವುದರಿಂದ ಹೆಪಟೈಟಿಸ್ ಅನ್ನು 'ಮೂಕ ಕಾಯಿಲೆ' ಎಂದು ಕರೆಯಲಾಗುತ್ತದೆ. ಪರಿಣಾಮವಾಗಿ, ಯಕೃತ್ತಿಗೆ ಹೆಚ್ಚಿನ ಪ್ರಮಾಣದಲ್ಲಿ ಹಾನಿಯಾದ ಬಳಿಕವೇ ಅನೇಕ ಪ್ರಕರಣಗಳು ಪತ್ತೆಯಾಗುತ್ತವೆ.


ರೋಗಿಗಳು ವೈದ್ಯರನ್ನು ಸಂಪರ್ಕಿಸುವ ವೇಳೆಗೆ ಸೋಂಕು ತೀವ್ರಗೊಂಡು ಯಕೃತ್ತಿನ ಸಿರೋಸಿಸ್, ಯಕೃತ್ತಿನ ವೈಫಲ್ಯ ಅಥವಾ ಯಕೃತ್ತಿನ ಕ್ಯಾನ್ಸರ್‌ನಂತಹ ಗಂಭೀರ ಹಂತಗಳನ್ನು ತಲುಪಿರುವ ಸಾಧ್ಯತೆ ಇರುತ್ತದೆ. ಇಂತಹ ಮುಂದುವರಿದ ಹಂತಗಳಲ್ಲಿ ಚಿಕಿತ್ಸೆಯು ಹೆಚ್ಚು ಸಂಕೀರ್ಣವಾಗುವುದರ ಜೊತೆಗೆ ದೀರ್ಘಕಾಲೀನ ಮತ್ತು ವೆಚ್ಚದಾಯಕವಾಗಬಹುದು.

ಹೀಗಾಗಿ, ಗಂಭೀರ ಆರೋಗ್ಯ ಸಮಸ್ಯೆಗಳು ಹಾಗೂ ಪ್ರಾಣಾಪಾಯವನ್ನು ತಪ್ಪಿಸಲು ಹೆಪಟೈಟಿಸ್ ಅನ್ನು ಆರಂಭಿಕ ಹಂತದಲ್ಲೇ ಪತ್ತೆಹಚ್ಚುವುದು ಅತ್ಯಂತ ಮುಖ್ಯವಾಗಿದೆ.

## 20 ಒಟಿಟಿ ವೇದಿಕೆಗಳ ವೀಕ್ಷಣೆಗೆ ವಿ ಹೊಸ ಮನರಂಜನಾ ಪ್ಯಾಕ್ ಪರಿಚಯ

ಮೈಸೂರು

ದೇಶದ ಪ್ರಮುಖ ದೂರಸಂಪರ್ಕ ಸೇವಾ ಸಂಸ್ಥೆ ವಿ ತನ್ನ ವಿಷಯ ಸಂಗ್ರಹ ವೇದಿಕೆಯಾದ 'ಮೂವೀಸ್ ಆಂಡ್ ಟಿವಿ' ಮೂಲಕ ಒಂದೇ ರೀಚಾರ್ಜ್‌ನಲ್ಲಿ 20 ಪ್ರಮುಖ ಒಟಿಟಿ ವೇದಿಕೆಗಳು, 200ಕ್ಕೂ ಹೆಚ್ಚು ನೇರ ಪ್ರಸಾರದ ಟಿವಿ ಚಾನೆಲ್‌ಗಳು, 30 ಜಿಬಿ ದತ್ತಾಂಶ ಹಾಗೂ ಅನಿಯಮಿತ 5ಜಿ ದತ್ತಾಂಶ ಸೌಲಭ್ಯ ಒದಗಿಸುವ ಹೊಸ ಮನರಂಜನಾ ಪ್ಯಾಕ್ ಅನ್ನು ಪರಿಚಯಿಸಿದೆ. ಕೇವಲ ರೂ.200 ಬೆಲೆಯ ಈ ಹೊಸ 'ಮೂವೀಸ್ ಆಂಡ್ ಟಿವಿ' ಪ್ರೀಪೇಯ್ಡ್ ಪ್ಯಾಕ್ 28 ದಿನಗಳ ಊರ್ಜಿತ ಅವಧಿಯನ್ನು ಹೊಂದಿದೆ.




ಹಲವು ಒಟಿಟಿ ಚಂದಾದಾರಿಕೆಗಳನ್ನು ಪ್ರತ್ಯೇಕವಾಗಿ ಪಡೆಯುವ ಅಗತ್ಯವನ್ನು ನಿವಾರಿಸುವ ಉದ್ದೇಶದಿಂದ ಈ ಪ್ಯಾಕ್ ರೂಪಿಸಲಾಗಿದ್ದು, ಕೇಬಲ್ ಟಿವಿ ಅಥವಾ ಡಿಟಿಎಚ್ ಸೇವೆಗಳ ಮಾಸಿಕ ವೆಚ್ಚಕ್ಕಿಂತ ಕಡಿಮೆ ದರದಲ್ಲಿ ಗ್ರಾಹಕರಿಗೆ ನಿರಂತರ ಮತ್ತು ಸುಲಭ ಮನರಂಜನಾ ಅನುಭವ ಒದಗಿಸುವ ಗುರಿಯನ್ನು ಹೊಂದಿದೆ.

## ಬಂಜೆತನದ ಕುರಿತು ಜನಜಾಗೃತಿ

ಹುಬ್ಬಳ್ಳಿ

ವಿಶ್ವ ಐವಿಎಫ್ ದಿನಾಚರಣೆಯ ಅಂಗವಾಗಿ ಹುಬ್ಬಳ್ಳಿಯ ನೋವಾ ಐವಿಎಫ್ ಫರ್ಟಿಲಿಟಿ ವತಿಯಿಂದ ಸಾರ್ವಜನಿಕರಲ್ಲಿ ಬಂಜೆತನದ ಕುರಿತು ಅರಿವು ಮೂಡಿಸಲು ಬೀದಿ ನಾಟಕ ಆಯೋಜಿಸಲಾಯಿತು. ಬಂಜೆತನವು ಹೃದಯರೋಗದಂತೆ ಒಂದು ವೈದ್ಯಕೀಯ ಸಮಸ್ಯೆಯಾಗಿದ್ದು, ಇದಕ್ಕೆ ಸೂಕ್ತ ಸಮಯದಲ್ಲಿ ಫರ್ಟಿಲಿಟಿ ತಜ್ಞರ ಸಲಹೆ ಹಾಗೂ ಚಿಕಿತ್ಸೆ ಪಡೆಯಬೇಕು ಎಂಬ ಸಂದೇಶವನ್ನು ಬೀದಿ ನಾಟಕದ ಮೂಲಕ ಸಾರ್ವಜನಿಕರಿಗೆ ತಲುಪಿಸಲಾಯಿತು.



ಬೆಂಗಳೂರಿನ ಕರ್ನಾಟಕದ ಧಾರವಾಡ ಘಟಕದ ಅಶ್ವಘೋಷ್ ಎ ಟ್ರಸ್ಟ್ ಆಫ್ ಥಿಯೇಟರ್ ಸಹಯೋಗದಲ್ಲಿ ಆಯೋಜಿಸಿದ್ದ ಈ ಬೀದಿ ನಾಟಕವು ಬಂಜೆತನದಿಂದ ಬಳಲುತ್ತಿರುವ ದಂಪತಿಗಳು ಎದುರಿಸುವ ಸಾಮಾಜಿಕ ಒತ್ತಡ, ಕಳಂಕ, ತಪ್ಪು ಕಲ್ಪನೆಗಳು ಹಾಗೂ ಭಾವನಾತ್ಮಕ ಸವಾಲುಗಳನ್ನು ಪರಿಣಾಮಕಾರಿಯಾಗಿ ಬಿಂಬಿಸಿತು. ಬಂಜೆತನವು ಕೇವಲ ಮಹಿಳೆಯರಿಗೆ ಸಂಬಂಧಿಸಿದ ಸಮಸ್ಯೆಯಲ್ಲ. ಪುರುಷರು ಮತ್ತು ಮಹಿಳೆಯರನ್ನು ಸಮಾನವಾಗಿ ಬಾಧಿಸಬಹುದಾದ ಆರೋಗ್ಯ ಸಮಸ್ಯೆಯಾಗಿರುವುದರಿಂದ, ಸಂತಾನೋತ್ಪತ್ತಿ ಸಮಸ್ಯೆ ಎದುರಾದಾಗ ಇಬ್ಬರೂ ಸಂಗಾತಿಗಳು ವೈದ್ಯಕೀಯ ಪರೀಕ್ಷೆಗೆ ಒಳಗಾಗುವುದು ಅಗತ್ಯ ಎಂದು ಫರ್ಟಿಲಿಟಿ ತಜ್ಞರು ತಿಳಿಸಿದರು.

ಭಾರತದಲ್ಲಿ ಸುಮಾರು ಆರು ದಂಪತಿಗಳಲ್ಲಿ ಒಬ್ಬರು ಬಂಜೆತನದ ಸಮಸ್ಯೆ ಎದುರಿಸುತ್ತಾರೆ ಎನ್ನಲಾಗಿದ್ದು, ಈ ಸಮಸ್ಯೆ ಮಹಾನಗರಗಳಿಗೆ ಮಾತ್ರ ಸೀಮಿತವಾಗದೆ ಎರಡನೇ ಹಂತದ ನಗರಗಳಲ್ಲಿಯೂ ಹೆಚ್ಚಾಗಿ ಕಂಡುಬರುತ್ತಿದೆ. ಬಂಜೆತನದ ಪ್ರಕರಣಗಳಲ್ಲಿ ಪುರುಷರ ಅಂಶವೂ ಪ್ರಮುಖವಾಗಿದೆ.

## ಬೆಂಗಳೂರಿನಲ್ಲಿ 'ಸೈಟ್‌ಕೇರ್ ಗ್ಯಾಸ್ಟ್ರೋ ಮತ್ತು ಲಿವರ್ ಕ್ಲಿನಿಕ್' ಉದ್ಘಾಟನೆ

ಬೆಂಗಳೂರು

ಸೈಟ್‌ಕೇರ್ ಆಸ್ಪತ್ರೆಗಳು ಬೆಂಗಳೂರಿನ ಯಲಹಂಕದಲ್ಲಿರುವ ತಮ್ಮ ಆವರಣದಲ್ಲಿ ನೂತನ 'ಸೈಟ್‌ಕೇರ್ ಗ್ಯಾಸ್ಟ್ರೋ ಮತ್ತು ಲಿವರ್ ಕ್ಲಿನಿಕ್' ಅನ್ನು ಉದ್ಘಾಟಿಸಿದ್ದು, ಸಂಸ್ಥೆಯ ಸಮಗ್ರ ಅತ್ಯುನ್ನತ ವಿಶೇಷ ಚಿಕಿತ್ಸಾ ಸೇವೆಗಳನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇಟ್ಟಿದೆ.




ವೈದ್ಯಕೀಯ ಜಠರ–ಕರುಳುವಿಜ್ಞಾನ, ಯಕೃತ್ತುವಿಜ್ಞಾನ ಮತ್ತು ಪೌಷ್ಟಿಕಾಂಶ ವಿಭಾಗದ ಹಿರಿಯ ಸಲಹೆಗಾರರಾದ ಡಾ. ಶರತ್ ಕೋಟೆ ಜಿ.ಎಸ್. ಹಾಗೂ ಡಾ. ರಘು ಬಿ.ಎಂ. ಅವರು ನೂತನ ಕ್ಲಿನಿಕ್ ಅನ್ನು ಉದ್ಘಾಟಿಸಿದರು.

ಜೀರ್ಣಾಂಗ ವ್ಯವಸ್ಥೆ ಮತ್ತು ಯಕೃತ್ತಿನ ಆರೋಗ್ಯಕ್ಕೆ ಸಂಬಂಧಿಸಿದ ಕೇಂದ್ರೀಕೃತ ಹಾಗೂ ವಿಶೇಷ ಚಿಕಿತ್ಸಾ ಸೇವೆಗಳನ್ನು ಹೆಚ್ಚಿನ ಜನರಿಗೆ ಲಭ್ಯವಾಗುವಂತೆ ಮಾಡುವ ಉದ್ದೇಶದಿಂದ ಈ ಕ್ಲಿನಿಕ್ ಆರಂಭಿಸಲಾಗಿದೆ. ರೋಗಿ–ಕೇಂದ್ರಿತ ಚಿಕಿತ್ಸಾ ವಿಧಾನ ಮತ್ತು ಪರಿಣತ ವೈದ್ಯಕೀಯ ಬೆಂಬಲದೊಂದಿಗೆ ಕಾರ್ಯನಿರ್ವಹಿಸಲಿರುವ ಕ್ಲಿನಿಕ್‌ನಲ್ಲಿ ರೋಗಿಗಳಿಗೆ ಸಮಯೋಚಿತ ವೈದ್ಯಕೀಯ ಸಮಾಲೋಚನೆ, ರೋಗನಿರ್ಣಯ ಹಾಗೂ ಚಿಕಿತ್ಸಾ ಸೇವೆಗಳನ್ನು ಒದಗಿಸಲಾಗುವುದು.

ಜಠರ–ಕರುಳು, ಯಕೃತ್ತು ಮತ್ತು ಪಿತ್ತನಾಳಕ್ಕೆ ಸಂಬಂಧಿಸಿದ ವಿವಿಧ ಆರೋಗ್ಯ ಸಮಸ್ಯೆಗಳಿಗೆ ಸಮಗ್ರ ವೈದ್ಯಕೀಯ ಆರೈಕೆ ಒದಗಿಸುವ ನಿಟ್ಟಿನಲ್ಲಿ ನೂತನ ಕ್ಲಿನಿಕ್ ವಿನ್ಯಾಸಗೊಳಿಸಲಾಗಿದೆ. ಅತ್ಯಾಧುನಿಕ ವೈದ್ಯಕೀಯ ಪರಿಣತಿ ಮತ್ತು ವೈಯಕ್ತಿಕ ಆರೈಕೆಯ ಮೂಲಕ ರೋಗಿಗಳ ಆರೋಗ್ಯ ಸಮಸ್ಯೆಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸುವುದು ಕ್ಲಿನಿಕ್‌ನ ಪ್ರಮುಖ ಉದ್ದೇಶವಾಗಿದೆ.

ನೂತನ ಕ್ಲಿನಿಕ್ ಆರಂಭದ ಮೂಲಕ ಜೀರ್ಣಾಂಗ ಮತ್ತು ಯಕೃತ್ತಿನ ಕಾಯಿಲೆಗಳಿಗೆ ಸಂಬಂಧಿಸಿದ ವಿಶೇಷ ಚಿಕಿತ್ಸಾ ಸೇವೆಗಳನ್ನು ಒಂದೇ ಸೂರಿನಡಿ ಒದಗಿಸುವ ಮೂಲಕ ರೋಗಿಗಳಿಗೆ ಅನುಕೂಲ ಕಲ್ಪಿಸಲು ಸೈಟ್‌ಕೇರ್ ಆಸ್ಪತ್ರೆಗಳು ಮುಂದಾಗಿದೆ.

# ಕೋಲಾರನಲ್ಲಿ 200 ಲೀಟರ್ ಕಲಬೆರಕೆ ಹಾಲು ನಾಶ, ಮಾದರಿಗಳು ಲ್ಯಾಬ್‌ಗೆ



ಕೋಲಾರ

ಸಾರ್ವಜನಿಕರಿಂದ ಬಂದ ದೂರನ್ನಾಧರಿಸಿ ಆಹಾರ ಸುರಕ್ಷತೆ ಹಾಗೂ ಪೊಲೀಸ್ ಇಲಾಖೆ ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ, ಕೆಜಿಎಫ್ ತಾಲೂಕಿನ ಗೋಪಿಯನಹಳ್ಳಿಯಲ್ಲಿ ಸುಮಾರು 200 ಲೀಟರ್ ಕಲಬೆರಕೆ ಹಾಲನ್ನು ಜಪ್ತಿ ಮಾಡಿ ಸ್ಥಳದಲ್ಲೇ ನಾಶಪಡಿಸಿದ ಘಟನೆ ಶನಿವಾರ ಬೆಳಿಗ್ಗೆ ನಡೆದಿದೆ.

ಜಿಲ್ಲಾಧಿಕಾರಿಗಳಾದ ಡಾ. ಎಂ. ಆರ್. ರವಿ ಅವರ ಸ್ಪಷ್ಟ ನಿರ್ದೇಶನ ಹಾಗೂ ಜಿಲ್ಲಾ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಅಧಿಕಾರಿ ಡಾ. ರಾಕೇಶ್ ಅವರ ಮಾರ್ಗದರ್ಶನದಲ್ಲಿ ಈ ದಿಢೀರ್ ದಾಳಿ ಕೈಗೊಳ್ಳಲಾಗಿತ್ತು.

ಕಾರ್ಯಾಚರಣೆಯ ವಿವರ:

ಕೆಜಿಎಫ್ ತಾಲೂಕಿನ ಗೋಪಿಯನಹಳ್ಳಿಯಲ್ಲಿ ದಾಳಿ ನಡೆಸಿದ ಅಧಿಕಾರಿಗಳ ತಂಡ, ಒಟ್ಟು 5 ಹಾಲು ಕ್ಯಾನ್‌ಗಳಲ್ಲಿದ್ದ 200 ಲೀಟರ್ ಕಲಬೆರಕೆ ಹಾಲನ್ನು ವಶಕ್ಕೆ ಪಡೆದು ನಾಶಪಡಿಸಿತು. ಸ್ಥಳದಲ್ಲಿ ಹಾಲು ಮತ್ತು ಕಲಬೆರಕೆಗೆ ಬಳಸಲಾಗುತ್ತಿದ್ದ ನೀರಿನ ಮಾದರಿಗಳನ್ನು (Samples) ಸಂಗ್ರಹಿಸಿ, ಹೆಚ್ಚಿನ ತಪಾಸಣೆಗಾಗಿ ಬೆಂಗಳೂರಿನ 'ಪಬ್ಲಿಕ್ ಹೆಲ್ತ್ ಇನ್ಸ್ಟಿಟ್ಯೂಟ್' ಪ್ರಯೋಗಾಲಯಕ್ಕೆ ಕಳುಹಿಸಿಕೊಡಲಾಗಿದೆ.

ಈ ಕುರಿತು ಪ್ರಕರಣ ದಾಖಲಿಸಿಕೊಂಡಿರುವ ಅಧಿಕಾರಿಗಳು, ಸಾರ್ವಜನಿಕರ ಆರೋಗ್ಯದ ಜೊತೆ ಚೆಲ್ಲಾಟವಾಡುವ ಇಂತಹ ಅಕ್ರಮ ಚಟುವಟಿಕೆಗಳ ವಿರುದ್ಧ ಮುಲಾಜಿಲ್ಲದೇ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

# ಬೆಂಗಳೂರನ್ನು ಸ್ವಚ್ಛವಾಗಿರಿಸುವುದು ಪ್ರತಿಯೊಬ್ಬರ ಕರ್ತವ್ಯ: ಸಚಿವ ಕೆಬಿ

ಬೆಂಗಳೂರು

ಬೆಂಗಳೂರು ಉತ್ತರ ನಗರ ಪಾಲಿಕೆ ವತಿಯಿಂದ ಹಮ್ಮಿಕೊಂಡಿರುವ ಯುಬಿ 100 ವಿಶೇಷ ಸ್ವಚ್ಛತಾ ಅಭಿಯಾನದಡಿ 100ನೇ ಕಸದ ಬ್ಲಾಕ್‌ಸ್ಪಾಟ್ ನಿರ್ಮೂಲನೆ ಹಾಗೂ ಸೌಂದರ್ಯೀಕರಣ ಕಾರ್ಯ ಶನಿವಾರ ಯಶಸ್ವಿಯಾಗಿ ಪೂರ್ಣಗೊಂಡಿತು. ಈ ಸಂದರ್ಭದಲ್ಲಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರಾದ ಕೃಷ್ಣ ಬೈರೇಗೌಡ ಅವರು ಸ್ಥಳಕ್ಕೆ ಭೇಟಿ ನೀಡಿ, ಸ್ವಚ್ಛತಾ ಕಾರ್ಯದಲ್ಲಿ ಭಾಗವಹಿಸಿದರು.

ಈ ವೇಳೆ ಮಾತನಾಡಿದ ಸಚಿವ ಕೃಷ್ಣ ಬೈರೇಗೌಡ, ಬೆಂಗಳೂರು ನಮಗೆಲ್ಲ ಆಶ್ರಯ ಹಾಗೂ ಅನ್ನ ನೀಡುತ್ತಿರುವ ನಗರವಾಗಿದ್ದು, ಅದನ್ನು ಸ್ವಚ್ಛವಾಗಿಟ್ಟು ಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಹೇಳಿದರು. ನಗರದ ಪ್ರತಿಯೊಂದು ಮನೆಗೂ ಕಸ ಸಂಗ್ರಹಿಸುವ ವಾಹನ ಬರುವ ವ್ಯವಸ್ಥೆ ಮಾಡ ಲಾಗುತ್ತಿದ್ದು, ಸಾರ್ವಜನಿಕರು ಕಸವನ್ನು ಕಡ್ಡಾಯವಾಗಿ ಕಸದ ವಾಹನಗಳಿಗೆ ನೀಡಬೇಕು. ಎಲ್ಲೆಂದರಲ್ಲಿ ಕಸ ಎಸೆಯುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಬೆಂಗಳೂರು ಉತ್ತರ ನಗರ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಮಾತನಾಡಿ, ಸಾರ್ವಜನಿಕರು ಹಾಗೂ ಸ್ವಯಂಸೇವಾ ಸಂಸ್ಥೆಗಳ ಸಹಕಾರದಿಂದ ವಿಶೇಷ ಸ್ವಚ್ಛತಾ ಅಭಿಯಾನ ಯಶಸ್ವಿಯಾಗಿದೆ. ಸಾರ್ವಜನಿಕರು ಕಸವನ್ನು ಕಸದ ವಾಹನಗಳಿಗೆ ನೀಡಬೇಕು. ರಸ್ತೆ ಬದಿ ಹಾಗೂ ರಾಜಕಾಲುವೆಗಳಲ್ಲಿ ಕಸ ಎಸೆಯುವುದನ್ನು ಸಂಪೂರ್ಣವಾಗಿ ತಡೆಯಬೇಕು. ನಗರವನ್ನು ಸ್ವಚ್ಛವಾಗಿಡುವಲ್ಲಿ ಸಾರ್ವಜನಿಕರ ಸಹಭಾಗಿತ್ವ ಅತ್ಯಂತ ಮುಖ್ಯವಾಗಿದೆ ಎಂದು ತಿಳಿಸಿದರು.



**ಥಣಿಸಂದ್ರದಲ್ಲಿ 100ನೇ ಬ್ಲಾಕ್‌ಸ್ಪಾಟ್ ತೆರವು**

ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ತೊಂದರೆ ಉಂಟುಮಾಡುತ್ತಿದ್ದ ಥಣಿಸಂದ್ರದ ಪೊಲೀಸ್ ತರಬೇತಿ ಶಾಲೆ ಮತ್ತು ರಾಷ್ಟ್ರೋತ್ಥಾನ ಶಾಲೆಯ ನಡುವಿನ ಕಸದ ಬ್ಲಾಕ್‌ಸ್ಪಾಟ್‌ನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲಾಗಿದೆ. ಸ್ಥಳದಲ್ಲಿದ್ದ ಕಸ ಹಾಗೂ ತ್ಯಾಜ್ಯವನ್ನು ತೆರವುಗೊಳಿಸಿ, ಪ್ರದೇಶವನ್ನು ಸ್ವಚ್ಛಗೊಳಿಸುವುದರ ಜೊತೆಗೆ ಸೌಂದರ್ಯೀಕರಣ ಕೈಗೊಂಡು ಸಾರ್ವಜನಿಕ ಸ್ನೇಹಿ ಸ್ಥಳವನ್ನಾಗಿ ಅಭಿವೃದ್ಧಿಪಡಿಸಲಾಗಿದೆ.

**45 ದಿನಗಳಲ್ಲಿ 100 ಬ್ಲಾಕ್‌ಸ್ಪಾಟ್ ತೆರವು**

ವಿಶ್ವ ಪರಿಸರ ದಿನದ ಅಂಗವಾಗಿ ಜೂನ್ 5ರಂದು ಆರಂಭಗೊಂಡ ಯುಬಿ 100 ವಿಶೇಷ ಸ್ವಚ್ಛತಾ ಅಭಿಯಾನದಡಿ 45 ದಿನಗಳಲ್ಲಿ ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯ 100 ಕಸದ ಬ್ಲಾಕ್‌ಸ್ಪಾಟ್‌ಗಳನ್ನು ನಿರ್ಮೂಲನೆ ಮಾಡುವ ಗುರಿ ಹೊಂದಲಾಗಿತ್ತು. ಇದೀಗ ನಿಗದಿತ ಗುರಿಯಂತೆ 100ನೇ ಕಸದ ಬ್ಲಾಕ್‌ಸ್ಪಾಟ್‌ನ್ನು ಸಂಪೂರ್ಣವಾಗಿ ಕಸಮುಕ್ತಗೊಳಿಸಿ, ಸೌಂದರ್ಯೀಕರಣ ಕಾರ್ಯಗಳನ್ನು ಪೂರ್ಣಗೊಳಿಸುವ ಮೂಲಕ ಅಭಿಯಾನವು ಮಹತ್ವದ ಮೈಲಿಗಲ್ಲು ಸಾಧಿಸಿದೆ.

ಅಭಿಯಾನದಡಿ ಕಸ ಮತ್ತು ತ್ಯಾಜ್ಯ ತೆರವು, ಪಾದ ಚಾರಿ ಮಾರ್ಗಗಳ ದುರಸ್ತಿ, ರಸ್ತೆಬದಿ ಸ್ವಚ್ಛತೆ, ಬೀದಿ ದೀಪಗಳ ನಿರ್ವಹಣೆ, ಗೋಡೆಗಳ ಸೌಂದರ್ಯೀಕರಣ, ಹಸಿರೀಕರಣ ಹಾಗೂ ಸಾರ್ವಜನಿಕ ಬಳಕೆಗೆ ಅಗತ್ಯ ಮೂಲಸೌಕರ್ಯಗಳ ಅಭಿವೃದ್ಧಿ ಸೇರಿದಂತೆ ಹಲವು ಕಾರ್ಯಗಳನ್ನು ಕೈಗೊಳ್ಳಲಾಗಿದೆ.

ಅಭಿಯಾನದ ಯಶಸ್ಸಿಗೆ ಸಾರ್ವಜನಿಕರು, ಸ್ಥಳೀಯ ನಿವಾಸಿಗಳು, ಸಂಘ–ಸಂಸ್ಥೆಗಳು, ಸ್ವಯಂಸೇವಕರು ಹಾಗೂ ವಿವಿಧ ಇಲಾಖೆಗಳು ನೀಡಿದ ಸಹಕಾರವನ್ನು ಪಾಲಿಕೆ ಅಭಿನಂದಿಸಿದೆ. ನಗರವನ್ನು ಸ್ವಚ್ಛವಾಗಿಡಲು ಸಾರ್ವಜನಿಕರು ಕಸವನ್ನು ಎಲ್ಲೆಂದರಲ್ಲಿ ಎಸೆಯದೆ, ಮೂಲದಲ್ಲಿಯೇ ಹಸಿ ಮತ್ತು ಒಣ ಕಸವನ್ನು ವಿಂಗಡಿಸಿ ಕಸದ ವಾಹನಗಳಿಗೆ ನೀಡಬೇಕು. ಅಭಿವೃದ್ಧಿಪಡಿಸಿರುವ ಸಾರ್ವಜನಿಕ ಸ್ಥಳಗಳ ಸ್ವಚ್ಛತೆಯನ್ನು ಕಾಪಾಡುವ ಮೂಲಕ ಪಾಲಿಕೆಯೊಂದಿಗೆ ಸಹಕರಿಸಬೇಕು ಎಂದು ಮನವಿ ಮಾಡಲಾಗಿದೆ.

ಕಾರ್ಯಕ್ರಮದಲ್ಲಿ ಅಪರ ಆಯುಕ್ತರು ಹಾಗೂ ಜಂಟಿ ಆಯುಕ್ತರಾದ ಪಲ್ಲವಿ, ಜಂಟಿ ಆಯುಕ್ತ ಮೊಹಮ್ಮದ್ ನಯೀಮ್ ಮೊಮಿನ್, ಡಿಜಿಎಂ ರಶ್ಮಿ ಸೇರಿದಂತೆ ಪಾಲಿಕೆಯ ಅಧಿಕಾರಿಗಳು ಮತ್ತು ಸಿಬ್ಬಂದಿ, ಪೊಲೀಸ್ ಇಲಾಖೆಯ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ವಿಜೃಂಭಣೆಯಿಂದ ನಡೆದ ಆಷಾಡ ಏಕಾದಶಿ ಪೂಜೆ

ದೊಡ್ಡಬಳ್ಳಾಪುರ

ತಾಲ್ಲೂಕಿನ ಮಧುರನಹೊಸಹಳ್ಳಿ ಗ್ರಾಮದಲ್ಲಿ ವರ್ಷದ ಮೊದಲ ಹಬ್ಬವೆಂದು ಪರಿಗಣಿಸಲ್ಪಡುವ ಆಷಾಡ ಏಕಾದಶಿಯನ್ನು ಭಕ್ತಿ, ಸಂಭ್ರಮ ಹಾಗೂ ಸಾಂಪ್ರದಾಯಿಕ ಆಚರಣೆಗಳೊಂದಿಗೆ ವಿಜೃಂಭಣೆಯಿಂದ ಆಚರಿಸಲಾಯಿತು.

ಹಬ್ಬದ ಅಂಗವಾಗಿ ಗ್ರಾಮದಲ್ಲಿ ತಮಟೆ ವಾದ್ಯದ ಮೊಳಗುವಿಕೆಯಲ್ಲಿ ಪ್ರತಿಯೊಂದು ಮನೆಯಿಂದ ಯುವತಿಯರು, ಮಹಿಳೆಯರು ಹಾಗೂ ಪುಟಾಣಿ ಮಕ್ಕಳು ತಂಬಿಟ್ಟಿನ ಆರತಿ ಹೊತ್ತು ಗ್ರಾಮದ ಪ್ರಮುಖ ಬೀದಿಗಳಲ್ಲಿ ಭವ್ಯ ಮೆರವಣಿಗೆ ನಡೆಸಿದರು.

ಬಳಿಕ ಗ್ರಾಮದ ಹೊರವಲಯದಲ್ಲಿರುವ ನೆಲೆದೇವ ಶ್ರೀ ಮುತ್ತುರಾಯಸ್ವಾಮಿ ದೇವಾಲಯಕ್ಕೆ ತೆರಳಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ಗ್ರಾಮದ ಸುಖ, ಶಾಂತಿ ಹಾಗೂ ಸಮೃದ್ಧಿಗಾಗಿ ಪ್ರಾರ್ಥಿಸಿದರು.

ಪೂಜೆ ಬಳಿಕ ಭಕ್ತರಿಗೆ ಪ್ರಸಾದ ವಿತರಿಸಲಾಯಿತು. ಇದೇ ವೇಳೆ ಪಟಾಕಿ ಸಿಡಿಸಿ ಹಬ್ಬದ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಲಾಯಿತು. ಗ್ರಾಮಸ್ಥರ ಪ್ರಕಾರ, ಈ ಹಬ್ಬವನ್ನು ಗ್ರಾಮ ಜಾತ್ರೆಯ ರೀತಿಯಲ್ಲಿ ಆಚರಿಸುವ ಸಂಪ್ರದಾಯ ವಿದ್ದು, ನೆಂಟರು ಹಾಗೂ ಹಿತೈಷಿಗಳನ್ನು ಮನೆಗಳಿಗೆ ಆಹ್ವಾನಿಸಿ ಸಿಹಿ ಹಬ್ಬದ ಊಟವನ್ನು ಬಡಿಸಲಾಗುತ್ತದೆ.



ಮಧುರನಹೊಸಹಳ್ಳಿ ಗ್ರಾಮದಲ್ಲಿ ಆಷಾಡ ಏಕಾದಶಿ ಆಚರಣೆಗೆ ವಿಶೇಷ ಮಹತ್ವವಿದ್ದು, ಪ್ರತಿವರ್ಷ ಗ್ರಾಮಸ್ಥರೆಲ್ಲರೂ ಒಗ್ಗಟ್ಟಿನಿಂದ ಪಾಲ್ಗೊಂಡು ಸಂಪ್ರದಾಯವನ್ನು ಉಳಿಸಿಕೊಂಡು ಬರುತ್ತಿದ್ದಾರೆ. ಹಬ್ಬದಲ್ಲಿ ಗ್ರಾಮಸ್ಥರು, ಹಿರಿಯರು, ಯುವಕರು, ಮಹಿಳೆಯರು ಹಾಗೂ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಭಕ್ತಿಭಾವದಿಂದ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

# ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ತರಬೇತಿಗಾಗಿ ಅರ್ಜಿ ಆಹ್ವಾನ

ಚಿಕ್ಕಬಳ್ಳಾಪುರ

ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು 2026–27ನೇ ಸಾಲಿಗೆ ಹಿಂದುಳಿದ ವರ್ಗಗಳ (ಪ್ರವರ್ಗ–1, 2ಎ, 3ಎ ಮತ್ತು 3ಬಿ) ಸಮುದಾಯಕ್ಕೆ ಸೇರಿದ ಕಾನೂನು ಪದವೀಧರರಿಂದ ನ್ಯಾಯಾಂಗ ಆಡಳಿತದಲ್ಲಿ ಕಾನೂನು ತರಬೇತಿಗಾಗಿ ಅರ್ಜಿಗಳನ್ನು ಆಹ್ವಾನಿಸಿದೆ.

ಆಯ್ಕೆಯಾಗುವ 10 ಅಭ್ಯರ್ಥಿಗಳಿಗೆ ನಾಲ್ಕು ವರ್ಷಗಳ ಅವಧಿಗೆ ಪ್ರತಿ ತಿಂಗಳು 4,000 ತರಬೇತಿ ಭತ್ಯೆ ನೀಡಲಾಗುತ್ತದೆ.

ಆಸಕ್ತ ಅಭ್ಯರ್ಥಿಗಳು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಚೇರಿಯಿಂದ ಅರ್ಜಿ ನಮೂನೆ ಪಡೆದು, ಅಗತ್ಯ ದಾಖಲೆಗಳೊಂದಿಗೆ ಆಗಸ್ಟ್ 21ರೊಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಎಸ್‌ಬಿ–4, ಎರಡನೇ ಮಹಡಿ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರವನ್ನು ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ: 08156–277053 ಎಂದು ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈಲ್ವೆ ಜಾಗದಲ್ಲಿ ಕಸ ಎಸೆದರೆ ಕಠಿಣ ಕ್ರಮ: ವಿ.ಸೋಮಣ್ಣ



ಬೆಂಗಳೂರು

ರೈಲ್ವೆ ಜಾಗದಲ್ಲಿ ಅನಧಿಕೃತವಾಗಿ ಕಸ ಮತ್ತು ಕಟ್ಟಡ ನಿರ್ಮಾಣದ ಅವಶೇಷಗಳನ್ನು ಸುರಿಯುವುದನ್ನು ತಡೆಯಲು ಕಠಿಣ ಕ್ರಮ ಕೈಗೊಳ್ಳಬೇಕು. ತ್ಯಾಜ್ಯ ಮುಕ್ತ ಬೆಂಗಳೂರಿನ ನಿರ್ಮಾಣಕ್ಕೆ ರೈಲ್ವೆ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ಸೇರಿದಂತೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಅಧಿಕಾರಿಗಳಿಗೆ ಸೂಚಿಸಿದರು.

ಬೆಂಗಳೂರಿನ ವಿಭಾಗೀಯ ರೈಲ್ವೆ ಕಚೇರಿಯಲ್ಲಿ ರೈಲ್ವೆ ಭೂಮಿ ಹಾಗೂ ಬೃಹತ್ ಬೆಂಗಳೂರು ವ್ಯಾಪ್ತಿಯ ಘನತ್ಯಾಜ್ಯ ನಿರ್ವಹಣೆ ಕುರಿತು ನಡೆದ ಪರಿಶೀಲನಾ ಸಭೆಯಲ್ಲಿ ವಿ.ಸೋಮಣ್ಣ ಮತ್ತು ಬೃಹತ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಜಂಟಿಯಾಗಿ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ಸಭೆಯಲ್ಲಿ ರೈಲ್ವೆಗೆ ಸೇರಿದ ಜಾಗದಲ್ಲಿ ಅನಧಿಕೃತವಾಗಿ ಕಸ, ಕಟ್ಟಡ ನಿರ್ಮಾಣದ ತ್ಯಾಜ್ಯ ಹಾಗೂ ಅವಶೇಷಗಳನ್ನು ಸುರಿಯುತ್ತಿರುವ ಕುರಿತು ಚರ್ಚಿಸಲಾಯಿತು. ರೈಲ್ವೆ ಭೂಮಿಯನ್ನು ಸ್ವಚ್ಛವಾಗಿ ಮತ್ತು ಸುರಕ್ಷಿತವಾಗಿ ನಿರ್ವಹಿಸಲು ರೈಲ್ವೆ ಇಲಾಖೆ ಹಾಗೂ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ನಡುವೆ ನಿರಂತರ ಸಮನ್ವಯ ಅಗತ್ಯವಿದೆ ಎಂದು ಸಚಿವರು ತಿಳಿಸಿದರು.

ರೈಲ್ವೆ ಜಾಗದಲ್ಲಿ ಈಗಾಗಲೇ ಸುರಿಯಲಾಗಿರುವ ತ್ಯಾಜ್ಯವನ್ನು ತ್ವರಿತವಾಗಿ ತೆರವುಗೊಳಿಸಿ, ಮುಂದಿನ ದಿನಗಳಲ್ಲಿ ಮತ್ತೆ ಕಸ ಸುರಿಯದಂತೆ ತಡೆಯಲು ಸಮಗ್ರ ಕ್ರಿಯಾ ಯೋಜನೆ ರೂಪಿಸುವಂತೆ ವಿ.ಸೋಮಣ್ಣ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ರೈಲ್ವೆ ಭೂಮಿಯಲ್ಲಿ ಕಸ ಸುರಿಯುವವರ ವಿರುದ್ಧ ದಂಡ ಸೇರಿದಂತೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಘನತ್ಯಾಜ್ಯ ನಿರ್ವಹಣೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಗ್ರೇಟರ್ ಬೆಂಗಳೂರು ಪ್ರಾಧಿಕಾರ, ರೈಲ್ವೆ ಇಲಾಖೆ, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಸ್ಕಾಂ ಹಾಗೂ ಸಂಬಂಧಪಟ್ಟ ಎಲ್ಲ ಇಲಾಖೆಗಳು ಒಂದೇ ಸಮನ್ವಯ ವ್ಯವಸ್ಥೆಯಡಿ ಕಾರ್ಯನಿರ್ವಹಿಸಬೇಕು ಎಂದು ಸಚಿವರು ಹೇಳಿದರು. ರೈಲುಗಳಲ್ಲಿ ಜೈವಿಕ ಶೌಚಾಲಯಗಳನ್ನು ಅಳವಡಿಸಿರುವುದರಿಂದ ರೈಲ್ವೆ ನೈರ್ಮಲ್ಯ ವ್ಯವಸ್ಥೆಯಲ್ಲಿ ಗಮನಾರ್ಹ ಸುಧಾರಣೆ ಕಂಡುಬಂದಿದೆ ಎಂದು ಅವರು ತಿಳಿಸಿದರು.

ಸಭೆಯಲ್ಲಿ ಬೆಂಗಳೂರು ವಿಭಾಗದ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಆಶುತೋಷ್ ಕುಮಾರ್ ಸಿಂಗ್, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ ರಾವ್, ಮಂಜುಳಾ, ಲಕ್ಷ್ಮಣ್ ಸಿಂಗ್ ಸೇರಿದಂತೆ ನೈಋತ್ಯ ರೈಲ್ವೆ ಮತ್ತು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಎಸ್‌ಐಆರ್ ಮಹಾ ಸಂಪರ್ಕ ಅಭಿಯಾನದಲ್ಲಿ ಮನೆ ಮನೆಗೆ ತೆರಳಿದ ಬಿವೈವಿ

ಬೆಂಗಳೂರು

ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಬಿಜೆಪಿ ಹಮ್ಮಿಕೊಂಡಿರುವ ಎಸ್‌ಐಆರ್ ಮಹಾ ಸಂಪರ್ಕ ಅಭಿಯಾನದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಅವರು ಪಾಲ್ಗೊಂಡರು.

ಹೆಬ್ಬಾಳ ವಿಧಾನಸಭಾ ಕ್ಷೇತ್ರದಲ್ಲಿ ಮನೆ ಮನೆಗೆ ಭೇಟಿ ನೀಡಿದ ಬಿ.ವೈ. ವಿಜಯೇಂದ್ರ ಅವರು, ಪಕ್ಷದ ಕಾರ್ಯಕರ್ತರಿಗೆ ಎಸ್‌ಐಆರ್ ಪ್ರಕ್ರಿಯೆಯ ಮಹತ್ವದ ಕುರಿತು ಮಾಹಿತಿ ನೀಡಿದರು. ಮತದಾರರಿಗೆ ಎಸ್‌ಐಆರ್ ಕುರಿತು ಇರುವ ಗೊಂದಲಗಳನ್ನು ನಿವಾರಿಸಿ, ಅಗತ್ಯ ಮಾಹಿತಿಯನ್ನು ತಲುಪಿಸುವಂತೆ ಕಾರ್ಯಕರ್ತರಿಗೆ ಸೂಚಿಸಿದರು.

ರಾಜ್ಯದಾದ್ಯಂತ ಬಿಜೆಪಿ ವತಿಯಿಂದ ಎರಡು ದಿನಗಳ ಕಾಲ ಎಸ್‌ಐಆರ್ ಮಹಾ ಸಂಪರ್ಕ ಅಭಿಯಾನ ನಡೆಯುತ್ತಿದೆ. ಪ್ರತಿ ಪ್ರಮುಖ ಕಾರ್ಯಕರ್ತರಿಗೆ ಕನಿಷ್ಠ 20 ಮನೆಗಳಿಗೆ ಭೇಟಿ ನೀಡುವ ಗುರಿ ನೀಡಲಾಗಿದ್ದು, ಮತದಾರರಿಗೆ ಎನ್ಯುಮರೇಷನ್ ಅರ್ಜಿ ದೊರೆತಿದೆಯೇ ಎಂಬುದನ್ನು ಪರಿಶೀಲಿಸುವ ಜೊತೆಗೆ ಅಗತ್ಯ ಮಾಹಿತಿ ನೀಡಲಾಗುತ್ತಿದೆ ಎಂದು ಬಿ.ವೈ. ವಿಜಯೇಂದ್ರ ತಿಳಿಸಿದರು.



ಎಸ್‌ಐಆರ್ ಮಹಾ ಸಂಪರ್ಕ ಅಭಿಯಾನದ ಸಂಚಾಲಕ ಹಾಗೂ ಬಿಜೆಪಿ ಪ್ರಕೋಷ್ಠಗಳ ರಾಜ್ಯ ಸಂಯೋಜಕ ಎಸ್. ದತ್ತಾತ್ರಿ ಮಾತನಾಡಿ, ಪ್ರತಿ ಕಾರ್ಯಕರ್ತರು ದಿನಕ್ಕೆ ಕನಿಷ್ಠ 10 ಮನೆಗಳಿಗೆ ಭೇಟಿ ನೀಡಿ, ಮತದಾರರೊಂದಿಗೆ ಐದರಿಂದ ಹತ್ತು ನಿಮಿಷಗಳ ಕಾಲ ಸಂವಾದ ನಡೆಸಿ ಎಸ್‌ಐಆರ್ ಪ್ರಕ್ರಿಯೆ ಹಾಗೂ ಕರಡು ಮತದಾರರ ಪಟ್ಟಿಯ ಕುರಿತು ಮಾಹಿತಿ ನೀಡುವಂತೆ ಸೂಚಿಸಲಾಗಿದೆ ಎಂದು ಹೇಳಿದರು.

ಬಿಜೆಪಿಯ ಪ್ರಮುಖರು ಹಾಗೂ ಕಾರ್ಯಕರ್ತರಿಗೆ ಕಳೆದ ಆರು ತಿಂಗಳಿನಿಂದ ಎಸ್‌ಐಆರ್ ಕುರಿತು ತರಬೇತಿ ನೀಡಲಾಗಿದೆ. ಪ್ರತಿ ವಿಧಾನಸಭಾ ಕ್ಷೇತ್ರಕ್ಕೂ ಒಬ್ಬರನ್ನು ಪ್ರಭಾರಿಯಾಗಿ ನೇಮಿಸಿ, ಎಸ್‌ಐಆರ್ ಸಂಬಂಧಿತ ಚಟುವಟಿಕೆಗಳನ್ನು ಮೇಲ್ವಿಚಾರಣೆ ಮಾಡಲು ಜವಾಬ್ದಾರಿ ನೀಡಲಾಗಿದೆ ಎಂದು ಅವರು ತಿಳಿಸಿದರು.

ಈ ಮಹಾ ಸಂಪರ್ಕ ಅಭಿಯಾನದಲ್ಲಿ ಶಾಸಕರು, ಜಿ.ಪಂ. ಮಾಜಿ ಸದಸ್ಯರು, ಮಾಜಿ ಶಾಸಕರು, ವಿಧಾನ ಪರಿಷತ್ ಮಾಜಿ ಸದಸ್ಯರು ಸೇರಿದಂತೆ ಹಾಲಿ ಹಾಗೂ ಮಾಜಿ ಜನಪ್ರತಿನಿಧಿಗಳು ಮತ್ತು ಬಿಜೆಪಿ ಪ್ರಮುಖ ಕಾರ್ಯಕರ್ತರು ಸಕ್ರಿಯವಾಗಿ

# ಡಿಸೆಂಬರ್ ಅಂತ್ಯಕ್ಕೆ ಇ–ಪೌತಿ ಖಾತೆ ಪೂರ್ಣಗೊಳಿಸಲು ಡಿಸಿಎಂ ಸೂಚನೆ

ಚಿತ್ರದುರ್ಗ

ಇದೇ ವರ್ಷದ ಡಿಸೆಂಬರ್ ತಿಂಗಳ ಒಳಗಾಗಿ ಇ–ಪೌತಿ ಖಾತೆ ಪೂರ್ಣಗೊಳಿಸಲು ಉಮಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸೂಚನೆ ನೀಡಿದರು.

ಬೆಂಗಳೂರು ವಿಭಾಗ ಮಟ್ಟದ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.



ಬೆಂಗಳೂರು ವಿಭಾಗದಲ್ಲಿ ಇ–ಪೌತಿ ಯೋಜನೆಯಡಿ ಒಟ್ಟು 1463968 ಅರ್ಜಿಗಳ ಗುರಿಯನ್ನು ಹೊಂದಲಾಗಿದ್ದು, ಈ ಪೈಕಿ ಗ್ರಾಮ ಆಡಳಿತ ಅಧಿಕಾರಿಗಳ ಹಂತದಲ್ಲಿ 304889 ಅರ್ಜಿಗಳನ್ನು ಪೂರ್ಣ ಗೊಳಿಸಲಾಗಿದೆ. 852651 ಅರ್ಜಿಗಳು ವಿಎಒ ಹಂತದಲ್ಲಿ ಪರಿಶೀಲನೆಗೆ ಬಾಕಿ ಇವೆ. ವಿಭಾಗದ ಜಿಲ್ಲೆಗಳ ಪೈಕಿ ತುಮಕೂರು ಜಿಲ್ಲೆಯು 499545 ಅರ್ಜಿಗಳ ಗುರಿಯನ್ನು ಹೊಂದಿದ್ದು, 92234 ಪೌತಿ ಖಾತೆ ಅರ್ಜಿಗಳನ್ನು ಪೂರ್ಣಗೊಳಿಸಲಾಗಿದೆ. 304602 ಅರ್ಜಿಗಳನ್ನು ಬಾಕಿಯಿವೆ. ವಿಭಾಗದಾದ್ಯಂತ ಇ–ಪೌತಿ ಮೂಲಕ ಪ್ರಕ್ರಿಯೆಗೊಳಿಸಲು ಸೂಕ್ತವಾದ ಒಟ್ಟು ಅರ್ಜಿಗಳ ಸಂಖ್ಯೆ 393774 ಆಗಿದೆ. 458877 ಪ್ರಕ್ರಿಯೆಗೊಳಿಸಲು ಅನರ್ಹವಾಗಿವೆ.

ಭೂಸುರಕ್ಷಾ – ಭೂದಾಖಲೆಗಳ ಡಿಜಿಟಲೀಕರಣ ಪ್ರಗತಿ ವಿವರ

ಭೂಸುರಕ್ಷಾ ಯೋಜನೆಯಡಿ ಕಂದಾಯ ದಾಖಲೆಗಳ ಡಿಜಿಟಲೀಕರಣ ಕಾಮಗಾರಿಯಲ್ಲಿ ವಿಭಾಗದಾದ್ಯಂತ ಒಟ್ಟು 243916048 ಪುಟಗಳನ್ನು ಸ್ಕ್ಯಾನಿಂಗ್‌ಗಾಗಿ ಗುರುತಿಸಲಾಗಿದ್ದು, ಈ ಪೈಕಿ 159044964 ಪುಟಗಳನ್ನು ಯಶಸ್ವಿಯಾಗಿ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲಾಗಿದೆ. 84871084 ಪುಟಗಳು ಸ್ಕ್ಯಾನ್ ಬಾಕಿ ಇವೆ. ವಿಭಾಗದ ಒಟ್ಟಾರೆ ಶೇಕಡಾವಾರು ಬಾಕಿ ಪ್ರಮಾಣವು ಶೇ. 24.05 ಆಗಿದೆ. ಈ ಯೋಜನೆಯಡಿ ಸಾರ್ವಜನಿಕರಿಗೆ 1562003 ಡಿಜಿಟಲ್ ದಾಖಲೆಗಳನ್ನು ವಿತರಿಸಲಾಗಿದ್ದು, ಒಟ್ಟು ರೂ. 1.72 ಕೋಟಿ ಆದಾಯ ಸಂಗ್ರಹವಾಗಿದೆ.

# 78 %ರಷ್ಟು ಮತದಾರರ ಪಟ್ಟಿ ಡಿಜಿಟಲೀಕರಣ ಪೂರ್ಣ

ಕೋಲಾರ

ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ (SIR) ಪ್ರಕ್ರಿಯೆಯು ಅತ್ಯಂತ ಕ್ಷಿಪ್ರಗತಿಯಲ್ಲಿ ಸಾಗುತ್ತಿದ್ದು, ಮತದಾರರ ಗಣತಿ ನಮೂನೆಗಳ ಡಿಜಿಟಲೀಕರಣ ಕಾರ್ಯದಲ್ಲಿ ಜಿಲ್ಲೆ ಗಮನಾರ್ಹ ಸಾಧನೆ ಮಾಡಿದೆ. ಜಿಲ್ಲಾ ಚುನಾವಣಾಧಿಕಾರಿಗಳು ನೀಡಿದ ವರದಿಯಂತೆ, ಜಿಲ್ಲೆಯ ಒಟ್ಟು 12,95,265 ನೋಂದಾಯಿತ ಮತದಾರರಿಗೆ %100 ರಷ್ಟು ನಮೂನೆಗಳನ್ನು ಪೂರ್ಣವಾಗಿ ವಿತರಿಸಲಾಗಿದ್ದು, ಈ ಪೈಕಿ 10,46,314 ನಮೂನೆಗಳ ಡಿಜಿಟಲೀಕರಣ (ಶೇ.80.78%) ಕಾರ್ಯ ಈಗಾಗಲೇ ಪೂರ್ಣಗೊಂಡಿದೆ. ಅಲ್ಲದೆ, 6,077 ಮತದಾರರು ಆನ್‌ಲೈನ್ ಮೂಲಕವೇ ನೇರವಾಗಿ ತಮ್ಮ ವಿವರಗಳನ್ನು ಸಲ್ಲಿಸಿದ್ದಾರೆ.

ಕ್ಷೇತ್ರವಾರು ಪ್ರಗತಿಯಲ್ಲಿ 1,95,364 ನಮೂನೆಗಳನ್ನು ಡಿಜಿಟಲೀಕರಿಸುವ ಮೂಲಕ ಕೋಲಾರ ವಿಧಾನಸಭಾ ಕ್ಷೇತ್ರವು ಮುಂಚೂಣಿಯಲ್ಲಿದ್ದರೆ, ಮುಳಬಾಗಿಲು (1,88,265), ಶ್ರೀನಿವಾಸಪುರ (1,83,846), ಬಂಗಾರಪೇಟೆ (1,67,742), ಮಾಲೂರು (1,61,106) ಹಾಗೂ ಕೆ.ಜಿ.ಎಫ್ (1,49,991) ಕ್ಷೇತ್ರಗಳಲ್ಲೂ ಗಣಕೀಕರಣ ಕಾರ್ಯ ಭರದಿಂದ ಸಾಗಿದೆ. ಮನೆ ಮನೆ ಪರಿಶೀಲನೆ ವೇಳೆ ಇದುವರೆಗೆ ಒಟ್ಟು 89,014 ನಕಲಿ, ಮೃತ ಹಾಗೂ ಸ್ಥಳಾಂತರಗೊಂಡ (ASDDO) ಮತದಾರರನ್ನು ಪತ್ತೆ ಹಚ್ಚಲಾಗಿದ್ದು, ಇದರಲ್ಲಿ 23,611 ಮೃತ ಪಟ್ಟವರು ಮತ್ತು 44,716 ಶಾಶ್ವತವಾಗಿ ಸ್ಥಳಾಂತರಗೊಂಡ ಮತದಾರರು ಸೇರಿದ್ದಾರೆ. ಪಾರದರ್ಶಕ ಹಾಗೂ ದೋಷರಹಿತ ಮತದಾರರ ಪಟ್ಟಿ ಸಿದ್ಧಪಡಿಸುವ ನಿಟ್ಟಿನಲ್ಲಿ ಬಾಕಿ ಉಳಿದಿರುವ ಡಿಜಿಟಲೀಕರಣ ಪ್ರಕ್ರಿಯೆಯನ್ನು ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಭದ್ರಾ ಜಲಾಶಯದಿಂದ ವೇದಾವತಿ ನದಿಗೆ ನೀರು ಹರಿಸಿ: ಶಾಸಕ ಮನವಿ

ಚಿತ್ರದುರ್ಗ



ವೇದಾವತಿ ನದಿಯು ಸಂಪೂರ್ಣವಾಗಿ ಒಣಗಿಹೋಗಿದ್ದು, ಅಕ್ಕಪಕ್ಕದ ಗ್ರಾಮಗಳ ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ಅಭಾವ ಎದುರಾಗಿದೆ. ಆದ್ದರಿಂದ, ಭದ್ರಾ ಜಲಾಶಯದಿಂದ ಕನಿಷ್ಠ ಒಂದು ವಾರಗಳ ಕಾಲ ವೇದಾವತಿ ನದಿಗೆ ನೀರು ಹರಿಸಬೇಕು ಎಂದು ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಹೇಳಿದರು.

ಬೆಂಗಳೂರು ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ವೇದಾವತಿ ನದಿಗೆ ನೀರು ಹರಿಸವುದರಿಂದ ನದಿ ತೀರದ ಗ್ರಾಮಗಳ ಕುಡಿಯುವ ನೀರಿನ ಸಮಸ್ಯೆ ಬಗೆಹರಿಯುವುದಲ್ಲದೇ ಅಂತರ್ಜಲ ಮಟ್ಟವೂ ವೃದ್ಧಿಸಲಿದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಮನವಿ ಮಾಡಿದರು.

ಸದ್ಯಕ್ಕೆ ಕ್ಷೇತ್ರದಲ್ಲಿ ಕುಡಿಯುವ ನೀರಿನ ತೀವ್ರ ಅಭಾವವಿಲ್ಲದಿದ್ದರೂ, ಮುಂದಿನ ದಿನಗಳಲ್ಲಿ ಸಮಸ್ಯೆ ಉಲ್ಬಣಗೊಳ್ಳುವ ಸಾಧ್ಯತೆಯಿದೆ. ಹಾಗಾಗಿ ಮುನ್ನೆಚ್ಚರಿಕಾ ಕ್ರಮವಾಗಿ ವೇದಾವತಿ ನದಿಗೆ ನೀರು ಹರಿಸುವುದು ಅತ್ಯಗತ್ಯಎಂದು ಬಿ.ಜಿ.ಗೋವಿಂದಪ್ಪ ಹೇಳಿದರು.

ಹೊಸದುರ್ಗ ಭಾಗದಲ್ಲಿ ರಾಗಿ ಹಾಗೂ ಸಾಮೆ ಹೆಚ್ಚಾಗಿ ಬೆಳೆಯುವ ಪ್ರದೇಶವಾಗಿದ್ದು, ಈ ಬಾರಿ ಸೂಕ್ತ ಮಳೆಯಾಗದ ಹಿನ್ನೆಲೆಯಲ್ಲಿ ಎರಡು ಬೆಳೆಗಳನ್ನು ಬೆಳೆಯಲು ಸಾಧ್ಯವಾಗಿಲ್ಲ. ಕೃಷಿ ಇಲಾಖೆ ಬಿತ್ತನೆ ಬೀಜ ಮತ್ತು ಗೊಬ್ಬರದ ಸಿದ್ಧತೆ ಮಾಡಿಕೊಂಡಿದ್ದರೂ, ಮಳೆ ಕೊರತೆಯಿಂದಾಗಿ ರೈತರು ಬಿತ್ತನೆ ಮಾಡಲು ಸಾಧ್ಯವಾಗುತ್ತಿಲ್ಲ ಎಂದು ಕಳವಳ ವ್ಯಕ್ತಪಡಿಸಿದರು.


**ಕೆರೆಗಳನ್ನು ತುಂಬಿಸುವ ಯೋಜನೆಗೆ ಒತ್ತಾಯ:** ಜಲಾಶಯದಲ್ಲಿ ನೀರಿನ ಲಭ್ಯತೆ ಇದ್ದರೂ ಹಿನ್ನೀರು ಪ್ರದೇಶದಿಂದ ನೀರು ಎತ್ತುವ ಕೆಲಸ ಸಮರ್ಪಕವಾಗಿ ನಡೆದಿಲ್ಲ. ವಿಶೇಷ ಸಣ್ಣ ನೀರಾವರಿ ವಿಭಾಗದಿಂದ ಸಿದ್ಧಪಡಿಸಲಾಗಿರುವ 24 ಕೆರೆಗಳಿಗೆ ನೀರು ತುಂಬಿಸುವ ಅಂದಾಜು ಪಟ್ಟಿಗೆ (ಇಟಿಟಿಚಿಣಜ) ತಕ್ಷಣವೇ ಒಪ್ಪಿಗೆ ನೀಡಿ, ಕಾಮಗಾರಿಯನ್ನು

# ಬಿಜೆಪಿ ರಾಜ್ಯ ಅಧ್ಯಕ್ಷರ ಹೇಳಿಕೆ ನಾಚಿಕೆಗೇಡಿನ ಪರಮಾವಧಿ: ರಮೇಶ್ ಬಾಬು

ಬೆಂಗಳೂರು

ದೇಶದ ವಿದ್ಯಾರ್ಥಿಗಳ ಮತ್ತು ಯುವ ಜನಾಂಗದ ಐತಿಹಾಸಿಕ ಪ್ರತಿಭಟನೆಯ ನಂತರ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, ಇವರ ರಾಜೀನಾಮೆಯನ್ನು ರಾಜಕೀಯ ಕಾರಣಗಳಿಗೆ ಹೋಲಿಕೆ ಮಾಡಲು ಹೋಗಿ ರಾಜ್ಯ ಬಿಜೆಪಿ ಅಧ್ಯಕ್ಷರಾದ ವಿಜಯೇಂದ್ರ ತಮ್ಮ ವ್ಯಕ್ತಿತ್ವಕ್ಕೆ ತಾವೇ ಮಸಿ ಬಳಿದುಕೊಂಡಿದ್ದಾರೆ ಎಂದು ಕೆಪಿಸಿಸಿ ಮಾಧ್ಯಮ ಸಂವಹನ ವಿಭಾಗದ ರಾಜ್ಯಾಧ್ಯಕ್ಷ ರಮೇಶ್ ಬಾಬು ಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರಾಜಕೀಯ ಹೇಳಿಕೆ ನೀಡುವ ಸಂದರ್ಭದಲ್ಲಿ ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ಮತ್ತು ಕರ್ನಾಟಕ ಗೃಹ ಸಚಿವರಾದ ಪ್ರಿಯಾಂಕ ಖರ್ಗೆ ರವರ ಹೆಸರುಗಳನ್ನು ಬಳಸಿಕೊಂಡು ಟೀಕೆ ಮಾಡುವ ನೆಪದಲ್ಲಿ ತಾವೇ ಬೆತ್ತಲಾಗಿದ್ದಾರೆ. ದೇಶದ 11 ವರ್ಷಗಳ ಕೇಂದ್ರ ಬಿಜೆಪಿ ಸರ್ಕಾರದ ಆಡಳಿತದಿಂದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಮಂಕಾಗಿದೆ. ನೂರಾರು ವಿದ್ಯಾರ್ಥಿಗಳು ತಮ್ಮ ಪ್ರಾಣ ಮತ್ತು ಬದುಕನ್ನು ಕಳೆದುಕೊಂಡಿದ್ದಾರೆ. ಅವರ ಅಸಮಾಧಾನ ರಾಷ್ಟ್ರಮಟ್ಟದ ವಿದ್ಯಾರ್ಥಿ ಚಳುವಳಿಗೆ ಮತ್ತು ದೊಡ್ಡಮಟ್ಟದ ಪ್ರತಿಭಟನೆಗೆ ಕಾರಣವಾಗಿದೆ. ದೇಶದಲ್ಲಿ ವಿದ್ಯಾರ್ಥಿಗಳ ಬದುಕನ್ನು ಬೀದಿಗೆ ತಂದ ಕಾರಣಕ್ಕಾಗಿ ಭಾರತೀಯ ಜನತಾ ಪಕ್ಷದ ಪರವಾಗಿ ಬಾಲ ಬಿಜೆಪಿ ಭವನದ ಅಧ್ಯಕ್ಷ ವಿಜಯೇಂದ್ರ ಅವರು ಕ್ಷಮೆ ಕೇಳಿದ್ದರೆ ಸ್ವಲ್ಪವಾದರೂ ಗೌರವ ಉಳಿಯುತ್ತಿತ್ತು, ಆದರೆ ಕೆಪಿಸಿಸಿ ಅಧ್ಯಕ್ಷರನ್ನು ಮತ್ತು ರಾಜ್ಯ ಗೃಹ ಸಚಿವರನ್ನು ಗುರಿಯಾಗಿಸಿಕೊಂಡು ಟೀಕೆ ಮಾಡಿರುವುದು ಅವರ ರಾಜಕೀಯ ಎಳಸುತನದ ಜೊತೆಗೆ ನೈತಿಕತೆಯ ಅಧೋಗತಿ ಆಗಿದೆ ಎಂದು ಕಾಲೆಳೆದಿದ್ದಾರೆ.



ಸೈದ್ಧಾಂತಿಕವಾಗಿ ಕೆಪಿಸಿಸಿ ಅಧ್ಯಕ್ಷರು ಮತ್ತು ಗೃಹ ಸಚಿವರು ಕಾಂಗ್ರೆಸ್ ಪಕ್ಷದ ಸಿದ್ಧಾಂತಕ್ಕೆ ಅನುಗುಣವಾಗಿ ಸಂಘ ಪರಿವಾರದ ತಪ್ಪುಗಳನ್ನು ಟೀಕಿಸುತ್ತಿದ್ದಾರೆ. ಸಾರ್ವಜನಿಕ ಹಿತ ದೃಷ್ಟಿಯಿಂದ ಮಾಹಿತಿಯನ್ನು ನೀಡುತ್ತಿದ್ದಾರೆ. ಬಿಜೆಪಿಯಲ್ಲಿ ಅಧ್ಯಕ್ಷ ಸ್ಥಾನವನ್ನು ಉಳಿಸಿಕೊಳ್ಳಲು ಪ್ರತಿದಿನ ತಮ್ಮ ತಂದೆ ಯಡಿಯೂರಪ್ಪ ನವರ ಹೆಸರನ್ನು ಬಳಸಿಕೊಂಡು ರಾಜಕೀಯ ಅಸ್ತಿತ್ವಕ್ಕೆ ಒದ್ದಾಡುತ್ತಿರುವ ವಿಜಯೇಂದ್ರ ಅವರು, ಕಾಂಗ್ರೆಸ್ ನಾಯಕರನ್ನು ಟೀಕೆ ಮಾಡುವುದನ್ನು ಹವ್ಯಾಸ ಮಾಡಿಕೊಂಡಿದ್ದಾರೆ. ಅದನ್ನೇ ತಮ್ಮ ಸಾಧನೆ ಎಂದು ಬಿಂಬಿಸಿಕೊಳ್ಳುತ್ತಿದ್ದಾರೆ. ಅವರದೇ ಪಕ್ಷದ ಅನೇಕ ಹಿರಿಯ ನಾಯಕರು ಎತ್ತಿರುವ ಧ್ವನಿಗಳಿಗೆ ಇಲ್ಲಿಯವರಿಗೆ ಸಾರ್ವಜನಿಕವಾಗಿ ಉತ್ತರ ಕೊಡಲು ಆಗದ ವಿಜಯೇಂದ್ರರವರು, ತಮ್ಮ ರಾಜಕೀಯ ಉಳಿವಿಗಾಗಿ ಕಾಂಗ್ರೆಸ್ ನಾಯಕರನ್ನು ಟೀಕೆ ಮಾಡುತ್ತಿದ್ದಾರೆ. ಕರ್ನಾಟಕದಲ್ಲಿ ಮುಖ್ಯಮಂತ್ರಿಗಳ ಸಹಿಯನ್ನು ನಕಲು ಮಾಡಿದ ಆರೋಪ ಹಾಗೂ ನೀರಾವರಿ ಇಲಾಖೆಯಲ್ಲಿ 20,000 ಕೋಟಿ ರೂಪಾಯಿಗಳ ಭ್ರಷ್ಟಾಚಾರದ ಆರೋಪವನ್ನು ಅವರದೇ ಪಕ್ಷದ ಶಾಸಕರು ಮಾಡಿದ್ದರೂ ಇಲ್ಲಿಯವರೆಗೂ ಇವರು ಉತ್ತರ ಕೊಡಲು ಸಾಧ್ಯವಾಗಿಲ್ಲ. ಬಹುಶಃ ಇಂತಹ ಆರೋಪಗಳಿಗೆ ಸಾರ್ವಜನಿಕವಾಗಿ ಉತ್ತರ ನೀಡಿದರೆ ಪಕ್ಷದಿಂದ ಆಚೆ ಹಾಕುವುದಾಗಿ ಸಂಘ ಪರಿವಾರದಿಂದ ಇವರಿಗೆ ನಿರ್ದೇಶನ ಬಂದಿರಬೇಕು ಎಂದು ಪ್ರತಿಕ್ರಿಯಿಸಿದ್ದಾರೆ.

ಹರಿಹರ ಕ್ಷೇತ್ರದ ಶಾಸಕ ಹರೀಶ್ ರವರ ಮೇಲೆ ಮೊಟ್ಟೆ ಎಸೆದ ಪ್ರಕರಣದಲ್ಲಿ ಬಿಜೆಪಿ ಅಧ್ಯಕ್ಷ ವಿಜಯೇಂದ್ರರವರ ಷಡ್ಯಂತ್ರ ಇರುವ ಕುರಿತು ಅನುಮಾನ ಇದೆ. ರಾಜಕೀಯವಾಗಿ ವಿಜಯೇಂದ್ರ ಮತ್ತು ಯಡಿಯೂರಪ್ಪನವರ ಗುಂಪಿಗೆ ವಿರುದ್ಧವಾಗಿ ಇರುವ ಹರೀಶ್ ರವರನ್ನು ರಾಜಕೀಯವಾಗಿ ಮುಗಿಸಲು ಇವರೇ ಮೊಟ್ಟೆ ಎಸೆಯಲು ಅವಕಾಶ ಮಾಡಿರಬಹುದು. ಹರೀಶ್ ರವರ ಮೇಲೆ ಇವರಿಗೆ ಇರುವ ವೈಯಕ್ತಿಕ, ರಾಜಕೀಯ ದ್ವೇಷದ ಕಾರಣಕ್ಕಾಗಿ ಇಲ್ಲಿಯವರಿಗೆ ಈ ಘಟನೆಯನ್ನು ಖಂಡಿಸುವ ಪ್ರಯತ್ನವನ್ನೇ ವಿಜಯೇಂದ್ರ ಪ್ರಾಮಾಣಿಕವಾಗಿ ಮಾಡಿಲ್ಲ. ಪಕ್ಷದಲ್ಲಿರುವ ಗುಂಪುಗಾರಿಕೆಯನ್ನು ತಡೆಯಲು ಸಾಧ್ಯವಾಗದೆ ಕೈ ಚೆಲ್ಲಿ ಕುಳಿತಿರುವ ವಿಜಯೇಂದ್ರ ಕಾಂಗ್ರೆಸ್ ನಾಯಕರನ್ನು ಟೀಕೆ ಮಾಡಿ ಸಂಘ ಪರಿವಾರವನ್ನು ಮೆಚ್ಚಿಸಲು ಹೊರಟಿದ್ದಾರೆ. ಬಿಜೆಪಿಯಲ್ಲಿ ಒಬ್ಬ ಸಮರ್ಥ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಲು ವಿಫಲರಾಗಿರುವ ವಿಜಯೇಂದ್ರ, ಕೆಪಿಸಿಸಿ ಅಧ್ಯಕ್ಷರಾದ ಬಿಕೆ ಹರಿಪ್ರಸಾದ್ ಮತ್ತು ಗೃಹ ಸಚಿವರಾದ ಪ್ರಿಯಾಂಕ ಖರ್ಗೆ ರವರನ್ನು ಟೀಕೆ ಮಾಡುವುದರ ಮೂಲಕ ಸಂಘ ಪರಿವಾರವನ್ನು ಮೆಚ್ಚಿಸಿ ತಮ್ಮ ಕುರ್ಚಿಯನ್ನು ಉಳಿಸಿಕೊಳ್ಳಲು ಒದ್ದಾಡುತ್ತಿದ್ದಾರೆ. ಇಂತಹ ಏಳೆಸುತನದ ರಾಜಕೀಯ ಮಾಡುವ ಬದಲು ರಾಜ್ಯ ಬಿಜೆಪಿ ಬಾಲ ಭವನದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದರೆ, ಬಹುಶಃ ಅವರಿಗೆ ಗೌರವ ಸಿಗಬಹುದು. ಅವರದೇ ಪಕ್ಷದ ಶಾಸಕಯತ್ನಾಳ್ ಅವರನ್ನು ಎದುರಿಸಲು ಸಾಧ್ಯವಾಗದೆ ಮನೆಯಲ್ಲಿ ಅಡಗಿ ಕುಳಿತುಕೊಳ್ಳುವ ವಿಜಯೇಂದ್ರ, ಕಾಂಗ್ರೆಸ್ ನಾಯಕರನ್ನು ಅಥವಾ ಕಾಂಗ್ರೆಸ್ ಪಕ್ಷವನ್ನು ಟೀಕಿಸುವ ಬದಲು ಅವರ ತಂದೆ ಯಡಿಯೂರಪ್ಪ ನವರ ಬಳಿ ರಾಜಕೀಯ ಅನುಭವದ ಮಾತುಗಳನ್ನು ಆಲಿಸಿ ಕಲಿತುಕೊಳ್ಳುವುದು ಕರ್ನಾಟಕದ ಹಿತದೃಷ್ಟಿಯಿಂದ ಒಳ್ಳೆಯದು ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಪಕ್ಷ ಹೇಳಲು ಬಯಸುತ್ತದೆ ಎಂದು ರಮೇಶ್ ಬಾಬು ತಿಳಿಸಿದ್ದಾರೆ.

27/07/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಜೆಕೆ ಭವನದಲ್ಲಿ ಜೆಡಿಎಸ್ ಪಕ್ಷದಿಂದ ಚೆನ್ನಮ್ಮನವರಿಗೆ ಸಂತಾಪ ಸಭೆ



ಚಿಂತಾಮಣಿ

ಮಾಜಿ ಪ್ರಧಾನ ಮಂತ್ರಿಗಳೂ ಹಾಗೂ ಜೆಡಿಎಸ್ ವರಿಷ್ಠರೂ ಆದ ಹೆಚ್.ಡಿ ದೇವೇಗೌಡರ ಪತ್ನಿ ಚೆನ್ನಮ್ಮ ನವರು ಇತ್ತೀಚೆಗೆ ನಿಧನರಾಗಿದ್ದು ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಕೋರಿ ನಗರದ ಜೆಕೆ ಭವನದಲ್ಲಿ ಜೆಡಿಎಸ್ ಪಕ್ಷದಿಂದ ಸಂತಾಪ ಸಭೆ ಏರ್ಪಡಿಸಲಾಗಿತ್ತು.

ದಿವಂಗತ ಚೆನ್ನಮ್ಮನವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಜೆಡಿಎಸ್ ಪಕ್ಷದ ಕೋರ್ ಕಮಿಟಿ ರಾಜ್ಯಾಧ್ಯಕ್ಷರು ಹಾಗೂ ಮಾಜಿ ಶಾಸಕರೂ ಆದ ಜೆಕೆ ಕೃಷ್ಣಾರೆಡ್ಡಿ ಯವರು ಚೆನ್ನಮ್ಮನವರ ಉದಾರತೆ, ಸರಳತೆ ತ್ಯಾಗಮಯ ಜೀವನ ಹಾಗೂ ಅವರ ಕುಟುಂಬದ ಸೇವೆ ಮತ್ತು ಸಮಾಜದ ಮೇಲಿನ ಅಪಾರ ಕಾಳಜಿಯನ್ನು ಸ್ಮರಿಸಿದ ಜೆಕೆ ಕೃಷ್ಣಾರೆಡ್ಡಿ ಯವರು ಚೆನ್ನಮ್ಮನವರ ಆತ್ಮಕ್ಕೆ ಶಾಂತಿ ಸಿಗಲೆಂದು ಕೋರಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಿದ್ದರು.

## 27ರಂದು ಕೋಲಾರದಲ್ಲಿ ಅದ್ದೂರಿ ಕಾರ್ಗಿಲ್ ವಿಜಯೋತ್ಸವ

ಕೋಲಾರ

ಜಿಲ್ಲಾ ಮಾಜಿ ಯೋಧರ ಟ್ರಸ್ಟ್ ವತಿಯಿಂದ ನಮ್ಮ ಜಿಲ್ಲೆಯ ಇಂದಿನ ವಿದ್ಯಾರ್ಥಿಗಳೇ ನಾಳಿನ ದೇಶ ರಕ್ಷಣೆಯ ಯೋಧರಾಗುವ ನಿರೀಕ್ಷಣೆಯಿಂದ ನಮ್ಮ ದೇಶ ರಕ್ಷಣೆ ಮಾಡಲು ಈ ಒಂದು ಕಾರ್ಯಕ್ರಮವು ಮಕ್ಕಳಲ್ಲಿ ಪ್ರೇರಣೆಯಾಗಲು ಕಾರಣವಾಗುವುದು.

ಈ ಕಾರ್ಯಕ್ರಮವು ಇದೇ 27 ರಂದು ಬೆಳಿಗ್ಗೆ 9.00 ಗಂಟೆಗೆ ಧ್ವಜಾರೋಹಣ, ರೀತ್ ಪರೇಡ್, ತ್ರಿವರ್ಣ ಧ್ವಜದ ಪಥಸಂಚಲವನ್ನು ಮೂಲಕ ವಾರ್ ಮೆಮೋರಿಯಲ್‌ನಿಂದ ಗಾಂಧಿವನದ ಅಮ್ಮವಾರಿಪೇಟೆ, ನಲ್ಲಗಂಗಮ್ಮ ದೇವಸ್ಥಾನ, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ, ಕ್ಲಾಕ್ ಟವರ್‌ನಿಂದ ಡಾ.ಬಿ.ಆರ್.ಅಂಬೇಡ್ಕರ್ ಮಕ್ಕಳ ಉದ್ಯಾನವನ ಪಿ.ಸಿ.ಬಡಾವಣೆ ಟೇಕಲ್ ಮುಖ್ಯರಸ್ತೆಯಲ್ಲಿ ನೆಲೆಸಿರುವ WAR MEMORIAL ವರೆಗೂ ನಡೆಯಲಿದ್ದು,

ಈ ಕಾರ್ಯಕ್ರಮಕ್ಕೆ ಮಾಜಿ ಯೋಧರು, ಮತ್ತು ಗಣ್ಯ ವ್ಯಕ್ತಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, 27ನೇ ವರ್ಷದ ಸುವರ್ಣ ಮಹೋತ್ಸವದ ಕಾರ್ಗಿಲ್ ವಿಜಯೋತ್ಸವ ಕಾರ್ಯಕ್ರಮ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ, ಜಿಲ್ಲಾ ರಕ್ಷಣಾಧಿಕಾರಿ ಕನಿಕ ಸಿಕ್ರಿವಾಲ್ ಹೆಚ್ಚುವರಿ ಜಿಲ್ಲಾಧಿಕಾರಿ ಎಸ್.ಎಂ.ಮಂಗಳಾ, ಉಪವಿಭಾಗಾಧಿಕಾರಿ ರೇಣುಕಾ ಪ್ರಸಾದ್ ದಿಲೀಪ್, ನಗರಸಭಾ ಆಯುಕ್ತ ವೆಂಕಟೇಶ್ ನಾಗೂರ್, ತಹಶೀಲ್ದಾರ್ ಶ್ರೀನಿವಾಸ್ ಹೆಚ್, ಭಾಗವಹಿಸುವರು. ಈ ಒಂದು ಕಾರ್ಯಕ್ರಮಕ್ಕೆ ಜಿಲ್ಲೆಯಾದ್ಯಾಂತ ಎಲ್ಲಾ ಮಾಜಿ ಯೋಧರ್ ವೀರನಾರಿಯರು, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕೋರಲಾಗಿದೆ. ಹಾಗೆಯೇ ಸಂಜೆ 6.00 ಗಂಟೆಗೆ ಕ್ಯಾಂಡ್ಲಿಂಗ್ ಮತ್ತು ದೀಪಾಲಂಕಾರ ಕಾರ್ಯಕ್ರಮವು ಇರುತ್ತದೆ. ಈ ವಿಷಯವನ್ನು ಉಚಿತವಾಗಿ ಪ್ರಕಟಿಸಲು ತಮ್ಮಲ್ಲಿ ಕೋರಿದೆ.

## ಅವ್ಯವಹಾರ ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮ

ಕೋಲಾರ

ಡಿಸಿಸಿ ಬ್ಯಾಂಕ್ ಶಾಖೆಯಿಂದ ನೇರವಾಗಿ ಸ್ವ-ಸಹಾಯ ಸಂಘಗಳಿಗೆ ನೀಡಲಾಗಿರುವ ಸಾಲ ವಿತರಣೆಗೂ, ಸುಗಟೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೂ (ಸೊಸೈಟಿ) ಯಾವುದೇ ರೀತಿಯ ಸಂಬಂಧವಿಲ್ಲ ಎಂದು ಸುಗಟೂರು ಸೊಸೈಟಿಯ ಅಧ್ಯಕ್ಷ ಎ.ಸಿ. ಭಾಸ್ಕರ್ ಸ್ಪಷ್ಟನೆ ನೀಡಿದ್ದಾರೆ.

ಅಕ್ರಮಕ್ಕೂ ಸೊಸೈಟಿಗೂ ಸಂಬಂಧವಿಲ್ಲ ಇತ್ತೀಚೆಗೆ ಸುಗಟೂರು ಹೋಬಳಿ ವ್ಯಾಪ್ತಿಯಲ್ಲಿ 130 ನಕಲಿ ಸ್ವ-ಸಹಾಯ ಸಂಘಗಳಿಗೆ ಸಾಲ ವಿತರಿಸಿ ಅಕ್ರಮ ಎಸಗಲಾಗಿದೆ ಎಂದು ಆರೋಪ ಕೇಳಿಬಂದಿತ್ತು. ಈ ಕುರಿತು ಡಿಸಿಸಿ ಬ್ಯಾಂಕಿನ ವ್ಯವಸ್ಥಾಪಕ ನಿರ್ದೇಶಕರಿಗೆ (ಒಆ) ದೂರು ಸಲ್ಲಿಕೆಯಾದ ಹಿನ್ನೆಲೆಯಲ್ಲಿ, ತನಿಖಾ ತಂಡವು ಗ್ರಾಮಗಳಿಗೆ ಭೇಟಿ ನೀಡಿ ವರದಿ ಸಲ್ಲಿಸಿದೆ. ಆ ವರದಿಯನ್ನಾಧರಿಸಿ ಪತ್ರಿಕೆಗಳಲ್ಲಿ ಸುದ್ದಿಯೂ ಪ್ರಕಟವಾಗಿದೆ. ಆದರೆ, ಈ ಅಕ್ರಮವು ಡಿಸಿಸಿ ಬ್ಯಾಂಕಿನಿಂದ ನೇರವಾಗಿ ವಿತರಣೆಯಾದ ಸಾಲಕ್ಕೆ ಸಂಬಂಧಿಸಿದ್ದಾಗಿದ್ದು, ಇದಕ್ಕೂ ಸುಗಟೂರು ಸೊಸೈಟಿಗೂ ಯಾವುದೇ ಸಂಬಂಧವಿರುವುದಿಲ್ಲ.

ತನಿಖೆಗೆ ಪೂರ್ಣ ಸಹಕಾರ: ತನಿಖಾ ತಂಡವು ಗ್ರಾಮಗಳಿಗೆ ಹಾಗೂ ಸೊಸೈಟಿಗೆ ಭೇಟಿ ನೀಡಿದಾಗ ನಾವು ಪೂರ್ಣ ಪ್ರಮಾಣದಲ್ಲಿ ಸಹಕರಿಸಿದ್ದೇವೆ. ಮುಂದೆಯೂ ಯಾವುದೇ ರೀತಿಯ ತನಿಖೆಗೆ ಸಹಕರಿಸಲು ಸಿದ್ಧರಿದ್ದೇವೆ. ಅವ್ಯವಹಾರ ನಡೆಸಿ ಹಣ ಲೂಟಿ ಮಾಡಿರುವ ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂಬುದು ನಮ್ಮ ಖಡಕ್ ಒತ್ತಾಯವಾಗಿದೆ.

ಸಾಲ ವಸೂಲಿಯಲ್ಲಿ ಹೆಗ್ಗಳಿಕೆ

ಸುಗಟೂರು ಸೊಸೈಟಿ ಮೂಲಕ ಸ್ವ-ಸಹಾಯ ಸಂಘಗಳಿಗೆ ನೀಡಲಾಗಿರುವ ಸಾಲವು ಶೇ. 99 ರಷ್ಟು ವಸೂಲಿಯಾಗಿದೆ. ಡಿಸಿಸಿ ಬ್ಯಾಂಕಿಗೆ ಸಾಲ ಮರುಪಾವತಿ ಮಾಡುವಲ್ಲಿ ಸುಗಟೂರು ಸೊಸೈಟಿಯು ಯಾವುದೇ ಸುಸ್ತಿಯಿಲ್ಲದೆ (ಓಕಿಂ ಇಲ್ಲದೆ) ಜಿಲ್ಲೆಯಲ್ಲೇ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಏಕೈಕ ಸೊಸೈಟಿ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಸೊಸೈಟಿ ಮೂಲಕ ನೀಡಲಾದ ಸಾಲದ ವಿವರ

26/08/2022:196 ಸ್ವ-ಸಹಾಯ ಸಂಘಗಳಿಗೆ 9.80 ಕೋಟಿ ಸಾಲ ನೀಡಲಾಗಿದೆ.27/03/2023: ರಲ್ಲಿ 176 ಸ್ವ-ಸಹಾಯ ಸಂಘಗಳಿಗೆ 8.80 ಕೋಟಿ ಸಾಲ ನೀಡಲಾಗಿದೆ.ಒಟ್ಟು 18.60 ಕೋಟಿ ಸಾಲ ವಿತರಣೆಯಲ್ಲಿ ಈಗಾಗಲೇ 17.3 ಕೋಟಿ ವಸೂಲಿಯಾಗಿದೆ. ಬಾಕಿ ಇರುವ 2.8 ಕೋಟಿ ವಸೂಲಿಗೆ ಇನ್ನು ಸಮಯಾವಕಾಶವಿದ್ದು, ನಿಯಮಾನುಸಾರ ಸರಿಯಾದ ಸಮಯಕ್ಕೆ ವಸೂಲಿ ಮಾಡಲಾಗುವುದು. ಇದಕ್ಕೆ ಸಂಬಂಧಿಸಿದ ಎಲ್ಲ ಕಡತಗಳು ಸೊಸೈಟಿಯಲ್ಲಿದ್ದು, ಯಾರಾದರೂ ಖುದ್ದು ಭೇಟಿ ನೀಡಿ ಪರಿಶೀಲಿಸಬಹುದು.ದಿನಾಂಕ: 03/02/2020: 116 ಸ್ವ-ಸಹಾಯ ಸಂಘಗಳಿಗೆ 5.57 ಕೋಟಿ ಸಾಲ, 03/02/2022: ರಲ್ಲಿ 116 ಸ್ವ-ಸಹಾಯ ಸಂಘಗಳಿಗೆ 5.80 ಕೋಟಿ ಸಾಲ. ಒಟ್ಟು 232 ಸಂಘಗಳ ಪೈಕಿ ಈಗಾಗಲೇ 217 ಸಂಘಗಳ ಸಾಲವನ್ನು ಸಂಪೂರ್ಣವಾಗಿ ವಸೂಲಿ ಮಾಡಲಾಗಿದೆ. 2022 ಮತ್ತು 2023 ರಲ್ಲಿ ಸಂಘಗಳಿಗೆ ನೀಡಲಾದ ಸಾಲವು ನೇರವಾಗಿ ಸದಸ್ಯರ ಉಳಿತಾಯ ಖಾತೆಗೆ ಜಮೆಯಾಗಿದ್ದು, ಪ್ರತಿಯೊಬ್ಬರೂ ಎಟಿಎಂ (ATM) ಮೂಲಕವೇ ಹಣವನ್ನು ಪಡೆದುಕೊಂಡಿದ್ದಾರೆ.ಮೇ 2022 ರಲ್ಲಿ ವಿತರಣೆಯಾಗಿರುವ ಸಾಲವು ಕೋಲಾರ ಡಿಸಿಸಿ ಬ್ಯಾಂಕ್ ಶಾಖೆಯಿಂದ ನೇರವಾಗಿ ನೀಡಲ್ಪಟ್ಟಿದ್ದಾಗಿದೆ.

## ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಆರಂಭ: ರಾಧಾಕೃಷ್ಣನ್ ಓಜಾ

ಕೋಲಾರ

ಕಾಂಗ್ರೆಸ್ ಪಕ್ಷದ ನೂತನ ಜಿಲ್ಲಾ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಆರಂಭಗೊಂಡಿದ್ದು, ಪಕ್ಷದ ಯುವಕರು, ಮಹಿಳೆಯರು, ಹಿರಿಯ ಮುಖಂಡರು ಜನಪ್ರತಿನಿಧಿಗಳು ಹಾಗೂ ವಿವಿಧ ಘಟಕಗಳ ಪದಾಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ ವರದಿ ಸಿದ್ಧಪಡಿಸಿ ಕಾಂಗ್ರೆಸ್ ಹೈಕಮಾಂಡ್‌ಗೆ ಸಲ್ಲಿಸಲಾಗುವುದು ಎಂದು ಎಐಸಿಸಿ ಕಾರ್ಯದರ್ಶಿ ಹಾಗೂ ಜಿಲ್ಲಾ ವೀಕ್ಷಕ ರಾಧಾಕೃಷ್ಣನ್ ಓಜಾ ತಿಳಿಸಿದರು

ನಗರದ ಪತ್ರಕರ್ತರ ಭವನದಲ್ಲಿ ಶನಿವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಎಲ್ಲ ಮುಖಂಡರ ಅಭಿಪ್ರಾಯಗಳನ್ನು ಪಡೆದು ಸಮರ್ಥ ಹಾಗೂ ಸಂಘಟನಾ ಸಾಮರ್ಥ್ಯ ಹೊಂದಿರುವ ಜಿಲ್ಲಾ ಅಧ್ಯಕ್ಷರನ್ನು ಆಯ್ಕೆ ಮಾಡಲಾಗುವುದು ಆಯ್ಕೆಯಾದ ಅಧ್ಯಕ್ಷರಿಗೆ ಅಗತ್ಯ ತರಬೇತಿ ನೀಡಿ ಪಕ್ಷದ ಸಂಘಟನೆ ಬಲಪಡಿಸುವ ಕಾರ್ಯದಲ್ಲಿ ತೊಡಗಿಸಿಕೊಳ್ಳುವಂತೆ ಸಜ್ಜುಗೊಳಿಸಲಾಗುತ್ತದೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷ ದೇಶಕ್ಕೆ ಸ್ವಾತಂತ್ರ್ಯ ತಂದುಕೊಡುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಇದೀಗ ರಾಹುಲ್ ಗಾಂಧಿ



ಅವರ ಮಾರ್ಗದರ್ಶನದಲ್ಲಿ ಪಕ್ಷವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ "ಸಂಘಟನ್ ಸೃಜನ್ ಅಭಿಯಾನ" ಹಮ್ಮಿಕೊಳ್ಳಲಾಗಿದೆ. ಇದರ ಭಾಗವಾಗಿ ಕೆಪಿಸಿಸಿ ವತಿಯಿಂದ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಹೊಸ ಅಧ್ಯಕ್ಷರ ನೇಮಕ ಪ್ರಕ್ರಿಯೆ ನಡೆಯುತ್ತಿದೆ ಎಂದು ವಿವರಿಸಿದರು.

ಜಿಲ್ಲಾವಾರು ಹಾಗೂ ವಿಧಾನಸಭಾ ಕ್ಷೇತ್ರವಾರು ಪ್ರಮುಖ ಮುಖಂಡರ ಅಭಿಪ್ರಾಯ ಸಂಗ್ರಹಿಸಲಾಗುವುದು. ಜಿಲ್ಲಾ ಅಧ್ಯಕ್ಷ ಸ್ಥಾನಕ್ಕೆ ಆಸಕ್ತರಿಂದ ಅರ್ಜಿಗಳನ್ನು ಆಹ್ವಾನಿಸಿ, ಅವುಗಳನ್ನು ಪರಿಶೀಲಿಸಿದ ವರದಿಯೊಂದಿಗೆ ಎಐಸಿಸಿಗೆ ಸಲ್ಲಿಸಲಾಗುವುದು. ಪಕ್ಷಕ್ಕೆ ಸಮರ್ಥ ನಾಯಕತ್ವ ರೂಪಿಸುವುದು ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಕೆಪಿಸಿಸಿ ರಾಜ್ಯ ಉಪಾಧ್ಯಕ್ಷ ಹಾಗೂ ಮಾಜಿ ಶಾಸಕ ಎನ್ ಸಂಪಂಗಿ, ಪ್ರಧಾನ ಕಾರ್ಯದರ್ಶಿಗಳಾದ ವೆಂಕಟೇಶ್ವರ್, ವೆಂಕಟೇಶಲು ಕಾರ್ಯಕ್ರಮದ ಸಹ ಸಂಯೋಜಕಿ ಯೋಗೇಶ್ವರಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮೀನಾರಾಯಣ, ಕಾರ್ಯಾಧ್ಯಕ್ಷರಾದ ಮ್ಯಾಕಲ ನಾರಾಯಣಸ್ವಾಮಿ, ಊರಬಾಗಿಲು ಶ್ರೀನಿವಾಸ್, ಹಿರಿಯ ಮುಖಂಡ ಬೆಳಗಾನಹಳ್ಳಿ ಮುನಿವೆಂಟಪ್ಪ, ಕುಡಾ ಅಧ್ಯಕ್ಷ ಮಹಮ್ಮದ್ ಹನೀಫ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮೈಲಾಂಡಹಳ್ಳಿ ಮುರಳಿ, ಸೈಯದ್ ಅಫ್ಸರ್, ಓಬಿಸಿ ರಾಜ್ಯ ಉಪಾಧ್ಯಕ್ಷ ಒಬಿಸಿ ಮಂಜುನಾಥ್ ಇದ್ದರು.

## ಕುಣಿಗಲ್: ರಸ್ತೆ ಡಾಂಬರೀಕರಣ ಅನುದಾನಕ್ಕೆ ಬೇಡಿಕೆ

ಕುಣಿಗಲ್

ಪಟ್ಟಣದ 23 ವಾರ್ಡುಗಳ ರಸ್ತೆಗಳ ಡಾಂಬರೀಕರಣ ಕೈಗೊಳ್ಳಲು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಂದ 90 ಕೋಟಿ ರೂ. ಅನುದಾನ ಬೇಡಿಕೆ ಸಲ್ಲಿಸಲಾಗಿದೆ ಎಂದು ಶಾಸಕ ಡಾ. ಎಚ್.ಡಿ. ರಂಗನಾಥ್ ತಿಳಿಸಿದರು.

ಪಟ್ಟಣದ ಹಲವಾರು ಬಡಾವಣೆಗಳಲ್ಲಿ ಮೂಲಸೌಕರ್ಯ ಯೋಜನೆ ಅಡಿಯಲ್ಲಿ ತುಮಕೂರು ರಸ್ತೆಯಿಂದ ದಿವ್ಯ ಪ್ಯಾಲೇಸ್ ವರೆಗೆ ಹಾಗೂ ಹೌಸಿಂಗ್ ಬೋರ್ಡ್ ವಾರ್ಡ್ ನಂಬರ್ 18 ಹಾಗೂ ವಾರ್ಡ್ ನಂಬರ್ 3, ವಾರ್ಡ್ ನಂಬರ್ 22ರಲ್ಲಿ 3 ಕೋಟಿ ರೂ. ವೆಚ್ಚದಲ್ಲಿ ರಸ್ತೆಗಳ ಡಾಂಬರೀಕರಣ ಕಾಂಕ್ರೀಟ್ ರಸ್ತೆ, ಚರಂಡಿಗಳು ಸೇರಿದಂತೆ ಮೂಲ ಸೌಕರ್ಯಕ್ಕೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು.

ಪಟ್ಟಣದ ಎಲ್ಲಾ ವಾರ್ಡುಗಳಲ್ಲಿಯೂ ಉತ್ತಮವಾದ ಗುಣಮಟ್ಟದ ರಸ್ತೆ ಚರಂಡಿಗಳನ್ನು ಮಾಡಿಸಲು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರವರಲ್ಲಿ 90 ಕೋಟಿ ರೂ. ಅನುದಾನದ ಅಂದಾಜು ಪಟ್ಟಿಯನ್ನು ಸಲ್ಲಿಸಲಾಗಿದೆ. ಸಾರ್ವಜನಿಕರು ಬಿಡದೆ ಪರಿಶೀಲಿಸಿಗುತ್ತಿಗೆದಾರರಿಂದ ಗುಣಮಟ್ಟದ ಚರಂಡಿ ರಸ್ತೆ ಮಾಡಿಸಬೇಕು ಮತ್ತು ಸಾರ್ವಜನಿಕರು ರಸ್ತೆಗಳನ್ನು



ಸ್ವಚ್ಛವಾಗಿ ಇಟ್ಟುಕೊಳ್ಳಬೇಕು ಪಟ್ಟಣದಲ್ಲಿ ಹುಚ್ಚಮಾಸ್ತಿ ಗೌಡ ಸರ್ಕಲ್ ಹಾಗೂ ಗ್ರಾಮ ದೇವತೆ ಸರ್ಕಲ್ ನಲ್ಲಿ ಸಿಗ್ನಲ್ ಲೈಟ್‌ಗಳನ್ನು ಅಳವಡಿಸಲು ಕ್ರಮ ಕೈಗೊಂಡಿದ್ದು, ಮೂಲಭೂತ ಸೌಲಭ್ಯ ಕಲ್ಪಿಸಲು ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಪುರಸಭಾ ಸದಸ್ಯರಾದ ಪಾಪಣ್ಣ, ರೂಪಿಣಿ, ಮಂಜುಳಾ ರಂಗಪ್ಪ, ಸರಸ್ವತಿ, ಜಯಲಕ್ಷ್ಮೀ, ರಂಗಸ್ವಾಮಿ, ಶಂಕರ್, ಮುಖ್ಯ ಅಧಿಕಾರಿ ರವಿಕುಮಾರ್, ಇಂಜಿನಿಯರ್ ಬಿಂದುಸಾರ ಉಪಸ್ಥಿತರಿದ್ದರು.

## 'ಕೊಬ್ಬಿನಾಂಶ ಆಧಾರಿತ ಹಾಲಿನ ದರ ನಿಗಧಿ ಶೀಘ್ರವೇ ಜಾರಿ'

ಬೂದಿಕೋಟೆ

ಹಾಲಿನ ಗುಣಮಟ್ಟ ಹಾಗೂ ಕೊಬ್ಬಿನಾಂಶದ ಆಧಾರದ ಮೇಲೆ ರೈತರಿಗೆ ದರ ನಿಗದಿಪಡಿಸುವ ಹೊಸ ವ್ಯವಸ್ಥೆ ಜಾರಿಯಾಗುತ್ತಿದ್ದು, ರೈತರು ಗುಣಮಟ್ಟದ ಹಾಲು ಉತ್ಪಾದನೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಕೋಲಾರ ಹಾಲು ಒಕ್ಕೂಟದ ಉಪ ವ್ಯವಸ್ಥಾಪಕ ಡಾ. ಸಿ.ಎನ್.ಗಿರೀಶ್ ಗೌಡ ಹೇಳಿದರು.

ಹೋಬಳಿಯ ಕೆ.ಕದಿರೇನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಕಚೇರಿ ಆವರಣದಲ್ಲಿ ಹಮ್ಮಿಕೊಂಡಿದ್ದ 2025–26ನೇ ಸಾಲಿನ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, ಕೊಬ್ಬಿನಾಂಶ ಹೆಚ್ಚಿರುವ ಹಾಲಿಗೆ ಹೆಚ್ಚಿನ ದರ ದೊರೆಯುವುದರಿಂದ ರೈತರು ಹಾಲಿನ ಗುಣಮಟ್ಟ ಹೆಚ್ಚಿಸುವತ್ತ ಗಮನಹರಿಸಬೇಕು. ಇದಕ್ಕಾಗಿ ಉಚಿತ ಪೌಡರ್‌ಗಳು ಹಾಗೂ ಪಶುಪಾಲನಾ ಸಂಬಂಧಿತ ನೆರವು ನೀಡಲಾಗುವುದು. ಕಡಿಮೆ ಕೊಬ್ಬಿನಾಂಶದ ಹಾಲು ಉತ್ಪಾದಿಸುವ ರೈತರಿಗೆ ಅಗತ್ಯ ಸಲಹೆ ಹಾಗೂ ಮಾರ್ಗದರ್ಶನ ನೀಡಲಾಗುವುದು ರೈತರು ಅದನ್ನು ಪಾಲಿಸಬೇಕು ಎಂದರು.

ಕೋಲಾರ ಜಿಲ್ಲೆಯಲ್ಲಿ ಮುರ್ರಾ ಎಮ್ಮೆಗಳನ್ನು ಪರಿಚಯಿಸುವ ಯೋಜನೆ ರೂಪಿಸಲಾಗಿದ್ದು, ಎಮ್ಮೆ ಖರೀದಿಸುವ ರೈತರಿಗೆ 30 ಸಾವಿರ ಸಹಾಯಧನ ನೀಡಲಾಗುತ್ತದೆ. ಎಮ್ಮೆ ಹಾಲಿನಲ್ಲಿ ಹೆಚ್ಚಿನ ಕೊಬ್ಬಿನಾಂಶ ಇರುವುದರಿಂದ ಉತ್ತಮ ಆದಾಯ ಗಳಿಸಲು ಸಾಧ್ಯವಾಗುತ್ತದೆ ರೈತರು ಈ ಯೋಜನೆಯ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದರು.



ಕೆ.ಕದಿರೇನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘವು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ, ಸಂಘದಲ್ಲಿ 100 ರೂ. ವ್ಯವಹಾರ ಮಾಡಿದ ರೈತರಿಗೆ ಸುಮಾರು 2.30 ಪೈಸೆ ಬೋನಸ್ ನೀಡಲಾಗುತ್ತಿದೆ ಇಷ್ಟೊಂದು ಬೋನಸ್ ಅನ್ನು ಬೇರೆ ಯಾವುದೇ ಡೈರಿಯಲ್ಲಿ ರೈತರಿಗೆ ನೀಡುತ್ತಿಲ್ಲ ಎಂದರು.

ಒಂದು ವಾರದೊಳಗೆ ಮಿಲ್ಕಿಂಗ್ ಮೆಷಿನ್‌ಗಳನ್ನು ಹಾಗೂ ಒಂದು ತಿಂಗಳೊಳಗೆ ಹಾಲಿನ ಪೂರೈಕೆಯ ಪ್ರಮಾಣಕ್ಕೆ ಅನುಗುಣವಾಗಿ ಮ್ಯಾಟ್‌ಗಳನ್ನು ವಿತರಿಸಲಾಗುವುದು ಎಂದರು.

ಸಂಘದ ಅಧ್ಯಕ್ಷ ಮುನಿರಾಜು ಮಾತನಾಡಿ, ಬಿಎಂಸಿಯನ್ನು ಉತ್ತಮವಾಗಿ ನಿರ್ವಹಿಸುತ್ತಿರುವುದರಿಂದ ನಮ್ಮ ಸಂಘಕ್ಕೆ ಕಳೆದ ಸಾಲಿನಲ್ಲಿ ಅತ್ಯುತ್ತಮ ಬಿಎಂಸಿ ಪ್ರಶಸ್ತಿ ಹಾಗೂ ಸಹಾಯಧನ ದೊರೆತಿದೆ. ಸಂಘದ ಆಡಳಿತ ಸಂಪೂರ್ಣ ಪಾರದರ್ಶಕವಾಗಿರಬೇಕೆಂಬ ಉದ್ದೇಶದಿಂದ ಪ್ರತಿಯೊಂದು ಮಾಹಿತಿಯನ್ನು ನೋಟಿಸ್ ಬೋರ್ಡ್‌ನಲ್ಲಿ ಪ್ರಕಟಿಸಿ ರೈತರಿಗೆ ತಿಳಿಸಲಾಗುತ್ತಿದೆ ಎಂದರು.

ರೈತರು ಗುಣಮಟ್ಟದ ಹಾಲನ್ನು ಪೂರೈಕೆ ಮಾಡುತ್ತಿರುವುದರಿಂದಲೇ ನಮ್ಮ ಸಂಘ ಈ ಮಟ್ಟಿಗೆ ಬೆಳೆಯಲು ಸಾಧ್ಯವಾಗಿದೆ ಎಲ್ಲ ರೈತರಿಗೂ ಈ ಸಂದರ್ಭದಲ್ಲಿ ಧನ್ಯವಾದಗಳನ್ನು ಸಲ್ಲಿಸುತ್ತೇನೆ ಮುಂದಿನ ದಿನಗಳಲ್ಲಿ ಸಂಘದ ಮೂಲಕ ರೈತರಿಗೆ ಇನ್ನಷ್ಟು ಅನುಕೂಲವಾಗುವ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ರಾಜೇಂದ್ರ, ನಿರ್ದೇಶಕರಾದ ಸತೀಶ್, ದೇವರಾಜ್, ನಾರಾಯಣಸ್ವಾಮಿ, ವೆಂಕಟೇಶಪ್ಪ, ಚೌಡಪ್ಪ, ನಾಗರಾಜ್, ಮುನಿಯಪ್ಪ, ಸರೋಜಮ್ಮ, ನೀಲಮ್ಮ, ವಿಸ್ತರಣಾಧಿಕಾರಿ ಭಾನುಪ್ರಕಾಶ್, ಮಾಜಿ ಅಧ್ಯಕ್ಷರಾದ ಎಂ.ನಾಗರಾಜ್, ತಿಮ್ಮಯ್ಯ, ಕೆ.ಸಿ.ಮೂರ್ತಿ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ವೆಂಕಟರಾಮಯ್ಯ, ಮುಖಂಡರಾದ ಗೋವಿಂದಪ್ಪ, ರಾಜಪ್ಪ, ಬಾಬುರೆಡ್ಡಿ ಹಾಗೂ ಸಿಬ್ಬಂದಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಫಲಾನುಭವಿಗಳಿಗೆ ಪಂಪ್, ಮೋಟಾರ್ ವಿತರಣೆ

ತುಮಕೂರು

ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ತುಮಕೂರು ಗ್ರಾಮಾಂತರ ಕ್ಷೇತ್ರದ ಫಲಾನುಭವಿಗಳಿಗೆ ಶಾಸಕ ಬಿ. ಸುರೇಶ್‌ಗೌಡರು ಶನಿವಾರ ನಗರದ ತಮ್ಮ ಕಚೇರಿಯಲ್ಲಿ ಪಂಪು, ಮೋಟಾರ್ ವಿತರಿಸಿದರು.

ನಿಗಮದಿಂದ ಫಲಾನುಭವಿಗಳ ಜಮೀನಿನಲ್ಲಿ ಕೊರೆದಿರುವ ಕೊಳವೆಬಾವಿಗಳಿಗೆ ಸಂಪರ್ಕ ಒದಗಿಸಲು ಪಂಪು, ಮೋಟಾರ್, ಪೈಪ್ ಹಾಗೂ ಇತರೆ ಸಾಮಗ್ರಿಗಳನ್ನು ವಿತರಿಸಿದರು.

ಈ ವೇಳೆ ಮುಖಂಡರಾದ ಸಿದ್ದೇಗೌಡರು, ಹೊಳ ಕಲ್ಲು ಗ್ರಾ.ಪಂ. ಮಾಜಿ ಅಧ್ಯಕ್ಷ ಎ.ಹೆಚ್. ಆಂಜನಪ್ಪ, ಫಲಾನುಭವಿಮಸೂದ್ ಉಲ್ಲಾ ಖಾನ್, ಜಬ್ಬರ್ ಖಾನ್, ಸೈಯದ್ ದಸ್ತಗೀರ್, ಮುಖಂಡ ನರುಗನಹಳ್ಳಿ ಕುಮಾರ್, ಅಮಿದ್, ರಮೇಶ್, ವೀರನಾಯಕನಹಳ್ಳಿ




ರಾಮಕೃಷ್ಣಯ್ಯ, ನಿಗಮದ ವ್ಯವಸ್ಥಾಪಕ ಮಹಮ್ಮದ್ ಅಲೀಮ್ ಉಲ್ಲಾ ಇತರರು ಭಾಗವಹಿಸಿದ್ದರು.

## ಮನಸ್ಸು ಕಟ್ಟುವಂತಾ ಕಾರ್ಯ ಮಾಡಿದ್ದಾರೆ: ಡಾ. ಹನುಮಂತನಾಥ ಸ್ವಾಮೀಜಿ

ಕೊರಟಗೆರೆ

ಶ್ರೀಕ್ಷೇತ್ರ ಸಿದ್ದರಬೆಟ್ಟದ ಶ್ರೀವೀರಭದ್ರ ಶಿವಾಚಾರ್ಯ ಸ್ವಾಮೀಜಿಗಳು ಕೇವಲ ಒಂದು ಮಠ ಕಟ್ಟವಂತ ಕೆಲಸ ಮಾಡಲಿಲ್ಲ ಎಲ್ಲಾ ಸಮುದಾಯದವರ ಮನಸ್ಸುಗಳನ್ನು ಕಟ್ಟುವಂತಾ ಕೆಲಸ ಮಾಡಿದ್ದಾರೆ ಎಂದು ಎಲೆ ರಾಂಪುರದ ಕುಂಚಿಟಿಗರ ಮಹಾಸಂಸ್ಥಾನ ಮಠದ ಡಾ. ಶ್ರೀಹನು ಮಂತನಾಥ ಸ್ವಾಮೀಜಿ ತಿಳಿಸಿದರು.

ಸಿದ್ದರಬೆಟ್ಟದ ರಂಭಾಪುರಿ ಖಾಸಾ ಶಾಖಾ ಮಠದ ಪೀಠಾಧ್ಯಕ್ಷ ಶ್ರೀ ವೀರಭದ್ರ ಶಿವಾಚಾರ್ಯ ಸ್ವಾಮೀಜಿಗಳ 45ನೇ ವದಂತಿ (ಜನ್ಮದಿನದ) ಮಹೋತ್ಸವ ಅಂಗವಾಗಿ ಏರ್ಪಡಿಸಿದ್ದ ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಶುಭಹಾರೈಸಿ ಮಾತನಾಡಿ ಸಿದ್ದರಬೆಟ್ಟದ ಶ್ರೀಗಳು ಕ್ಷೇತ್ರದ ಎಲ್ಲಾ ವರ್ಗದ ಜಾತಿಯ ಬೇದವಿಲ್ಲದೆ ತಾಯಿ ಹೃದಯದಿಂದ ಬಂದ ಸದ್ಭಕ್ತರಿಗೆ ಆಶ್ರೀರ್ವದಿಸಿ ಸುತ್ತಮುತ್ತಲಿನ ಗ್ರಾಮೀಣ ಸೇರಿದಂತೆ ರಾಜ್ಯದ ಅನೇಕ ಬಾಗಗಳಿಂದ ಶ್ರೀ ಮಠಕ್ಕೆ ಬರುವ ಭಕ್ತರಿಗೆ ಮಾರ್ಗದರ್ಶನ ನೀಡುತಿರುವುದು ಕ್ಷೇತ್ರದ ಕಲಶವಾಗಿ ರಾಜ್ಯಕ್ಕೆ ಸಿದ್ದರಬೆಟ್ಟ ಪುಣ್ಯ ಕ್ಷೇತ್ರದೊಂದಿಗೆ ಧಾರ್ಮಕ ಕ್ಷೇತ್ರವಾಗಿ ಪ್ರಸಿದ್ದಿ ಪಡೆಯುವಂತೆ ಮಾಡಿರುವ ಸಿದ್ದಿಪುರುಷರು ಶ್ರೀ ವೀರಭ ದ್ರಶಿವಾಚಾರ್ಯಸ್ವಾಮೀಜಿಗಳು ಎಂದರೆ ತಪ್ಪಾಗಲಾರದು



ಎಂದು ತಿಳಿಸಿದರು.

ಈ ವೇಳೆ ಮಾಜಿ ಜಿ.ಪಂ. ಸದಸ್ಯರ ಪಿ.ಎನ್.ಕೃಷ ಮೂರ್ತಿ ಮಾತನಾಡಿ, ಕ್ಷೇತ್ರದಲ್ಲಿ ಸಿದ್ದರಬೆಟ್ಟದ ಶ್ರೀಗಳು ಮತ್ತು ಎಲೆರಾಂಪುರದ ಶ್ರೀಗಳು ಇದ್ದು ಈ ಇಬ್ಬರು ಸ್ವಾಮೀಜಿಗಳು ಯಾರೇ ಕರೆದರೂ ಎಲ್ಲಿಗೆ ಕರೆದರೂ ಯಾವುದೇ ಜಾತಿ ಬೇಧವಿಲ್ಲದೆ.

ಇಬ್ಬರೂ ಒಟ್ಟಿಗೆ ಹೋಗಿ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಮಾರ್ಗದರ್ಶನ ನೀಡಿ ಅವರ ಧಾರ್ಮಿಕ ಕಾರ್ಯಕ್ರಮ ಯಶಸ್ವಿಗೊಳಿಸುತ್ತಾರೆ, ಸಿದ್ದರಬೆಟ್ಟದ ಶ್ರೀಮಠದಲ್ಲಿ ಪ್ರತಿವರ್ಷ ಸಾಮುಹಿಕ ವಿವಾಹಗಳು ನಡೆಯುತ್ತಿದೆ. ಅದರೊಂದಿಗೆ ಇನ್ನಿತರ ದಿನ ಗಳಲ್ಲಿ ವಿವಾಹ ಕಾರ್ಯಗಳು ನಡೆಯತ್ತಿದ್ದು, ಈ ವಿವಾಹ ಗಳಿಗೆ ಅನುಕೂಲವಾಗುವಂತೆ ಜಗದ್ಗುರು ರೇಣುಕಾ ಶಿವಾಚಾರ್ಯರ ಆಶೀರ್ವಾದದಿಂದ ಶ್ರೀಮಠದ ಆವರಣದಲ್ಲಿ ಒಂದು ಸುಸರ್ಜಿತ ಸಮುದಾಯ ಭವನ (ಕಲ್ಯಾಣ ಮಂಟಪ) ವನ್ನು ನಾನು ನಿರ್ಮಿಸಿಕೊಡುವುದಾಗಿ ತಿಳಿಸಿದ ಅವರು ಮುಂದಿನ ಶ್ರಾವಣ ಮಾಸದಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ಗುದ್ದಲಿ ಪೂಜೆ ಮಾಡುವುದಾಗಿ ತಿಳಿಸಿದ ಅವರು ಶ್ರೀಮಠವು ಶ್ರೀಗಳು ಧಾರ್ಮಿಕ ಕಾರ್ಯಕ್ರಮದೊಂದಿಗೆ ವಿದ್ಯಾಧಾನ ಮತ್ತು ನಿತ್ಯ ದಾಸೋಹ ನೆಡೆಸುತ್ತಿದ್ದು ಮುಂದಿನ ದಿನಗಳಲ್ಲಿ ಶೈಕ್ಷಣಿಕವಾಗಿ ಬೆಳೆಯಲಿದೆ ಎಂದರು.

ಕಾರ್ಯಕ್ರಮದಲ್ಲಿ ಶಶಿಹುಲಿಕುಂಟೆಮಠ ಮಾತನಾಡಿ ಶ್ರೀಗಳ ಧಾರ್ಮಿಕ ಕಾರ್ಯಕ್ರಮಗಳ ಬಗ್ಗೆ ಮಾತನಾಡಿ ಮುಂದಿನ ದಿನಗಳಲ್ಲಿ ಮಠದಲ್ಲಿ ವಿದ್ಯಾಭ್ಯಾಸಕ್ಕಾಗಿ ಒಂದು ಶಾಲೆಯನ್ನು ನಿರ್ಮಿಸಿ ಕೊಡುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಪರ್ವ ಗ್ರೂಪ್ ಸಂಸ್ಥಾಪಕ ನೀಲೇಶ್, ಮುಖಂಡರುಗಳಾದ ರುದ್ರೇಶ್, ಕಾಮರಾಜು, ಬದ್ರಣ್ಣ, ದರ್ಶನ್, ಸಿದ್ದರಬೆಟ್ಟ ರೋಟರಿಯನ್ ಸದಸ್ಯರುಗಳು ಉಪಸ್ಥಿತರಿದ್ದರು.

## ಎಸ್ ಜಾನಕಿನ ಸ್ಮರಣಾರ್ಥ ಉಚಿತ ಲೇಖನ ಸಾಮಗ್ರಿಗಳ ವಿತರಣೆ

ತಿಪಟೂರು

ಕನ್ನಡ ಚಲನಚಿತ್ರ ರಂಗದ ಸಂಗೀತ ಕ್ಷೇತ್ರದಲ್ಲಿ ಹಾಡುಗಾರಿಕೆ ಯನ್ನು ಉಸಿರಾಗಿಸಿಕೊಂಡ ಜಾನಕಮ್ಮನವರ ಸ್ವರ ಮಾಧುರ್ಯಕ್ಕೆ ಮನ ಸೋಲದವರೇ ಇಲ್ಲ ಎಂದು ಸಿದ್ಧಿವಿನಾಯಕ ಸೇವಾ ಸಂಘದ ಅಧ್ಯಕ್ಷ ಮಾದಿಹಳ್ಳಿ ಉಮೇಶ್ ತಿಳಿಸಿದರು.

ತಾಲೂಕಿನ ಮೀಸೆ ತಿಮ್ಮನಹಳ್ಳಿಯ ಸರ್ಕಾರಿ ಕಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಜಯಕರ್ನಾಟಕ ಜನಪರ ವೇದಿಕೆ ವತಿಯಿಂದ ಹಮ್ಮಿಕೊಂಡಿದ್ದ, ಇತ್ತೀಚೆಗೆ ನಿಧನರಾದ ಕನ್ನಡ ಚಲನಚಿತ್ರ ರಂಗದ ಗಾನಕೋಗಿಲೆ ಎಸ್.ಜಾನಕಿ ಅಮ್ಮನವರಿಗೆ ನುಡಿ ನಮನ ಹಾಗೂ ಸ್ಮರಣಾರ್ಥವಾಗಿ ಶಾಲಾ ವಿದ್ಯಾರ್ಥಿಗಳಿಗೆ ಉಚಿತ ನೋಟ್ ಬುಕ್ ಮತ್ತು ಲೇಖನ ಸಾಮಗ್ರಿಗಳ ವಿತರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸುಮಾರು 48 ಸಾವಿರಕ್ಕೂ ಅಧಿಕ ಹಾಡುಗಳನ್ನು ಹಾಡಿದ ಅಸಾಧಾರಣ ಗಾಯಕಿ 30ಕ್ಕೂ ಹೆಚ್ಚು ಭಾರತೀಯ ಭಾಷೆಗಳು ಸೇರಿದಂತೆ, ಕೆಲವು ವಿದೇಶಿ ಭಾಷೆಗಳಲ್ಲಿ ಗಾಯನ ಸಂಯೋಜನೆ ಮಾಡಿ, ಚಲನಚಿತ್ರರಂಗದ ವರ್ಚಸ್ಸನ್ನು ಹೆಚ್ಚಿಸಿದ್ದಾರೆ ಎಂದು ತಿಳಿಸಿದರು.

ಎಸ್‌ಡಿಎಂಸಿ ಅಧ್ಯಕ್ಷ ತೋಂಟರಾಧ್ಯ, ಹಿರಿಯ ಮುಖಂಡ ಭಾಸ್ಕರ್ ಮಾತನಾಡಿ, ಇಂತಹ ಕುಗ್ರಾಮದಲ್ಲಿ ಗ್ರಾಮೀಣ ಪ್ರತಿಭೆಯ ಮಕ್ಕಳನ್ನು ಗುರುತಿಸಿ, ಎಸ್.ಜಾನಕಿ ಅಮ್ಮನವರ ಕನ್ನಡ ಚಲನಚಿತ್ರರಂಗದ ಸೇವೆಯನ್ನು ನೆನೆದು, ಮಕ್ಕಳಿಗೆ ಪರಿಚಯಿಸಲೆಂದು ಜಯಕರ್ನಾಟಕ ಜನಪರ ವೇದಿಕೆಯು ನುಡಿ ನಮನ ಹಮ್ಮಿಕೊಂಡಿರುವುದು, ಅವರ ಹಾಡುಗಳು ಇಂದಿಗೂ ಜನಪ್ರಿಯತೆ ಮತ್ತು ಪದೇಪದೇ ಅವರು ಹಾಡಿದ ಹಾಡುಗಳನ್ನು ಕೇಳಲು ಮನಸ್ಸಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮಕ್ಕೂ ಮುನ್ನ ಅಗಲಿದ ಹಿರಿಯರಾದ ಚನ್ನಮ್ಮ ದೇವೇಗೌಡರಿಗೆ ಹಾಗೂ ಅಮೃತವಾಣಿ ದಿನಪತ್ರಿಕೆಯ ಸಹ ಸಂಪಾದಕಿ ಕಮಲ ಗಂಗಾಹನುಮಯ್ಯನವರಿಗೆ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಕಾರ್ಯಕ್ರಮದಲ್ಲಿ ಆಯೋಜಕ ಹಾಗೂ ಸಂಘಟನೆಯ ತಾ.ಅಧ್ಯಕ್ಷ ಬಿ.ಟಿ.ಕುಮಾರ್, ಮುಖಂಡ ಆರ್.ವಿ.ನಟರಾಜು, ಮಾನ್ಯಶ್ರೀ ಕೋಕಾನೆಟ್‌ನ ಧನಂಜಯ್, ಗ್ರಾಪಂ ಮಾಜಿ ಸದಸ್ಯರಾದ ಪಾರ್ವತಿ ಬಾಯಿ ಮತ್ತು ಲಕ್ಷ್ಮಣ್ ನಾಯಕ್, ಮುಖ್ಯ ಶಿಕ್ಷಕ ಬುದ್ಧ ಪ್ರಸಾದ್,ಸಹ ಶಿಕ್ಷಕಿ ಶೋಭಕುಮಾರಿ, ಹಿರಿಯ ವಿದ್ಯಾರ್ಥಿ ಸಂಘದ ಮೋಹನ್, ಗ್ರಾಮಸ್ಥರಾದ ರಾಮನಾಯಕ್, ವಿನಯ್, ಮಲ್ಲಿಕಾರ್ಜುನಯ್ಯ, ಪವನ್, ರವಿ, ಆನಂದಕುಮಾರ್, ಶಾಲಾ ಜಮೀನಿನ ದಾನಿ ಗಿರಿಜಮ್ಮ, ಪೂಜಾ, ರೇಖಾ ಮತ್ತು ಅನಿತಾ ಸೇರಿದಂತೆ ಪೋಷಕರು ಹಾಗೂ

## ವಿದ್ಯಾರ್ಥಿ ಜೀವನದಲ್ಲಿ ಸ್ಪಷ್ಟ ಗುರಿ ಇರಬೇಕು; ಆರ್.ಆಶ್ವಥ್

ಬೂದಿಕೋಟೆ

ವಿದ್ಯಾರ್ಥಿ ಜೀವನದಲ್ಲಿ ಸ್ಪಷ್ಟ ಗುರಿ ಇರಬೇಕು. ಶಿಕ್ಷಕ ಮತ್ತು ವಿದ್ಯಾರ್ಥಿಗಳ ನಡುವಿನ ಸಂಬಂಧ ಅತ್ಯಂತ ಪವಿತ್ರವಾದದ್ದು ಅಕ್ಷರ ಕಲಿಸಿದ ಗುರುಗಳನ್ನು ಎಂದಿಗೂ ಮರೆಯಬಾರದು ಉಚಿತವಾಗಿ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ಅನುದಾನಿತ ಶಾಲೆಗಳ ಸೇವೆ ಶ್ಲಾಘನೀಯವಾಗಿದ್ದು,ಶಾಲೆಯ ಪ್ರಗತಿಗೆ ಹಳೆಯ ವಿದ್ಯಾರ್ಥಿಗಳು ಹಾಗೂ ದಾನಿಗಳು ನೀಡುತ್ತಿರುವ ನೆರವು ಅಭಿನಂದನಾರ್ಹ ಎಂದು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಆರ್.ಆಶ್ವಥ್ ಹೇಳಿದರು.

ತಾಲೂಕಿನ ಕೀಲುಕೊಪ್ಪದ ಶ್ರೀಶನೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಅನುದಾನಿತ ಶಾಲೆಯಲ್ಲಿ ಹಳೆಯ ವಿದ್ಯಾರ್ಥಿಗಳು ಹಾಗೂ ಅವರ ಕುಟುಂಬಸ್ಥರ ಸಹಯೋಗದೊಂದಿಗೆ 1ರಿಂದ 7ನೇ ತರಗತಿಯ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ಶೂ, ಸಾಕ್ಸ್ ಹಾಗೂ ಸರಸ್ವತಿ ವಿದ್ಯಾನಿಕೇತನ ಶಾಲೆಯ ಶಿಕ್ಷಕರಾದ ಕೆ.ಜಿ.ಮಂಜುನಾಥ್ ಅವರ ಕುಟುಂಬದ ವತಿಯಿಂದ ಸಮವಸ್ತ್ರ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು,

ವಿದ್ಯಾರ್ಥಿಗಳು ತಂದೆ–ತಾಯಿಯನ್ನು ದೇವರಂತೆ ಕಾಣಬೇಕು. ಗುರು–ಹಿರಿಯರಿಗೆ ಗೌರವ ನೀಡಿ ಉತ್ತಮ ಶಿಕ್ಷಣ ಪಡೆಯಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ದೇವರು ಎಲ್ಲರಿಗೂ ಆಯಸ್ಸು ಮತ್ತು ಆರೋಗ್ಯ ನೀಡಲಿ ಎಂದು ಹಾರೈಸಿದ ಅವರು, ಇದೇ ರೀತಿ ಪ್ರತಿ ವರ್ಷವೂ ಸಮವಸ್ತ್ರ ವಿತರಿಸುವ ಕಾರ್ಯ ಮುಂದುವರಿಯಬೇಕು ಎಂದರು.

ದಾನಿಗಳು ನೀಡುವ ಸಹಾಯ ಮತ್ತು ಸಹಕಾರವನ್ನು ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಂಡು ಜೀವನದಲ್ಲಿ ಮುಂದೆ ಬರಬೇಕು ಎಂದರು.

ಈ ವೇಳೆ ದಾನಿ ಹಾಗೂ ಹಳೆಯ ವಿದ್ಯಾರ್ಥಿ ಸಿ.ರಘುನಾಥ್ ಸಿಂಗ್, ಮತ್ತೋರ್ವ ದಾನಿ ಹಾಗೂ ಹಳೆಯ ವಿದ್ಯಾರ್ಥಿ ಹರಿಪ್ರಸಾದ್ ರಾವ್, ಮುಖ್ಯಶಿಕ್ಷಕ ಎಚ್.ಎಲ್.ಆನಂದ್, ಸರಸ್ವತಿ ವಿದ್ಯಾನಿಕೇತನ ಶಾಲೆಯ ಶಿಕ್ಷಕರು ಹಾಗೂ ದಾನಿಗಳಾದ ಕೆ.ಜಿ. ಮಂಜುನಾಥ್ ಮಾತನಾಡಿದರು.

ಈ ಕಾರ್ಯಕ್ಕೆ ತಮ್ಮ ಪತ್ನಿ ಹಾಗೂ ಶಿಕ್ಷಕಿ ಪದ್ಮಶ್ರೀ ಮತ್ತು ಪುತ್ರ ಮನೋಜ್ ಅವರ ಪ್ರೋತ್ಸಾಹ ಹಾಗೂ ಸಹಕಾರ ಕಾರಣವಾಗಿದೆ. ಮುಂದಿನ ದಿನಗಳಲ್ಲಿಯೂ ತಾಲೂಕಿನ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳ ವಿದ್ಯಾರ್ಥಿಗಳಿಗೆ ಉಚಿತ ಸಮವಸ್ತ್ರ ವಿತರಿಸಲಾಗುವುದು. ಇದರಿಂದ ಗಡಿಭಾಗದ ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಬಡ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಕೋಲಾರದ ಚೈತ್ರ ಅವರ ಕುಟುಂಬದ ವತಿಯಿಂದ ಎಲ್ಲಾ ವಿದ್ಯಾರ್ಥಿಗಳಿಗೆ ನೀರಿನ ಬಾಟಲಿಗಳನ್ನು ವಿತರಿಸಲಾಯಿತು.

ವೇದಿಕೆಯಲ್ಲಿ ವಿದ್ಯಾಸಂಸ್ಥೆಯ ಉಪಾಧ್ಯಕ್ಷ ಡಿ.ನಾರಾಯಣಪ್ಪ, ದಾನಿಗಳಾದ ಕೃಷ್ಣಭಾಯಿ, ಸುಮಿತ್ರಭಾಯಿ, ಸೋಮಶೇಖರ್, ಮನೋಜ್, ಎನ್.ಗಣೇಶ್, ಹರೀಶ್, ಕೃಷ್ಣಮೂರ್ತಿ, ಕೋಲಾರದ ಚೈತ್ರ, ಶಿಕ್ಷಕರಾದ ಎಸ್.ಗಿರಿಜಮ್ಮ, ಉಷಾರಾಣಿ

## 'ಸಂಕಷ್ಟದಲ್ಲಿರುವವರಿಗೆ ಕಾನೂನು ನೆರವು ಪರಿಹಾರ ಒದಗಿಸಲು ನ್ಯಾಯಾಂಗ ಬದ್ಧ'



ಕೋಲಾರ

ಸಂಕಷ್ಟದಲ್ಲಿರುವ ಬಡವರು, ಹಿಂಸೆಗೊಳಗಾದ ಮಹಿಳೆಯರು ಹಾಗೂ ಕೋರ್ಟ್ ವೆಚ್ಚ ಭರಿಸಲಾಗದ ಅಶಕ್ತರಿಗೆ ಉಚಿತ ಕಾನೂನು ನೆರವು ನೀಡುವುದು ನ್ಯಾಯಾಂಗದ ಪ್ರಾಥಮಿಕ ಕರ್ತವ್ಯವಾಗಿದ್ದು, ಸಾರ್ವಜನಿಕರು ಕಾನೂನು ಸೇವಾ ಪ್ರಾಧಿಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ನ್ಯಾ. ಪ್ರಭು ನೀಲಾಚಾರಿ ಬಡಿಗೇರ್ ಅವರು ಕರೆ ನೀಡಿದರು.

ನಗರದ ನಗರಸಭೆ ಆವರಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಧಿಕಾರ, ನಗರಸಭೆ ಕೋಲಾರ ಹಾಗೂ ಆರೋಗ್ಯ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಪೌರ ಕಾರ್ಮಿಕರಿಗೆ ಸಿಗುವ ಹಕ್ಕುಗಳು ಮತ್ತುಸೌಲಭ್ಯಗಳ ಕುರಿತು ಕಾನೂನು ಅರಿವು ಮತ್ತು ಉಚಿತ ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಾಧಿಕಾರದಿಂದ ದೊರೆಯುವ ವಿವಿಧ ಉಚಿತ ಸೇವೆಗಳು ಹಾಗೂ ಪರಿಹಾರ ಯೋಜನೆಗಳ ಕುರಿತು ವಿವರವಾಗಿ ಮಾಹಿತಿ ನೀಡಿದರು.

ಆರ್ಥಿಕವಾಗಿ ಹಿಂದುಳಿದವರು, ದೌರ್ಜನ್ಯಕ್ಕೊಳಗಾದ ಮಹಿಳೆಯರು ಮತ್ತು ಕೋರ್ಟ್‌ನಲ್ಲಿ ವಕೀಲರನ್ನು ನೇಮಿಸಿಕೊಳ್ಳಲು ಸಾಧ್ಯವಾಗದ ಆರೋಪಿಗಳಿಗೆ ಪ್ರಾಧಿಕಾರದಿಂದ ಉಚಿತವಾಗಿ ವಕೀಲರ ಸೇವೆಯನ್ನು ಒದಗಿಸಲಾಗುತ್ತಿದೆ. ಗಂಡ–ಹೆಂಡತಿಯ ನಡುವಿನ ಗೃಹಹಿಂಸೆ ಅಥವಾ ಕುಟುಂಬ ವ್ಯಾಜ್ಯಗಳು ಕೋರ್ಟ್ ಮೆಟ್ಟಿಲೇರುವ ಮುನ್ನವೇ 'ಪ್ರೀ–ಲಿಟಿಗೇಷನ್' ಹಾಗೂ ಮಧ್ಯಸ್ಥಿಕೆ ಸಂಧಾನ ಕೇಂದ್ರಗಳ ಮೂಲಕ ಪರಸ್ಪರ ಮಾತುಕತೆ ನಡೆಸಿ ಸಮಸ್ಯೆ ಬಗೆಹರಿಸಲು ಮೊದಲ ಆದ್ಯತೆ ನೀಡಲಾಗುವುದು. ಒಂದೊಮ್ಮೆ ಸಂಧಾನ ಸಾಧ್ಯವಾಗದಿದ್ದಲ್ಲಿ, ಕೋರ್ಟ್‌ನಲ್ಲೇ ಉಚಿತವಾಗಿ ವ್ಯಾಜ್ಯ ನಡೆಸಿಕೊಡಲಾಗುವುದು ಎಂದರು.

ಪೋಕ್ಸೋ ಪ್ರಕರಣಗಳು: ಸಣ್ಣ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆಯಲು ಕಾನೂನು ಬಿಗಿಯಾಗಿದ್ದು, ಸಂತ್ರಸ್ತ ಮಕ್ಕಳ ಪುನರ್ವಸತಿಗಾಗಿ ಪೋಕ್ಸೋ ನ್ಯಾಯಾಲಯದಿಂದ 1 ಲಕ್ಷದಿಂದ 7 ಲಕ್ಷದವರೆಗೆ ಪರಿಹಾರ ಧನವನ್ನು ನ್ಯಾಯಾಲಯವೇ ಮಂಜೂರು ಮಾಡುತ್ತದೆ.

ಕೊಲೆ ಪ್ರಕರಣಗಳ ಆಶ್ರಿತರಿಗೆ ಪರಿಹಾರ: ಗಲಾಟೆ ಅಥವಾ ಕೊಲೆ ಪ್ರಕರಣಗಳಲ್ಲಿ ಮೃತರಾದವರ ಕುಟುಂಬದ ಆಶ್ರಿತರಿಗೆ ಮೃತರ ವಯಸ್ಸಿನ ಆಧಾರದಲ್ಲಿ ಪರಿಹಾರ ಒದಗಿಸಲಾಗುತ್ತದೆ 40 ವರ್ಷಕ್ಕಿಂತ ಕೆಳಗಿನ ಮೃತರ ಕುಟುಂಬಕ್ಕೆ, 3 ಲಕ್ಷ 40 ರಿಂದ 60 ವರ್ಷದೊಳಗಿನ ಮೃತರ ಕುಟುಂಬಕ್ಕೆ, 2 ಲಕ್ಷ 60 ವರ್ಷ ಮೇಲ್ಪಟ್ಟ ಮೃತರ ಕುಟುಂಬಕ್ಕೆ 1 ಲಕ್ಷ,

ಸರ್ಕಾರಿ ಶಾಲಾ ಶಿಕ್ಷಣ ಮತ್ತು ಶಾಲೆಗಳ ಉಳಿವು:

14 ವರ್ಷದೊಳಗಿನ ಮಕ್ಕಳಿಗೆ ಕಡ್ಡಾಯ ಮತ್ತು ಉಚಿತ ಶಿಕ್ಷಣದ ಹಕ್ಕಿದೆ. ಮಕ್ಕಳಿಗೆ ಕಲಿವಿನ ಜೊತೆಗೆ ಆಟೋಟ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಹಕ್ಕಿದೆ. ಸರ್ಕಾರದಿಂದ ಬಿಸಿಊಟ, ಹಾಲು, ಮೊಟ್ಟೆ, ಸಮವಸ್ತ್ರ ಹಾಗೂ ಪಠ್ಯಪುಸ್ತಕಗಳನ್ನು ಉಚಿತವಾಗಿ ನೀಡಲಾಗುತ್ತಿದೆ. ಆದರೆ, ಇತ್ತೀಚಿನ ದಿನಗಳಲ್ಲಿ ಖಾಸಗಿ ಶಿಕ್ಷಣದ ವ್ಯಾಪಾರೀಕರಣದಿಂದಾಗಿ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಕ್ಷೀಣಿಸುತ್ತಿರುವುದು ಕಳವಳಕಾರಿ ಸಂಗತಿ. ನಾವು ಸೇರಿದಂತೆ ವೇದಿಕೆ ಮೇಲಿರುವ ಬಹುತೇಕರು ಸರ್ಕಾರಿ ಶಾಲೆಯಲ್ಲೇ ಓದಿ ಬೆಳೆದವರಾಗಿದ್ದು, ಸಾರ್ವಜನಿಕರು ಸರ್ಕಾರಿ ಶಾಲೆಗಳನ್ನು ಉಳಿಸಿ ಬೆಳೆಸಲು ಶ್ರಮಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್ ಶ್ರೀನಿವಾಸ್ ಮಾತನಾಡಿ ಸರ್ಕಾರದ ಯೋಜನೆಗಳು ಹಾಗೂ ನಾಗರಿಕ ಸೌಲಭ್ಯಗಳು ಪ್ರತಿಯೊಬ್ಬ ಅರ್ಹ ಬಡ ನಿವಾಸಿಗೂ ತಲುಪಬೇಕಿದ್ದು, ನಗರದಲ್ಲಿ ಕುಡಿಯುವ ನೀರಿನ ಅಭಾವ ತಡೆಯಲು ಮಳೆನೀರು ಕೊಯ್ಲು ನಿಯಮಗಳನ್ನು ಪ್ರತಿಯೊಬ್ಬರೂ ಕಡ್ಡಾಯವಾಗಿ ಪಾಲಿಸಬೇಕು ಎಂದು ಕೋಲಾರ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಲ್. ಶ್ರೀನಿವಾಸ್ ಒತ್ತಾಯಿಸಿದರು.

ಸ್ಥಳೀಯ ಪ್ರದೇಶಗಳ ಅಭಿವೃದ್ಧಿ ಹಾಗೂ ಸಾರ್ವಜನಿಕರ ಮೂಲಭೂತ ಹಕ್ಕುಗಳ ಕುರಿತು ಪ್ರಮುಖ ವಿಷಯಗಳನ್ನು ಪ್ರಸ್ತಾಪಿಸಿದರು.

ನಗರದಲ್ಲಿ ಅಂತರ್ಜಲ ಮಟ್ಟ ಕುಸಿಯುತ್ತಿದ್ದು, ಕುಡಿಯುವ ನೀರಿನ ಅಭಾವ ಹೆಚ್ಚುತ್ತಿದೆ. ಸುಪ್ರೀಂ ಕೋರ್ಟ್ ಹಾಗೂ ಕೇಂದ್ರ ಸರ್ಕಾರದ ನಿರ್ದೇಶನದಂತೆ "ಜಲ ಸಂಚಯ – ಜನ ಭಾಗೀದಾರಿ" ಪರಿಕಲ್ಪನೆಯಡಿ ಸಾರ್ವಜನಿಕರು ಮನೆ ನಿರ್ಮಿಸುವಾಗ ಹಾಗೂ ಬೋರ್‌ವೆಲ್ ಕೊರೆಸುವಾಗ ಕಡ್ಡಾಯವಾಗಿ ಮಳೆನೀರು ಇಂಗುಗುಂಡಿ ನಿರ್ಮಿಸಬೇಕು. ನಗರಸಭೆ ಕಮಿಷನರ್ ಅವರು ನೂತನ ಕಟ್ಟಡ ಪರವಾನಗಿ ನೀಡುವಾಗ ಈ ಇಂಗುಗುಂಡಿ ನಿರ್ಮಾಣದ ಷರತ್ತನ್ನು ಕಡ್ಡಾಯಗೊಳಿಸಬೇಕು ಎಂದು ಆಗ್ರಹಿಸಿದರು.

ಕಾರ್ಯಕ್ರಮದಲ್ಲಿ ನಗರಸಭೆ ಆಯುಕ್ತರು ವೆಂಕಟೇಶ್ ನಾಗನೂರ ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷರು ಹೆಚ್.ವಿ. ಸುಬ್ರಮಣಿ,ಜಿಲ್ಲಾ ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಕೆ. ಎ. ಆದರ್ಶ, ಆರೋಗ್ಯ ಇಲಾಖೆ ನಿರೀಕ್ಷಕರು ಸಂಜಯ್ ಸೇರಿದಂತೆ

## ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

ಮಾಲೂರು

ಸರ್ಕಾರಿ ಶಾಲೆಗಳಲ್ಲಿ ಸಿಗುವ ಗುಣಮಟ್ಟದ ಶಿಕ್ಷಣದಿಂದ ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡಿದವರು ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಉನ್ನತ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ಅವರನ್ನು ಮಾದರಿಯನ್ನಾಗಿಸಿಕೊಳ್ಳುವ ಮೂಲಕ ಸ್ಪರ್ಧಾತ್ಮಕವಾಗಿ ಶಿಸ್ತುಬದ್ಧ ಜೀವನ ಕಠಿಣ ಪರಿಶ್ರಮದಿಂದ ಶೈಕ್ಷಣಿಕವಾಗಿ ಪ್ರಗತಿ ಸಾಧಿಸುವ ಮೂಲಕ ತಮ್ಮ ಜೀವನ ರೂಪಿಸಿಕೊಳ್ಳುವಂತೆವಸುಂದರ ಚಾರಿಟೇಬಲ್ ಟ್ರಸ್ಟಿನ ಕಾರ್ಯದರ್ಶಿ ಆರ್.ಅಶ್ವಥ್ ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಶಾಲಾ ಶಿಕ್ಷಣ ಇಲಾಖೆ, ಹಾಗೂ ವಸುಂದರ ಟ್ರಸ್ಟ್ (ರಿ) ಬನಶಂಕರಿ ಬೆಂಗಳೂರು ಇವರ ಸಹಯೋಗದಲ್ಲಿ ನಗರದ ಸರ್ಕಾರಿ ಬಾಲಕರ ಪದವಿಪೂರ್ವ ಕಾಲೇಜು, ಸುವರ್ಣಮಹೋತ್ಸವ ಭವನದಲ್ಲಿ ಎಸ್.ಎಸ್.ಎಲ್.ಸಿ, ವಾರ್ಷಿಕ ಪರೀಕ್ಷೆ–2026ರಲ್ಲಿ ಹೆಚ್ಚು ಅಂಕಗಳಿಸಿರುವಂತಹ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ಶೇ. 100 % ರಷ್ಟು ಫಲಿತಾಂಶವನ್ನು ಪಡೆದುಕೊಂಡಿರುವ ಶಾಲೆಗಳಿಗೆ ಅಭಿನಂದನಾ ಸಮಾರಂಭ ಉದ್ಘಾಟಿಸಿ ಪ್ರತಿಭಾ ಪುರಸ್ಕಾರ ನೆರವೇರಿಸಿ ಮಾತನಾಡಿದರು.

ಅಧ್ಯಕ್ಷರು, ವಸುಂದರ ಟ್ರಸ್ಟ್ (ರಿ), ಬೆಂಗಳೂರು ಹಾಗೂ ಶಿಕ್ಷಣ ತಜ್ಞ ಪ್ರೊ. ಕೆ. ಮಲ್ಲಯ್ಯ, ತಾತ್ರಿಕ ಶಿಕ್ಷಣ ಖಜಾಂಚಿ ಕೆಂಪೇಗೌಡ, ರಾಮಕೃಷ್ಣ, ಲಕ್ಷ್ಮೀಕಾಂತಯ್ಯ, ಕೆ ರಂಗ ವೀರಭದ್ರಯ್ಯ, ಅಂಜಿನಪ್ಪ, ಮುನಿಯಪ್ಪ, ರಮೇಶ್, ಸಂಪಂಗಿ, ಆಲಿಂಉನ್ನಿಸ, ಕ್ಷೇತ್ರ ಸಮನ್ವಯ ಅಧಿಕಾರಿ ಟಿ.ವೆಂಕಟಸ್ವಾಮಿ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಎಂ.ಶ್ರೀನಿವಾಸ್, ಕಾರ್ಯದರ್ಶಿ ರಾಮಯ್ಯ, ಖಜಾಂಚಿ ಶ್ರೀನಿವಾಸ್, ಉಪಪ್ರಾಂಶುಪಾಲರಾದ ವಿಜಿ ಕುಮಾರ್, ವೆಂಕಟಪ್ಪ, ದಾನಿಗಳಾದ ಸಂಪಂಗಿ, ವೆಂಕಟೇಶ್ ಶಾಸ್ತ್ರಿ, ಸರ್ಕಾರಿ ನೌಕರ ಸಂಘದ ಉಪಾಧ್ಯಕ್ಷ ದೇವದತ್ ನಾಯಕ್, ಬಸವೇಶ್ವರ ಪ್ರೌಢಶಾಲೆಯ ನಾರಾಯಣಮೂರ್ತಿ, ಇಸಿಗಳಾದ ಶಶಿಧರ್, ಕೃಷ್ಣೇಗೌಡ, ಮಂಜಪ್ಪ, ಮೋಹನ್, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಸಹಶಿಕ್ಷಕ ನಂಜುಂಡೇಗೌಡ ಇನ್ನಿತರರು ಹಾಜರಿದ್ದರು.

### ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ವಿರುದ್ಧ ಸುಳ್ಳು ಆರೋಪ:

# ಕೋಲಾರದ ಸಂದೇಶ್ ವಿರುದ್ಧ ದೂರು



ಗುಡಿಬಂಡೆ

ಕ್ಷೇತ್ರದ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಅವರ ವಿರುದ್ಧ ಜಮೀನು ಕಬಳಿಕೆಯ ಆಧಾರರಹಿತ ಸುಳ್ಳು ಆರೋಪ ಮಾಡಿ, ಅವರ ತೇಜೋವಧೆ ಮಾಡುತ್ತಿರುವ ಕೋಲಾರದ ಸಂದೇಶ್ ಎಂಬುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಕಾಂಗ್ರೇಸ್ ಮುಖಂಡರು ಗುಡಿಬಂಡೆ ಪೊಲೀಸರಿಗೆ ದೂರು ನೀಡಿದರು.


ಈ ವೇಳೆ ಕಾಂಗ್ರೇಸ್ ಮುಖಂಡ ಹೆಚ್.ಪಿ. ಲಕ್ಷ್ಮೀನಾರಾಯಣ ಮಾತನಾಡಿ, ತಾಲೂಕಿನ ಸೋಮಲಾಪುರ ಗ್ರಾಮದ ಸರ್ವೆ ನಂಬರ್ 1ರಲ್ಲಿ 162 ಎಕರೆ ಜಮೀನಿದ್ದು, ಇದನ್ನು ಶಾಸಕರು ಕಬಳಿಸಿ ಬೇಲಿ ಹಾಕಿದ್ದಾರೆ ಎಂದು ಸಂದೇಶ್ ಅವರು ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹಬ್ಬಿಸುತ್ತಿದ್ದಾರೆ. ಅಲ್ಲದೆ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಶಾಸಕ ಸುಬ್ಬಾರೆಡ್ಡಿ ಅವರನ್ನು ಸಚಿವರನ್ನಾಗಿ ಮಾಡಿದರೆ ಸಿಎಂ ನಿವಾಸದ ಮುಂದೆ ಧರಣಿ ನಡೆಸುವುದಾಗಿ ಬೆದರಿಕೆ ಹಾಕುವ ಮೂಲಕ ಸಂದೇಶ್ ಬ್ಲಾಕ್ ಮೇಲ್ ಮಾಡುತ್ತಿದ್ದಾರೆ. ಗುಡಿಬಂಡೆ ಹಾಗೂ ಬಾಗೇಪಲ್ಲಿ ತಾಲೂಕಿನ ಜನತೆ ಯಾವುದೇ ಜಾತಿ ಬೇಧವಿಲ್ಲದೆ ಜೀವನ ಸಾಗಿಸುತ್ತಿದ್ದೇವೆ. ಆದರೆ ಬೇರೆ ಕಡೆಯಿಂದ ಬಂದ ಈ ವ್ಯಕ್ತಿ ನಮ್ಮ ಮದ್ಯೆ ತಂದಿಡುವ ಕೆಲಸ ಮಾಡುತ್ತಿದ್ದಾರೆ. ಕೂಡಲೇ ಅವರ ಈ ನಡೆಯನ್ನು ಬದಲಿಸಬೇಕು. ಇಲ್ಲವಾದಲ್ಲಿ ಇನ್ನೂ ಉಗ್ರ ಹೋರಾಟ ಹಮ್ಮಿಕೊಳ್ಳುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಬಳಿಕ ಮತ್ತೋರ್ವ ಮುಖಂಡ ಕೃಷ್ಣೇಗೌಡ ಮಾತನಾಡಿ ಜುಲೈ 25 ರಂದು ಮುಂಜಾನೆ 7 ಗಂಟೆ ಸುಮಾರಿಗೆ ಸಂದೇಶ್ ಮತ್ತು ಅವರ ಬೆಂಬಲಿಗರು ಸೋಮಲಾಪುರ ಜಮೀನಿನ ಬಳಿ ತೆರಳಿ, ಅಲ್ಲಿನ ನಿವಾಸಿ ಗಂಗಾಧರಪ್ಪ ಅವರನ್ನು ಪ್ರಶ್ನಿಸಿದ್ದಾರೆ. ಈ ವೇಳೆ ಗಂಗಾಧರಪ್ಪ ಅವರು, ಶಾಸಕರಿಗೆ ಇಲ್ಲಿ ಒಂದು ಗುಂಟೆ ಜಮೀನು ಕೂಡ ಇಲ್ಲ. ಬದಲಿಗೆ, ದಶಕಗಳಿಂದ ಸಾಗುವಳಿ ಮಾಡುತ್ತಿರುವ ನಮ್ಮ ಜಮೀನನ್ನು ನಮಗೆ ಮಂಜೂರು ಮಾಡಲು ಅವರು ಒಪ್ಪಿದ್ದಾರೆ ಎಂದು ವಾಸ್ತವ ತಿಳಿಸಿದ್ದಾರೆ. ಇದರಿಂದ ಆಕ್ರೋಶಗೊಂಡ ಸಂದೇಶ್, ಗಂಗಾಧರಪ್ಪ ಅವರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಅಲ್ಲಿಂದ ಹೊರಟು ಹೋಗಿದ್ದಾರೆ. ಒಂದು ವೇಳೆ ಶಾಸಕರು ಅಲ್ಲಿನ ಜಮೀನು ಖರೀದಿ ಮಾಡಿದ್ದಾರೆ ಎಂದು ನಿರೂಪಿಸಿದರೇ, ಅವರು ಶಾಸಕ ಸ್ಥಾನಕ್ಕೆ ರಾಜೀನಾಮೆ ಕೋಡೋಕೂ ಸಿದ್ದ ಎಂದರು.

ಇನ್ನೂ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತಿರುವ ಶಾಸಕರ ವಿರುದ್ಧ ಇಲ್ಲಸಲ್ಲದ ಆರೋಪಗಳನ್ನು ಮಾಡುವ ಮೂಲಕ ತಾಲೂಕಿನಲ್ಲಿ ಶಾಂತಿ ಕದಡಲು ಯತ್ನಿಸುತ್ತಿರುವ ಹಾಗೂ ಶಾಸಕರಿಗೆ ಸಚಿವ ಸ್ಥಾನ ತಪ್ಪಿಸಲು ಷಡ್ಯಂತ್ರ ರೂಪಿಸುತ್ತಿರುವ ಸಂದೇಶ್ ವಿರುದ್ಧ ಎಫ್‌ಆರ್‌ಐ ದಾಖಲಿಸಿ, ಸೂಕ್ತ ಕಾನೂನು ಕ್ರಮ ಜರುಗಿಸುವಂತೆ ಮುಖಂಡರು ಪೊಲೀಸ್ ಇಲಾಖೆಯನ್ನು ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಕಾಂಗ್ರೇಸ್ ಮುಖಂಡರಾದ ರಿಯಾಜ್ ಪಾಷ, ಪ್ರಕಾಶ್, ರಮೇಶ್, ಇಸ್ಮಾಯಿಲ್ ಆಜಾದ್ ಬಾಬು, ಯೂತ್ ಕಾಂಗ್ರೇಸ್ ನ ನವೀನ್, ಅಂಬರೀಶ್, ಯರಲಕ್ಕೇನಹಳ್ಳಿ ಮಂಜು ನಾಥ್, ದಲಿತ ಮುಖಂಡ ನಂಜುಂಡ, ನಾರಾಯಣಸ್ವಾಮಿ, ಗಂಗಪ್ಪ, ರಮಣ, ಗಣೇಶ್ ಸೇರಿದಂತೆ ಹಲವರು ಹಾಜರಿದ್ದರು.

## ಯೋಗ ಚಾಂಪಿಯನ್ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳಿಗೆ ಚಿನ್ನ, ಬೆಳ್ಳಿ ಪದಕ



ದೊಡ್ಡಬಳ್ಳಾಪುರ

ಆದಿತ್ಯ ಪಬ್ಲಿಕ್ ಸ್ಕೂಲ್ ಅಲ್ಲಿ ನಡೆದ CISCE ಕರ್ನಾಟಕ ಹಾಗೂ ಗೋವಾ ರೀಜನಲ್ ಯೋಗಾಸನ ಚಾಂಪಿಯನ್ಶಿಪ್ 2026–2027 ಯೋಗಾ ಸ್ಪರ್ಧೆಯಲ್ಲಿ 14 ವರ್ಷದ ಬಾಲಕಿಯರ ವಿಭಾಗದಲ್ಲಿ ಸಾಂಪ್ರದಾಯಿಕ ಯೋಗಸ್ಪರ್ಧೆಯಲ್ಲಿ ಬೆಳ್ಳಿಯ ಪದಕವನ್ನು ಆರನೇ ತರಗತಿ ವಿದ್ಯಾರ್ಥಿ ಎನ್.ಖುಷಿ ಪ್ರಿಯಾ ಆರ್ಟಿಸ್ಟಿಕ್ ಪೇರ್ ವಿಭಾಗದಲ್ಲಿ 10ನೇ ತರಗತಿಯ ವಿದ್ಯಾರ್ಥಿ ನಿಸರ್ಗ ಮತ್ತು ನಾಗಶ್ರೀ ಚಿನ್ನದ ಪದಕವನ್ನು ಪಡೆದರು.

ಆದಿತ್ಯ ಪಬ್ಲಿಕ್ ಶಾಲೆಯ ಅಧ್ಯಕ್ಷರಾದ ಸುಜಾತ ಶ್ರೀನಿವಾಸ್ ಕಾರ್ಯದರ್ಶಿಗಳಾದ M.G. ಶ್ರೀನಿವಾಸ ಪ್ರಾಂಶುಪಾಲರಾದ ಅಭಿಲಾಶ್ CSICE ಯೋಗ ಮುಖ್ಯಸ್ಥರಾದ ಸುಮಿತ್ರ ಪಾಟೀಲ್ ರವರು ಯೋಗ ಶಿಕ್ಷಕರಾದ ಎಸ್‌ಸಿ ಶಿವಕುಮಾರ್ ರವರು ಕರ್ನಾಟಕ ಸ್ಟೇಟ್ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಷನ್ ಕಾರ್ಯದರ್ಶಿಯಾದ ಯೋಗ ನಟರಾಜ್ ಅವರು ವಿಜೇತರನ್ನು ಅಭಿನಂದಿಸಿದ್ದಾರೆ.

## 'ಗ್ರಾಮೀಣ ವಿದ್ಯಾರ್ಥಿಗಳು ಶಿಕ್ಷಣದ ಮೂಲಕ ಬದುಕು ಕಟ್ಟಿಕೊಳ್ಳಬೇಕು'



ಶ್ರೀನಿವಾಸಪುರ

ತಾಲ್ಲೂಕಿನ ಗಾಂಡ್ಲಹಳ್ಳಿ ಗ್ರಾಮದಲ್ಲಿ ಚೌಡಮ್ಮ ಹಿರಣ್ಯಗೌಡ ಆರೋಗ್ಯ ಮತ್ತು ಶಿಕ್ಷಣ ಟ್ರಸ್ಟ್ ವತಿಯಿಂದ ಶನಿವಾರ ಏರ್ಪಡಿಸಿದ್ದ ಸಮಾರಂಭದಲ್ಲಿ ಕಳೆದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಅಧಿಕ ಅಂಕ ಗಳಿಸಿದ್ದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಪ್ರೋತ್ಸಾಹ ಧನ ನೀಡಲಾಯಿತು.

ಈ ವೇಳೆ ನಿವೃತ್ತ ಐಎಎಸ್ ಅಧಿಕಾರಿ ಕೆ.ಎಚ್. ಗೋಪಾಲಕೃಷ್ಣೇಗೌಡ ಮಾತನಾಡಿ, ಬದಲಾದ ಪರಿಸ್ಥಿತಿಯಲ್ಲಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಶಿಕ್ಷಣದ ಮೂಲಕ ಬದುಕು ಕಟ್ಟಿಕೊಳ್ಳಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಹೇಳಿದರು.

ಗ್ರಾಮೀಣ ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಪ್ರೋತ್ಸಾಹಿಸುವ ಉದ್ದೇಶದಿಂದ ಪ್ರತಿ ವರ್ಷ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರ್ತಿಸಿ ಪ್ರತಿಭಾ ಪುರಸ್ಕಾರ ಹಾಗೂ ಧನ ಸಹಾಯ ನೀಡಲಾಗುತ್ತಿದೆ. ಅರ್ಹ ವಿದ್ಯಾರ್ಥಿಗಳು ದಾನಿಗಳ ನೆರವನ್ನು ಸದುಪಯೋಗ ಪಡಿಸಿಕೊಂಡು ಪ್ರಗತಿ ಸಾಧಿಸಬೇಕು ಎಂದು ಹೇಳಿದರು.

ಬಳಿಕ ಹಿರಿಯ ವಕೀಲ ಬಿಸಪ್ಪಗೌಡ ಮಾತನಾಡಿ, ವಿದ್ಯಾರ್ಥಿಗಳು ಅನಗತ್ಯವಾಗಿ ಮೊಬೈಲ್ ಬಳಕೆ ಮಾಡುವುದನ್ನು ನಿಲ್ಲಿಸಬೇಕು. ಪುಸ್ತಕ ಓದಿಗೆ ಮೊದಲ ಆದ್ಯತೆ ನೀಡಬೇಕು. ಮಾನವೀಯ ಮೌಲ್ಯಗಳನ್ನು ಮೈಗೂಡಿಸಿಕೊಂಡು ಬೆಳೆಯಬೇಕು. ಗುರು ಹಿರಿಯರಲ್ಲಿ ಗೌರವ ಭಾವನೆ ಹೊಂದಬೇಕು ಎಂದು ಹೇಳಿದರು.

ಈ ವೇಳೆ ಕೆ.ಹಿರಣ್ಯ ಗೌಡರು ಮುಖ್ಯ ಶಿಕ್ಷಕರಾಗಿ ಮಾದರಿಯಾಗಿ ಕಾರ್ಯನಿರ್ವಹಿಸಿದ್ದಾರೆ. ಅವರ ಸ್ಮರಣಾರ್ಥ ಅವರ ಮಕ್ಕಳು ಕಳೆದ 19 ವರ್ಷಗಳಿಂದ ಪ್ರತಿಭಾಂತ ವಿದ್ಯಾರ್ಥಿಗಳಿಗೆ ಗೌರವ ಪ್ರಧಾನ ಮಾಡಿ ಹಣದ ನೆರವು ನೀಡುತ್ತಿದ್ದಾರೆ. ಅವರ ಈ ನಡೆ ಇತರರಿಗೂ ಮಾದರಿಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಿವೃತ್ತ ಡಿಐಜಿ ಹಾಗೂ ಟ್ರಸ್ಟಿ ಕೆ.ಎಚ್.ಶ್ರೀನಿವಾಸನ್, ಮಹಾರಾಷ್ಟ್ರ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಕೆ.ಎಚ್.ಗೋವಿಂದ ರಾಜನ್, ನಿವೃತ್ತ ಐಎಎಸ್ ಅಧಿಕಾರಿ ಕೆ.ಎಚ್. ಅಶ್ವತ್ಥನಾರಾಯಣಗೌಡ, ನಿವೃತ್ತ ಐಎಫ್‌ಎಸ್ ಅಧಿಕಾರಿ ಕೆ.ಎಚ್.ನಾಗರಾಜ್, ನಿವೃತ್ತ ಸಿಡಿಪಿಒ ಕೆ.ಎಚ್.ಶಿವರಾಮೇಗೌಡ, ನಿವೃತ್ತ ಮುಖ್ಯ ಶಿಕ್ಷಕ ಕೆ.ಎಚ್.ಸಂಪತ್ ಕುಮಾರ್, ಹನುಮೇಶ್, ಕೃಷ್ಣೇಗೌಡ, ಮಂಜುನಾಥ್, ವೆಂಕಟೇಶ್ ಪ್ರಸಾದ್, ದರ್ಶನ್, ಭರತ್, ರುಕ್ಮಿಣಿ ಇದ್ದರು.

## ಪಶುಪಾಲನ ಇಲಾಖೆ ವತಿಯಿಂದ ರೈತರಿಗೆ ಸವಲತ್ತು ವಿತರಣೆ



ಕುಣಿಗಲ್

ಪಟ್ಟಣದ ಪಶುಪಾಲನ ಮತ್ತು ಪಶುವೈದ್ಯಕೀಯ ಇಲಾಖೆಯ ವತಿಯಿಂದ ರೈತರಿಗೆ ವಿವಿಧ ಸವಲತ್ತು ವಿತರಿಸುವ ಕಾರ್ಯಕ್ರಮಕ್ಕೆ ಶುಕ್ರವಾರ ಶಾಸಕ ಡಾ.ರಂಗನಾಥ್ ಚಾಲನೆ ನೀಡಿದರು.

ಕಾರ್ಯಕ್ರಮಲ್ಲಿ 14 ಮೇವು ಕತ್ತರಿಸುವ ಯಂತ್ರ 6 ಹಾಲು ಕರೆಯುವ ಯಂತ್ರ 94 ರಬ್ಬರ್ ಮ್ಯಾಟ್ ಗಳನ್ನು ರೈತರಿಗೆ ವಿತರಿಸಿ ಬಳಿಕ ಮಾತನಾಡಿದ ಶಾಸಕರು ತಾಲ್ಲೂಕಿನಲ್ಲಿ ಪ್ರಸ್ತುತ 30 ಪಶುಪಾಲನ ಆಸ್ಪತ್ರೆಗಳಿದ್ದು, ವೈದ್ಯರು ಸಿಬ್ಬಂದಿಗಳು ಕೊರತೆ ಇರುವ ಕಾರಣ ಖಾಲಿ ಇರುವ ಕಡೆಗಳಲ್ಲಿ ಹೊರಗುತ್ತಿಗೆ ಆದರದಲ್ಲಿ ಸಿಬ್ಬಂದಿಗಳನ್ನು ನೇಮಿಸಿ ರೈತರಿಗೆ ಸಮಸ್ಯೆಯಾಗದಂತೆ ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ.

ರೈತರಿಗೆ ಹೈನುಗಾರಿಕೆಗೆ ಅವಶ್ಯಕವಾಗಿರುವ ಇನ್ನೂ ಹೆಚ್ಚಿನ ಸಲಕರಣೆ ವಿತರಿಸಲು ಪಶುಪಾಲನ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮ ವಹಿಸಲಾಗುವುದು,

ತಾಲ್ಲೂಕಿನಲ್ಲಿ ಮಳೆ ಕೊರತೆಯ ಕಾರಣದಿಂದ ಹೈನುಗಾರಿಕೆಯ ಮೇಲೆ ಪರಿಣಾಮ ಬೀರಲಿದೆ ಹೆಚ್ಚಿನ ರೈತರು ಹೈನುಗಾರಿಕೆ ನಂಬಿಕೊಂಡಿದ್ದು ಹಾಲು ಉತ್ಪದಕರ ಸಹಕಾರ ಸಂಘಗಳಿಗೆ ಹಾಲು ಹಾಕುತ್ತಿರುವ ಉತ್ಪದಕರಿಗೆ ಇನ್ನೂ ಸಂಘಗಳಲ್ಲಿ ಸದಸ್ಯತ್ವ ನೀಡಿಲ್ಲ ಎಂಬುದು ಗಮನಕ್ಕೆ ಬಂದಿದ್ದು ಅದನ್ನು ಮುಂದಿನ ದಿನಗಳಲ್ಲಿ ಸರಿಪಡಿಸುವ ಕೆಲಸ ಮಾಡಲಾಗುವುದು ಎಂದರು.

ಈ ವೇಳೆ ಪಶುಪಾಲನ ಇಲಾಖೆಯ ಮುಖ್ಯ ಆಡಳಿತ ವೈದ್ಯಾಧಿಕಾರಿ ಡಾ.ಸೀತಾರಾಮಯ್ಯ, ಮುಖ್ಯ ವೈದ್ಯಾಧಿಕಾರಿ ಡಾ.ನವೀನ್ ಸೇರಿದಂತೆ ಸಿಬ್ಬಂದಿವರ್ಗ ಆಗೂ ರೈತರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

## ಶ್ರೀರಂಗನಾಥ ಸ್ವಾಮಿಗೆ ವಿಶೇಷ ಹೂವಿನ ಅಲಂಕಾರ



ಚಿಕ್ಕಬಳ್ಳಾಪುರ

ವಿಷ್ಣು ದೇವನಿಗೆ ಸಮರ್ಪಿತವಾದ ಅತ್ಯಂತ ಮಹತ್ವದ ಏಕಾದಶಿ ವ್ರತಗಳಲ್ಲಿ ಆಷಾಢ ಶುದ್ಧ ಪ್ರಥಮ ಏಕಾದಶಿಯೂ ಒಂದಾಗಿದ್ದು ಜಿಲ್ಲೆಯಾದ್ಯಂತ ವಿಷ್ಣು ದೇವರ ದೇವಾಲಯಗಳಲ್ಲಿ ಶ್ರದ್ಧಾ ಭಕ್ತಿಯಿಂದ ಪೂಜೆ ಪುನಸ್ಕಾರಗಳು ನಡೆದವು.

ನಗರದ ಕಂದವಾರಪೇಟೆಯ ಶ್ರೀಲಕ್ಷ್ಮೀವೆಂಕಟರಮಣಸ್ವಾಮಿ ದೇವಾಲಯ, ರಂಗಸ್ಥಳದ ಶ್ರೀರಂಗನಾಥಸ್ವಾಮಿ ದೇವಾಲಯ, ಬಾಗೇಪಲ್ಲಿ ಗಡಿದಿಮ್ಮನ ಶ್ರೀಲಕ್ಷ್ಮೀವೆಂಕಟರಮಣಸ್ವಾಮಿ ದೇವಾಲಯಗಳೂ ಸೇರಿದಂತೆ ಜಿಲ್ಲೆಯ ವಿವಿಧ ದೇಗುಲಗಳಲ್ಲಿ ಶನಿವಾರ ಬೆಳಗ್ಗೆಯಿಂದಲೇ ಶ್ರೀ ಸ್ವಾಮಿಯವರಿಗೆ ವಿಶೇಷ ಪೂಜೆ ಪುನಸ್ಕಾರಗಳು ನಡೆದವು.

ದೇವಶಯನಿ ಏಕಾದಶಿ 4 ತಿಂಗಳ ಚಾತುರ್ಮಾಸದ ಅವಧಿಯನ್ನು ಸೂಚಿಸುವ ಏಕಾದಶಿ ವ್ರತವಾಗಿ ಆಷಾಢ ಮಾಸದ ಶುಕ್ಲ ಪಕ್ಷದ ಏಕಾದಶಿ ತಿಥಿಯನ್ನು ಅತ್ಯಂತ ಭಕ್ತಿ ಭಾವದಿಂದ ಆಚರಿಸಲಾಗುತ್ತದೆ. ಈ ದಿನದಂದು ಬ್ರಹ್ಮಾಂಡದ ರಕ್ಷಕನಾದ ವಿಷ್ಣು ದೇವನು ಕ್ಷೀರ ಸ್ವಾಗರದಲ್ಲಿ ವಿಶ್ರಾಂತಿಯನ್ನು ಪಡೆದುಕೊಳ್ಳಲು ತೆರಳುತ್ತಾನೆಂಬ ಪ್ರತೀತಿ ಏಕಾದಶಿಯ ದಿನ ವಿಶ್ರಾಂತಿಗಾಗಿ ತೆರಳುವ ವಿಷ್ಣು ದೇವನ 4 ತಿಂಗಳುಗಳ ನಂತರ ದೇವುತ್ಥಾನ ಏಕಾದಶಿಯ ದಿನದಂದು ಮರಳಿ ಸೃಷ್ಟಿಯ ರಕ್ಷಣಾ ಜವಾಬ್ದಾರಿಯನ್ನು ತೆಗೆದುಕೊಳ್ಳುತ್ತಾನೆ. ಈ 4 ತಿಂಗಳು ವಿಷ್ಣು ದೇವನ ಬದಲಾಗಿ ಶಿವನು ಬ್ರಹ್ಮಾಂಡದ ರಕ್ಷಣೆಯ ಜವಾಬ್ದಾರಿಯನ್ನು ತೆಗೆದುಕೊಂಡಿರುತ್ತಾನೆ ಎಂಬುದು ಪುರಾಣ ಪ್ರತೀತಿಯಾಗಿ ಆಷಾಢ ಶುದ್ಧ ಏಕಾದಶಿಯನ್ನು ಶನಿವಾರ

## ತೂಬಗೆರೆ ಗ್ರಾಮದಲ್ಲಿ ಭೂತ ನೆರಿಗೆ ಹಬ್ಬ ಆಚರಣೆ



ದೊಡ್ಡಬಳ್ಳಾಪುರ

ತಾಲೂಕಿನ ತೂಬಗೆರೆ ಗ್ರಾಮದಲ್ಲಿ ಸುಮಾರು 600 ವರ್ಷಗಳ ಇತಿಹಾಸ ಹೊಂದಿರುವ ಪಾರಂಪರಿಕ ಜನಪದ ಆಚರಣೆಯಾದ 'ಭೂತ ನೆರಿಗೆ' ಹಬ್ಬವು ಭಾನುವಾರ ಮಧ್ಯಾಹ್ನ 3 ಗಂಟೆಗೆ ನಡೆಯಲಿದೆ.

ಪ್ರತಿವರ್ಷದಂತೆ ಈ ವರ್ಷವೂ ಆಷಾಢ ಮಾಸದ ಏಕಾದಶಿಯ ಮರುದಿನವಾದ ದ್ವಾದಶಿಯಂದು ಭೂತ ನೆರಿಗೆ ಹಬ್ಬವನ್ನು ಸಂಪ್ರದಾಯ ಬದ್ಧವಾಗಿ ಆಚರಣೆ ಮಾಡುತ್ತಾ ಬರಲಾಗುತ್ತಿದೆ.

ಈ ಹಬ್ಬದಲ್ಲಿ ಕರಿಯಣ್ಣ ಹಾಗೂ ಕೆಂಚಣ್ಣರ ವೇಷಧಾರಿಗಳ ಮೇಲೆ ಭೂತವನ್ನು ಆಹ್ವಾನಿಸಿ ಆವೇಶಗೊಳ್ಳುವ ಆಚರಣೆ ನಡೆಯುತ್ತದೆ.

ಈ ಸಂದರ್ಭದಲ್ಲಿ ವೇಷಧಾರಿಗಳ ಹಸಿವು ತಣಿಸುವ ಸಂಪ್ರದಾಯವಿದೆ. ಅಲ್ಲದೆ, ಕರಿಯಣ್ಣ–ಕೆಂಚಣ್ಣರ ವೇಷಧಾರಿಗಳು ಮನೆಗಳಿಗೆ ಬಂದರೆ ಮನೆಯಲ್ಲಿರುವ ದುಷ್ಟಶಕ್ತಿಗಳು ಹಾಗೂ ಪಿಶಾಚಿಗಳು ದೂರವಾಗುತ್ತವೆ ಎಂಬುದು ಜನರ ನಂಬಿಕೆಯಾಗಿದೆ.

ಮುಖ್ಯವಾಗಿ ದೊಡ್ಡಬಳ್ಳಾಪುರ ತಾಲೂಕಿನ ತೂಬಗೆರೆ ಮತ್ತು ಕಲ್ಲುಕೋಟೆ ಗ್ರಾಮಗಳಲ್ಲಿ, ಆಷಾಢ ಮಾಸದಲ್ಲಿ ನೂರಾರು ವರ್ಷಗಳಿಂದ ನಡೆದುಕೊಂಡು ಬಂದಿರುವ ಒಂದು ವಿಶಿಷ್ಟ ಜಾನಪದ ಹಾಗೂ ಧಾರ್ಮಿಕ ಆಚರಣೆಯಾಗಿದೆ.

ವಿಷ್ಣುವಿನ ದ್ವಾರಪಾಲಕರಾದ ಜಯ–ವಿಜಯರು ಶಾಪಕ್ಕೆ ಗುರಿಯಾಗಿ ಕಲಿಯುಗದಲ್ಲಿ ಕರಿಯಣ್ಣ ಮತ್ತು ಕೆಂಚಣ್ಣರ ರೂಪದಲ್ಲಿ ಭೂಲೋಕಕ್ಕೆ ಬರುತ್ತಾರೆ ಎಂಬ ಪೌರಾಣಿಕ ಹಿನ್ನೆಲೆ ಇದೆ.

ಸುಮಾರು 600 ವರ್ಷಗಳ ಇತಿಹಾಸ ಹೊಂದಿರುವ ಈ ಭೂತ ನೆರಿಗೆ ಹಬ್ಬವು ಇಂದಿಗೂ ತೂಬಗೆರೆ ಹಾಗೂ ಕಲ್ಲುಕೋಟೆ ಗ್ರಾಮಗಳಲ್ಲಿ ಸಂಪ್ರದಾಯಬದ್ಧವಾಗಿ ನಡೆದುಕೊಂಡು ಬರುತ್ತಿದೆ. ಹಬ್ಬದ ಸಂದರ್ಭದಲ್ಲಿ ಕರಿಯಣ್ಣ ಹಾಗೂ ಕೆಂಚಣ್ಣರ ವೇಷಧಾರಿಗಳು ಒಂದು ಕೈಯಲ್ಲಿ ಭೂತದ ಮುಖದ ಆಕಾರದ ವರ್ತುಲಾಕಾರದ ನೆರಿಗೆಯನ್ನು ಹಾಗೂ ಮತ್ತೊಂದು ಕೈಯಲ್ಲಿ ಕತ್ತಿಯನ್ನು ಹಿಡಿದಿರುತ್ತಾರೆ.

ಈ ವೇಳೆ ಲಕ್ಷ್ಮೀನರಸಿಂಹಸ್ವಾಮಿಯ ಭಕ್ತರು ವಿಷ್ಣುವಿನ ನಾಮಸ್ಮರಣೆ ಹಾಗೂ ಗುಣಗಾನ ಮಾಡುತ್ತಾ ಕರಿಯಣ್ಣ–ಕೆಂಚಣ್ಣರನ್ನು ಕೆಣಕುತ್ತಾರೆ. ವಿಷ್ಣುವಿನ ನಾಮಸ್ಮರಣೆಯನ್ನು ಸಹಿಸಲಾಗದೆ ಆವೇಶಗೊಂಡ ಕರಿಯಣ್ಣ ಹಾಗೂ ಕೆಂಚಣ್ಣ ಭಕ್ತರ ಕಡೆಗೆ ನುಗ್ಗುತ್ತಾರೆ. ಅವರನ್ನು ಶಾಂತಗೊಳಿಸುವ ಸಲುವಾಗಿ ಬಾಳೆಹಣ್ಣು ಹಾಗೂ ಹಲಸಿನ ಹಣ್ಣಿನಿಂದ ತಯಾರಿಸಿದ ರಸಾಯನವನ್ನು ಬಾಯಿಗೆ ತಿನ್ನಿಸಲಾಗುತ್ತದೆ. ಆವೇಶದಲ್ಲಿರುವ ಭೂತಗಳು ಆ ಸಂದರ್ಭದಲ್ಲಿ ಏನು ಕೊಟ್ಟರೂ ಸ್ವೀಕರಿಸುತ್ತವೆ ಎಂಬುದು ಜಾನಪದ ನಂಬಿಕೆಯಾಗಿದೆ.

ಕೆಲವು ಗ್ರಾಮಗಳಲ್ಲಿ ನಡೆಯುವ ಇದೇ ಆಚರಣೆಯಲ್ಲಿ ಕರಿಯಣ್ಣ ಹಾಗೂ ಕೆಂಚಣ್ಣರ ಬಾಯಿಗೆ ಕುರಿ ಮತ್ತು ಕೋಳಿಗಳನ್ನು ಬಲಿಯಾಗಿ ನೀಡುವ ಸಂಪ್ರದಾಯವೂ ಇದೆ. ಅವುಗಳ ರಕ್ತವನ್ನು ಹೀರುವುದರ ಮೂಲಕ ಕರಿಯಣ್ಣ–ಕೆಂಚಣ್ಣ ಶಾಂತರಾಗುತ್ತಾರೆ ಎಂಬುದು ಈ ಭಾಗದ ಭಕ್ತರ ನಂಬಿಕೆಯಾಗಿದೆ.

# ಸದೃಢ ದೇಶ ನಿರ್ಮಾಣದ ಗುರಿ ಯುವ ಸಮೂಹದಲ್ಲಿದೆ: ಕೆ. ಷಡಕ್ಷರಿ

ತಿಪಟೂರು

ಸುಂದರ ಮತ್ತು ಸದೃಢ ದೇಶ, ನಿರ್ಮಾಣದಲ್ಲಿ ಯುವ ಸಮೂಹದ ನಿರ್ಧಾರದ ಮೇಲೆ ನಿಂತಿದೆ. ನಶೆ ಮುಕ್ತ ಭಾರತ ನಿರ್ಮಾಣ ನಮ್ಮ ಸಂಕಲ್ಪವಾಗಿದ್ದು, ವಿದ್ಯಾರ್ಥಿಗಳು ಹಾಗೂ ಯುವಜನತೆ ಮಾದಕ ವಸ್ತುಗಳಿಂದ ದೂರವಿದ್ದು, ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಶಾಸಕ ಕೆ.ಷಡಕ್ಷರಿ ತಿಳಿಸಿದರು.

ನಗರದ ಒಕ್ಕಲಿಗರ ಭವನದ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಪೊಲೀಸ್ ಹಾಗೂ ತುಮಕೂರು ಜಿಲ್ಲಾ ಪೊಲೀಸ್ ವತಿಯಿಂದ ಆಯೋಜಿಸಿದ್ದ ಡ್ರಗ್ಸ್ ಮುಕ್ತ ಕರ್ನಾಟಕ ಸಂಕಲ್ಪ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಡ್ರಗ್ಸ್, ಅಫೀಮ್, ಗಾಂಜಾ, ಹೆರಾಯಿನ್, ಚರಸ್ ಸೇರಿದಂತೆ ಮಾದಕ ವಸ್ತುಗಳು ಮನುಷ್ಯನ ಜೀವಕ್ಕೆ ಮಾರಕವಾಗಿ ಪರಿಣಮಿಸಿದೆ. ಯುವ ಸಮೂಹ ದುಷ್ಚಟಗಳಿಂದ ದೂರವಿರಬೇಕು ಜೊತೆಗೆ ದೇಶದ ಅಭಿವೃದ್ಧಿಗೂ ತೊಡಕಾಗಿ, ವಿದ್ಯಾರ್ಥಿಗಳು ತಮ್ಮ ವಿದ್ಯಾರ್ಥಿ ಜೀವನವನ್ನು ಹಾಳು ಮಾಡಿಕೂಳ್ಳಬಾರದು. ಕರ್ನಾಟಕದಲ್ಲಿ ಮಾದಕ ವಸ್ತುಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದ್ದು, ಮಾದಕ ವಸ್ತುಗಳ ಮಾರಾಟ ಹಾಗೂ ಸೇವನೆ ಮಾಡುವವರ ವಿರುದ್ಧ ಪೊಲೀಸ್ ಇಲಾಖೆ ಕಠಿಣ ಕ್ರಮ ಕೈಗೊಳ್ಳಬೇಕು. ಯುವಕರು ಮಾದಕ ವಸ್ತುಗಳಿಂದ ದೂರವಿದ್ದು, ಆರೋಗ್ಯವಂತ ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ತಿಳಿಸಿದರು.

ಈ ವೇಳೆ ಡಿವೈಎಸ್ಪಿ ಎಂ.ಹೆಚ್.ಉಮೇಶ್ ಮಾತನಾಡಿ, ದೇಶದಲ್ಲಿ ಗಂಟೆಗೆ ಒಬ್ಬರಂತೆ ಮಾದಕ ವ್ಯಸನಕ್ಕೆ ಬಲಿಯಾಗುತ್ತಿದ್ದಾರೆ. ಮಾದಕ ವಸ್ತುಗಳಿಗೆ ದಾಸರಾಗುವ ಯುವಕರು ಮಾನಸಿಕ ಖಿನ್ನತೆಗೆ ಒಳಗಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಡ್ರಗ್ಸ್, ಹೆರಾಯಿನ್, ಗಾಂಜಾದಂತಹ ಮಾದಕ ವಸ್ತುಗಳು ಮಾನಸಿಕ ಆರೋಗ್ಯದ ಮೇಲೆ ನೇರ ಪರಿಣಾಮ ಬೀರುವುದರಿಂದ ಯುವಕರು ಮಾನಸಿಕ ಸ್ಥಿಮಿತ ಕಳೆದುಕೊಂಡು ಸಮಾಜಘಾತುಕ ಹಾಗೂ ಕ್ರೌರ್ಯದ ಕೃತ್ಯಗಳಲ್ಲಿ ತೊಡಗುತ್ತಿದ್ದಾರೆ.ಮಾದಕ ವಸ್ತುಗಳನ್ನು ಕೊಂಡುಕೊಳ್ಳಲು ಹಣವಿಲ್ಲದಿದ್ದಾಗ ಕಳ್ಳತನ,ಕೊಲೆ ಸುಲಿಗೆಯಂತಹ ಕೃತ್ಯಗಳಲ್ಲಿ ತೊಡಗುತ್ತಾರೆ. ಆರೋಗ್ಯವಂತ ಸಮಾಜ ನಿರ್ಮಾಣವಾಗಲು ನಾಗರಿಕರ ಸಹಕಾರವೂ ಮುಖ್ಯವಾಗಿದೆ. ಯುವಕರು ತಮ್ಮ ಸ್ನೇಹಿತರು ಹಾಗೂ ಸಹ ಪಾಠಿಗಳ ವರ್ತನೆಯಲ್ಲಿ ಆಗುವ ಬದಲಾವಣೆಗಳ ಬಗ್ಗೆ ಗಮನಹರಿಸಬೇಕು. ಅಂತಹ ಬದಲಾವಣೆಗಳು ಕಂಡುಬಂದರೆ ಸಂಬಂಧಿತ ಪೋಷಕರು ಹಾಗೂ ಶಾಲಾ ಶಿಕ್ಷಕರ ಗಮನಕ್ಕೆ ತರಬೇಕು. ಮಾದಕ ವಸ್ತುಗಳ ಮಾರಾಟ ಅಥವಾ ಸೇವನೆಯಂತಹ ಘಟನೆಗಳು ಕಂಡುಬಂದರೆ ಕೆಎಸ್‌ಪಿ ಹ್ಯಾಪ್ ಅಥವಾ ಬೇಡ ಬ್ರೋ ವೆಬ್‌ಸೈಟ್ ಮೂಲಕ ಪೊಲೀಸ್ ಇಲಾಖೆಗೆ ಮಾಹಿತಿ ನೀಡಿದರೆ ತಕ್ಷಣ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಚನ್ನಕೇಶವ ಮಾತನಾಡಿ, ಡ್ರಗ್ಸ್, ಅಫೀಮ್, ಹೆರಾಯಿನ್, ಗಾಂಜಾ ಹಾಗೂ ಮತ್ತು ನಶೆವುಳ್ಳ ಔಷಧಿಗಳು ಮನುಷ್ಯನ ಆರೋಗ್ಯಕ್ಕೆ ಮಾರಕವಾಗಿವೆ. ಇವು ನರ ಮಂಡಲದ ಮೇಲೆ ದುಷ್ಪರಿಣಾಮ ಬೀರಿದ್ದು, ಆರೋಗ್ಯವನ್ನು ಹಾಳು ಮಾಡುತ್ತವೆ. ಅಲ್ಲದೆ ಅನೇಕ ಮಾರಣಾಂತಿಕ ಕಾಯಿಲೆಗಳಿಗೆ ತುತ್ತಾಗಿ ಯುವಕರು ಅತೀ ಚಿಕ್ಕ ವಯಸ್ಸಿನಲ್ಲೇ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ.

ಇನ್ನೂ ಕೆಲವರು ಸಲ್ಯೂಷನ್ ಹಾಗೂ ನೇಲ್ ಪಾಲಿಷ್‌ಗಳನ್ನು ದುರುಪಯೋಗಪಡಿಸಿಕೊಂಡು ಆರೋಗ್ಯ ಹಾಳು ಮಾಡಿಕೊಳ್ಳುತ್ತಿರುವುದು ವಿಷಾದನೀಯ ಎಂದರು.

ಕಾರ್ಯಕ್ರಮದಲ್ಲಿ ಗ್ರಾಮಾಂತರ ವೃತ್ತ ನಿರೀಕ್ಷಕ ಚಂದ್ರಶೇಖರ್, ವೆಂಕಟೇಶ್, ನಗರ ವೃತ್ತ ನಿರೀಕ್ಷಕ ರವಿಕುಮಾರ್, ಬಿಇಓ ತಾರಾಮಣಿ,ಸಬ್ ಇನ್‌ಸ್ಪೆಕ್ಟರ್ ಗಳಾದ ಯತೀಶ್, ಚಂದ್ರಶೇಖರ್, ಕೃಷ್ಣಪ್ಪ ಹಾಗೂ ಹೊನ್ನವಳ್ಳಿ ಸಬ್ ಇನ್‌ಸ್ಪೆಕ್ಟರ್ ರಮೇಶ್ ಸೇರಿದಂತೆ ಪೊಲೀಸ್ ಸಿಬ್ಬಂದಿ, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹಾಜರಿದ್ದರು.

27/07/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಜಂತರ್ ಮಂತರ್ ಹಿಂಸಾಚಾರ: 15 ಎಫ್ಐಆರ್ ದಾಖಲು

ನವದೆಹಲಿ

ಜುಲೈ 20ರಂದು ರಾಷ್ಟ್ರ ರಾಜಧಾನಿಯ ಜಂತರ್ ಮಂತರ್‌ನಿಂದ ಸಂಸತ್ತಿನತ್ತ ನಡೆದ ಪ್ರತಿಭಟನಾ ಮೆರವಣಿಗೆಯಲ್ಲಿ ಉಂಟಾದ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ದೆಹಲಿ ಪೊಲೀಸರು 15 ಎಫ್‌ಐಆರ್‌ಗಳನ್ನು ದಾಖಲಿಸಿದ್ದಾರೆ. ಘಟನೆಯಲ್ಲಿ ಸುಮಾರು 130 ಪೊಲೀಸ್ ಸಿಬ್ಬಂದಿ ಹಾಗೂ 65 ವಿದ್ಯಾರ್ಥಿಗಳು ಗಾಯಗೊಂಡಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಪ್ರತಿಭಟನಾ ಸ್ಥಳವಾದ ಜಂತರ್ ಮಂತರ್ ಮತ್ತು ಸುತ್ತಮುತ್ತ ಸುಮಾರು 10 ಸಾವಿರಕ್ಕೂ ಹೆಚ್ಚು ಜನರು ಸೇರಿದ್ದ ಹಿನ್ನೆಲೆಯಲ್ಲಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಸುಮಾರು 3 ಸಾವಿರ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು. ಪ್ರತಿಭಟನಾ ಸ್ಥಳಕ್ಕೆ ಆಗಮಿಸುವ ಸಮಾಜ ವಿರೋಧಿ ಹಾಗೂ ಅಪರಾಧ ಹಿನ್ನೆಲೆಯುಳ್ಳ ವ್ಯಕ್ತಿಗಳನ್ನು ಗುರುತಿಸಲು ಮುಖ ಗುರುತಿಸುವಿಕೆ ವ್ಯವಸ್ಥೆಯ ಕ್ಯಾಮೆರಾಗಳನ್ನು ಬಳಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ್ದ 2 ಸಾವಿರಕ್ಕೂ ಅಧಿಕ ಸಮಾಜ ವಿರೋಧಿ ಹಾಗೂ ಅಪರಾಧ ಹಿನ್ನೆಲೆಯುಳ್ಳ ವ್ಯಕ್ತಿಗಳನ್ನು ಗುರುತಿಸಲಾಗಿದೆ. ಪ್ರತಿಭಟನಾಕಾರರು ಹಾಗೂ ಇತರರ ಚಲನವಲನಗಳ ಮೇಲೂ ನಿಗಾ ಇರಿಸಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ.

ಜುಲೈ 20ರಂದು ಸಾವಿರಾರು ಮಂದಿ ಭಾಗವಹಿಸಿದ್ದ ಮೆರವಣಿಗೆ ವೇಳೆ ಪರಿಸ್ಥಿತಿ ಉದ್ವಿಗ್ನಗೊಂಡಿತ್ತು. ಕೆಲ ಪ್ರತಿಭಟನಾಕಾರರು ಬ್ಯಾರಿಕೇಡ್‌ಗಳನ್ನು ಹತ್ತಲು ಮುಂದಾದ ಹಿನ್ನೆಲೆಯಲ್ಲಿ ಪೊಲೀಸರು ಪರಿಸ್ಥಿತಿ ನಿಯಂತ್ರಿಸಲು ಅಶ್ರುವಾಯು ಹಾಗೂ ಲಾಠಿ ಪ್ರಹಾರ ನಡೆಸಿದರು. ಈ ವೇಳೆ ಪೊಲೀಸರು



ಮತ್ತು ಪ್ರತಿಭಟನಾಕಾರರು ಗಾಯಗೊಂಡಿದ್ದಾರೆ. ಕಲ್ಲು ತೂರಾಟ ಹಾಗೂ ಹಿಂಸಾಚಾರಕ್ಕೆ ವಿದ್ಯಾರ್ಥಿಗಳ ಸೋಗಿನಲ್ಲಿ ಬಂದಿದ್ದ ಸಮಾಜ ವಿರೋಧಿ ವ್ಯಕ್ತಿಗಳು ಕಾರಣ ಎಂದು ಪೊಲೀಸರು ಆರೋಪಿಸಿದ್ದಾರೆ.

ವಿದ್ಯಾರ್ಥಿಗಳ ತಲೆಗೆ ಹೊಡೆದು ಗಾಯಗೊಳಿಸಲಾಗಿದೆ, ಕೆಲವರನ್ನು ರಸ್ತೆಯಲ್ಲಿ ಎಳೆದಾಡಲಾಗಿದೆ ಹಾಗೂ ಯುವತಿಯರ ಮೇಲೂ ಹಲ್ಲೆ ನಡೆದಿದೆ ಎಂದು ಆರೋಪಿಸಿರುವ ಅವರು, ಇದಕ್ಕೆ ಸಂಬಂಧಿಸಿದ ಸಾಕ್ಷ್ಯಗಳನ್ನು ಒದಗಿಸುವುದಾಗಿ ಹೇಳಿದ್ದಾರೆ.

ಪ್ರತಿಭಟನೆಯಲ್ಲಿ ನಡೆದ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ಪಾರ್ಲಿಮೆಂಟ್ ಸ್ಟ್ರೀಟ್ ಹಾಗೂ ಕನ್ನಾಟ್ ಪ್ಲೇಸ್ ಪೊಲೀಸ್ ಠಾಣೆಗಳಲ್ಲಿ ಪ್ರಕರಣಗಳು ದಾಖಲಾಗಿವೆ. ಭಾರತೀಯ ನ್ಯಾಯ ಸಂಹಿತೆ 2023, ಶಸ್ತ್ರಾಸ್ತ್ರ ಕಾಯ್ದೆ 1959 ಹಾಗೂ ಸಾರ್ವಜನಿಕ ಆಸ್ತಿ ಹಾನಿ ತಡೆ ಕಾಯ್ದೆಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಎಫ್‌ಐಆರ್‌ಗಳನ್ನು ದಾಖಲಿಸಿ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ವಿಶೇಷ ವಿವಾಹ ಕಾಯ್ದೆಯಡಿ ಮುಸ್ಲಿಂ ಪುರುಷನ ಎರಡನೇ ಮದುವೆ ಅನೂರ್ಜಿತ: ಹೈಕೋರ್ಟ್


ಬೆಂಗಳೂರು

ವಿಶೇಷ ವಿವಾಹ ಕಾಯ್ದೆ 1954ರ ಅಡಿಯಲ್ಲಿ ಮೊದಲ ವಿವಾಹ ಅಸ್ತಿತ್ವದಲ್ಲಿರುವಾಗಲೇ ಮುಸ್ಲಿಂ ಪುರುಷನೊಬ್ಬ ಮಾಡಿಕೊಂಡ ಎರಡನೇ ವಿವಾಹವು ಕಾನೂನುಬದ್ಧವಾಗಿ ಅನೂರ್ಜಿತವಾಗುತ್ತದೆ ಎಂದು ಕರ್ನಾಟಕ ಹೈಕೋರ್ಟ್‌ನ ಧಾರವಾಡ ಪೀಠ ಮಹತ್ವದ ತೀರ್ಪು ನೀಡಿದೆ.

ನ್ಯಾಯಮೂರ್ತಿ ಸಚಿನ್ ಶಂಕರ್ ಮಗದುಮ್ ಅವರ ಏಕಸದಸ್ಯ ಪೀಠವು, ಮುಸ್ಲಿಂ ವೈಯಕ್ತಿಕ ಕಾನೂನಿನ ಪ್ರಕಾರ ಪುರುಷರಿಗೆ ಬಹುಪತ್ನಿತ್ವಕ್ಕೆ ಅವಕಾಶವಿದ್ದರೂ, ವ್ಯಕ್ತಿಯು ವಿಶೇಷ ವಿವಾಹ ಕಾಯ್ದೆಯಡಿ ವಿವಾಹವಾಗಲು ಆಯ್ಕೆ ಮಾಡಿಕೊಂಡಾಗ ಆ ಕಾಯ್ದೆಯ ಕಡ್ಡಾಯ ನಿಯಮಗಳಿಗೆ ಒಳಪಡಬೇಕಾಗುತ್ತದೆ ಎಂದು ಸ್ಪಷ್ಟಪಡಿಸಿದೆ. ಹೀಗಾಗಿ, ಮೊದಲ ವಿವಾಹ ಕಾನೂನುಬದ್ಧವಾಗಿ ಅಸ್ತಿತ್ವದಲ್ಲಿರುವ ಸಂದರ್ಭದಲ್ಲಿ ಅದೇ ಕಾಯ್ದೆಯಡಿ ಮತ್ತೊಂದು ವಿವಾಹ ಮಾಡಿಕೊಳ್ಳಲು ಅವಕಾಶವಿಲ್ಲ ಎಂದು ನ್ಯಾಯಾಲಯ ತಿಳಿಸಿದೆ. "ವ್ಯಕ್ತಿಗಳು ತಮ್ಮ ವೈಯಕ್ತಿಕ ಕಾನೂನಿನ ಬದಲು ವಿಶೇಷ ವಿವಾಹ ಕಾಯ್ದೆಯ ನಿಬಂಧನೆಗಳನ್ನು ಪ್ರಜ್ಞಾಪೂರ್ವಕವಾಗಿ ಆಯ್ಕೆ ಮಾಡಿಕೊಂಡ ನಂತರ, ಸಂಸತ್ತು ರೂಪಿಸಿರುವ ಕಡ್ಡಾಯ ಶಾಸನಬದ್ಧ ವ್ಯವಸ್ಥೆಗೆ ಒಳಪಡುತ್ತಾರೆ. ಅಂತಹ ವಿವಾಹದಿಂದ ಉಂಟಾಗುವ ಹಕ್ಕುಗಳು ಮತ್ತು ಬಾಧ್ಯತೆಗಳನ್ನು ವೈಯಕ್ತಿಕ ಕಾನೂನಿನ ಆಧಾರದ ಮೇಲೆ ಅಲ್ಲದೆ, ವಿಶೇಷ ವಿವಾಹ ಕಾಯ್ದೆಯ ನಿಬಂಧನೆಗಳ ಆಧಾರದ ಮೇಲೆಯೇ ನಿರ್ಧರಿಸಬೇಕು" ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ಅವರ ನಿಧನದ ಬಳಿಕ ಮಹಿಳೆ ಮತ್ತು ಅವರ ಪುತ್ರಿ, ವಿಭಜನಾ ದಾವೆಯಲ್ಲಿ ತಮ್ಮನ್ನು ಪ್ರತಿವಾದಿಗಳಾಗಿ ಸೇರಿಸುವಂತೆ ಮನವಿ ಮಾಡಿದ್ದರು. ಆದರೆ ವಿಚಾರಣಾ ನ್ಯಾಯಾಲಯವು ಮಹಿಳೆಯನ್ನು ಕಾನೂನುಬದ್ಧ ಪತ್ನಿ ಎಂದು ಪರಿಗಣಿಸಲು ಹಾಗೂ ಅವರನ್ನು ಪ್ರಕರಣದಲ್ಲಿ ಪಕ್ಷಕಾರರನ್ನಾಗಿ ಸೇರಿಸಲು ನಿರಾಕರಿಸಿತ್ತು. ಈ ಆದೇಶವನ್ನು ಪ್ರಶ್ನಿಸಿ ಮಹಿಳೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್, ವಿಶೇಷ ವಿವಾಹ ಕಾಯ್ದೆಯಡಿ ನಡೆದ ಮೊದಲ ವಿವಾಹ ಅಸ್ತಿತ್ವದಲ್ಲಿರುವಾಗ ಎರಡನೇ ವಿವಾಹಕ್ಕೆ ಕಾನೂನು ಮಾನ್ಯತೆ ಇರುವುದಿಲ್ಲ ಎಂಬ ಮಹತ್ವದ ಕಾನೂನು ನಿಲುವನ್ನು ಪುನರುಚ್ಚರಿಸಿದೆ.

## ಆರೋಗ್ಯ ತಪಾಸಣಾ ಶಿಬಿರ



ಚಿಕ್ಕಬಳ್ಳಾಪುರ

ಆರೋಗ್ಯವೇ ಭಾಗ್ಯ ಪ್ರತಿಯೊಬ್ಬರು ಆರೋಗ್ಯವನ್ನು ಕಾಪಾಡಿಕೊಂಡು ತಮ್ಮ ಜೀವನ ಸುಂದರಮಯವನ್ನಾಗಿಸಿ ಕೊಳ್ಳಬೇಕು ಎಂದು ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷರಾದ ಸಂದೀಪ ಬಿ ರೆಡ್ಡಿ ಅವರು ಹೇಳಿದರು.

ತಾಲೂಕಿನ ಜಾತವಾರ ಗ್ರಾಮದ ಶ್ರೀರಾಮಾನುಜ ಸಮುದಾಯ ಭವನದಲ್ಲಿ ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ಹಾಗೂ ಬೆಂಗಳೂರಿನ ಈಸ್ಟ್ ಪಾಯಿಂಟ್ ಆಸ್ಪತ್ರೆ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಭಾಗವಹಿಸಿ ಮಾತನಾಡಿದ ಅವರು, ತಮ್ಮ ದೈನಂದಿನ ಕೆಲಸಗಳಿಗೆ ಹೆಚ್ಚು ಒತ್ತು ಕೊಡುವುದರ ಜೊತೆಗೆ ನಮ್ಮ ಆರೋಗ್ಯವನ್ನು ನಾವು ಕಾಪಾಡಿಕೊಳ್ಳುವುದು ನಮ್ಮ ಆದ್ಯ ಕರ್ತವ್ಯವಾಗಿದೆ ಗ್ರಾಮೀಣ ಪ್ರದೇಶದ ಈ ಭಾಗಗಳಲ್ಲಿ ಇಂತಹ ಆರೋಗ್ಯ ಶಿಬಿರಗಳು ವರದಾನ ಈ ಶಿಬಿರಗಳ ಲಾಭವನ್ನು ಪಡೆದುಕೊಳ್ಳುವ ಮೂಲಕ ಇತರರಲ್ಲೂ ಇಂತಹ ಉಚಿತ ಆರೋಗ್ಯ ತಪಾಸಾಣಾ ಶಿಬಿರಗಳ ಬಗ್ಗೆ ಜಾಗೃತಿ ಮೂಡಿಸಬೇಕು ಎಂದರು.

ಇದೆ ವೇಳೆ ಬೆಂಗಳೂರಿನ ಇಷ್ಟ್ ಪಾಯಿಂಟ್ ಆಸ್ಪತ್ರೆಯ ತಜ್ಞ ವೈದ್ಯರಿಂದ ಉಚಿತ ಆರೋಗ್ಯ ಸಲಹೆ ಹಾಗೂ ತಪಾಸಣೆ ಮಾಡಲಾಯಿತು. ರಕ್ತದಲ್ಲಿ ಸಕ್ಕರೆ ಮತ್ತು ರಕ್ತದೊತ್ತಡ ಪರೀಕ್ಷೆ, ಹಾಗೂ ಉಚಿತ ಔಷಧಿ ವಿತರಣೆ ಅಗತ್ಯ ಇದ್ದವರಿಗೆ ಮುಂದಿನ ಚಿಕಿತ್ಸೆಗೆ ಮಾರ್ಗದರ್ಶನ ನೀಡಲಾಯಿತು.

ಜಾತವಾರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ನೂರಾರು ಫಲಾನುಭವಿಗಳು ಉಚಿತ ಆರೋಗ್ಯ ಶಿಬಿರದ ಲಾಭ ಪಡೆದುಕೊಂಡರು.

ಉಚಿತ ಆರೋಗ್ಯ ಶಿಬಿರದ ಈ ಸಂದರ್ಭದಲ್ಲಿ ಬೆಂಗಳೂರಿನ ಈಸ್ಟ್ ಪಾಯಿಂಟ್ ಆಸ್ಪತ್ರೆಯ ಡಾ ಅನಂತ್, ಹಾಗೂ ಇತರ ವೈದ್ಯರು ಸಿಬ್ಬಂದಿ ವರ್ಗ ಸೇರಿದಂತೆ ಅಣಕನೂರು ವೆಂಕಟೇಶ್, ಶ್ರೀಕಾಂತ್, ಸುನಿಲ್, ಹರ್ಷ, ಮಂಜುನಾಥ್, ರಿಯಾಜ್, ಗೋಪಿ, ಜಾತವಾರ ಜಗದೀಶ್, ವರದಹಳ್ಳಿ ಮುಖೇಶ್ ಪಟ್ರೆನಹಳ್ಳಿ ಶಾರದಾ, ಜಾತವಾರ ವಿತೇಶ್, ಮುತ್ತುಕದಹಳ್ಳಿ ರಾಜಣ್ಣ, ಪ್ರಶಾಂತ್, ನಂದ ಸೇರಿದಂತೆ ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ಸಿಬ್ಬಂದಿ ವರ್ಗ ಸಂದೀಪ ಬಿ ರೆಡ್ಡಿ ಅವರ ಅಭಿಮಾನಿ ವೃಂದ ಇದ್ದರು.

## ವ್ಯಾಪಾರಿಗಳೇ ಇಂದು ದೇಶದ
### ಆರ್ಥಿಕತೆಗೆ ಬೆನ್ನೆಲುಬು: ಶುಭಂ ಕಂಡೇವಾಲ್



ಚಿಕ್ಕಬಳ್ಳಾಪುರ

ಭಾರತದ ಅತ್ಯಧಿಕ ಉದ್ಯೋಗಿಗಳಲ್ಲಿ ರೈತರು,ಕಾರ್ಮಿಕರು, ಮಹಿಳೆಯರು, ಸಣ್ಣ ಸಣ್ಣ ವ್ಯಾಪಾರಿಗಳೇ ಇಂದು ದೇಶದ ಆರ್ಥಿಕತೆಗೆ ಬೆನ್ನುಲುಬಾಗಿದ್ದಾರೆ. ಆದರೆ ಇಂತಹ ಕೊಟ್ಯಾಂತರ ಅಸಂಘಟಿತ ವಲಯದ ಕಾರ್ಮಿಕರಿಗೆ ಪಿಎಫ್ ಪಿಂಚಣಿ, ವಿಮೆ, ಹೂಡಿಕೆ ಯೋಜನೆಗಳು ಸೇರಿದಂತೆ ಯಾವ ಕನಿಷ್ಟ ಸೌಲಭ್ಯಗಳೂ ಇಲ್ಲ. ಗಮನದಲ್ಲಿಟ್ಟುಕೊಂಡೆ ಕೇಂದ್ರ ಸರ್ಕಾರ ಎನ್‌ಪಿಎಸ್ ಸಂಚಯ್ ಎಂಬ ನೂತನ ಯೋಜನೆ ಜಾರಿಗೆ ತಂದಿದೆ ಎಂದು ಪಿಎಫ್‌ಆರ್‌ಡಿಎ ವಿಭಾಗೀಯ ವ್ಯವಸ್ಥಾಪಕ ಶುಭಂ ಕಂಡೇವಾಲ್ ತಿಳಿಸಿದ್ದಾರೆ.

ನಗರದ ಖಾಸಗಿ ಹೋಟೆಲ್‌ನಲ್ಲಿ ಪಿಎಫ್‌ಆರ್‌ಡಿ ಎ,ಎಸ್‌ಎಲ್ ಬಿಸಿ, ಹಾಗೂ ಲೀಡ್ ಬ್ಯಾಂಕ್ ಕಚೇರಿ ವತಿಯಿಂದ ಕೃಷಿ ಮತ್ತು ಕೃಷಿ ಅವಲಂಬಿತ ಉದ್ಯಮಿಗಳಿಗೆ ಅಯೋಜಿಸಿದ್ದ ಎನ್‌ಪಿ ಎಸ್ ಸಂಚಯ್ ಯೋಜನೆ ಬಗ್ಗೆ ಅರಿವು ಕುರಿತ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಅಸಂಘಟಿತ ವಲಯದಲ್ಲಿ ಕೆಲಸ ಮಾಡುವ 18 ವರ್ಷದಿಂದ 80 ವರ್ಷದೊಳಗಿನ ಎಲ್ಲರಿಗೂ ವೃದ್ದಾಪ್ಯ ಕಾಲದಲ್ಲಿ ಗೌರವಯುತ ಜೀವನ ನಡೆಸಲು ಇದು ಅನುಕೂಲವಾಗಲಿದೆ ಎಂದರು.

ಇಂದಿನಿಂದ ತಮ್ಮ ಕೈಲಾದಷ್ಟು ಉಳಿತಾಯದ ಹಣವನ್ನ ಎನ್‌ಪಿಎಸ್ ಸಂಚಯ್ ಯೋಜನೆ ಖಾತೆಯಲ್ಲಿ ಹೂಡಿಕೆ ಮಾಡುತ್ತಾ ಹೋದರೆ ವೃದ್ದಾಪ್ಯದಲ್ಲಿ ಪಿಂಚಣಿ ರೂಪದಲ್ಲಿ ಹಣ ಪಡೆಯಲು ಸಹಾಯವಾಗುತ್ತದೆ ಎಂದು ಮಾಹಿತಿ ನೀಡಿದರು.

ಸಂಚಯ್ ಯೋಜನೆಯ ಸಮಗ್ರ ವಿವರ ನೀಡಿದ


ಎಸ್‌ಎಲ್‌ಬಿಸಿ ಸಹಾಯಕ ವ್ಯವಸ್ಥಾಪಕ ರಾಘವೇಂದ್ರ ಅವರು, ಕಾರ್ಮಿಕರು, ರೈತರು, ಫುಡ್ ಪ್ರೊಡಕ್ಷನ್, ಸೈಬರ್ ಸೆಂಟರ್ ಮಾಲಿಕರು, ಸಣ್ಣಪುಟ್ಟ ವ್ಯಾಪಾರಿಗಳು ಮಹಿಳೆಯರು ಸೇರಿದಂತೆ ಎಲ್ಲರಿಗೂ ಅಟಲ್ ಪೆನ್ಷನ್ ಯೋಜನೆಯಲ್ಲಿ ಕೇವಲ 40 ವರ್ಷದವರೆಗೂ ಮಾತ್ರ ಅವಕಾಶ ನೀಡಲಾಗಿತ್ತು. ಜೊತೆಗೆ ಕನಿಷ್ಟ ಮಟ್ಟದ ಹಣ ಕಟ್ಟುವಂತೆ ನಿಗದಿ ಮಾಡಲಾಗಿತ್ತು. ಆದರೆ ಎನ್ ಪಿ ಎಸ್ ಸಂಚಯ್ ಯೋಜನೆಯಲ್ಲಿ ಈ ವಯಸ್ಸಿನ ಇತಿಮಿತಿ ಇಲ್ಲ ಎಂದು ತಿಳಿಸುತ್ತಾ, 18ರಿಂದ 85. ವರ್ಷದವರೆಗೂ ಹೂಡಿಕೆ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಯೋಜನೆಗೆ ಪ್ರವೇಶ ಪಡೆಯುವಾಗ ಕನಿಷ್ಟ 250 ರೂ. ಮೊತ್ತ ಪಾವತಿಸಿ ಖಾತೆ ತೆರೆದರೆ, ಆನಂತರ ನೀವು 10 ರೂ.ಗಳ ಮೇಲೆ ಎಷ್ಟು ಹಣವಿದ್ದರೂ ಹೂಡಿಕೆ ಮಾಡಲು ಕೇಂದ್ರ ಸರ್ಕಾರ ಅವಕಾಶ ನೀಡಿರುವ ಕಾರಣ, ವೃದ್ದಾಪ್ಯದಲ್ಲಿ ನೆಮ್ಮದಿಯ ಜೀವನ ನಡೆಸಲು ಈ ಯೋಜನೆ ನೆರವಾಗಲಿದೆ ಎಂದರು.

ಈ ಸಂದರ್ಭದಲ್ಲಿ ಪಿಎಫ್‌ಆರ್‌ಡಿಎ ಸಹಾಯಕ ವ್ಯವಸ್ಥಾಪಕ ಸಚಿನ್ ರಾಟಿ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಅರುಣ್ ಕುಮಾರ್, ಎಸ್‌ಎಲ್‌ಬಿಸಿ ಸಹಾಯಕ ನಿರ್ದೇಶಕ ಆನಂದ್ ನಾಯಕ್, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ದೇವರಾಜ್, ಸಿಬಿಆರ್ ಸೆಟಿ ನಿರ್ದೇಶಕ ನಾರಾಯಣಸ್ವಾಮಿ, ಕೆನರಾ ಬ್ಯಾಂಕ್ ಪ್ರದಾನ ಕಚೇರಿ ವ್ಯವಸ್ಥಾಪಕಿ ಶ್ರಾವಣಿ ಕೆನರಾ ಬ್ಯಾಂಕ್ ಎಫ್‌ಎಲ್‌ಸಿ ಅಧಿಕಾರಿ ಎಎಂ ಕವಿತ ಸೇರಿದಂತೆ ಇತರರು ಹಾಜರಿದ್ದರು.

## ವಿವಿಧ ಯೋಜನೆಗಳಡಿ ಅರ್ಹ ಫಲಾನುಭವಿಗಳ ಆಯ್ಕೆ: ಡಿಸಿ

ತುಮಕೂರು

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರ ಅಧ್ಯಕ್ಷತೆಯಲ್ಲಿ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮದ 2023–24 ರಿಂದ 2025–26ನೇ ಸಾಲಿನವರೆಗೆ ವಿವಿಧ ಯೋಜನೆಗಳಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ಫಲಾಪೇಕ್ಷಿಗಳ ಅರ್ಜಿಗಳನ್ನು ಪರಿಶೀಲಿಸಿ, ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡುವ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆ ನಡೆಯಿತು.



ಸಭೆಯಲ್ಲಿ ನಿಗಮದ ವಿವಿಧ ಯೋಜನೆಗಳಾದ ಸ್ವಯಂ ಉದ್ಯೋಗ ಯೋಜನೆ (0.50 ಲಕ್ಷ ಸಹಾಯಧನ), ಉದ್ಯಮಶೀಲತಾ ಅಭಿವೃದ್ಧಿ ಯೋಜನೆ (2.00 ಲಕ್ಷ ಸಹಾಯಧನ), ಸ್ವಾವಲಂಬಿ ಸಾರಥಿ ಯೋಜನೆ (4.00 ಲಕ್ಷ ಸಹಾಯಧನ) ಹಾಗೂ ಲ್ಯಾಪ್‌ಟಾಪ್ ಯೋಜನೆಗಳಡಿ ಅರ್ಜಿ ಸಲ್ಲಿಸಿರುವ ಫಲಾಪೇಕ್ಷಿಗಳ ಅರ್ಜಿಗಳನ್ನು ಸರ್ಕಾರದ ಮಾರ್ಗಸೂಚಿಗಳನ್ವಯ ಪರಿಶೀಲಿಸಲಾಯಿತು.

ಫಲಾನುಭವಿಗಳ ಆಯ್ಕೆಗೆ ಸಂಬಂಧಿಸಿದ ಸಾಮಾನ್ಯ ಅರ್ಹತಾ ಷರತ್ತುಗಳನ್ನು ಸಭೆಯಲ್ಲಿ ಪರಿಶೀಲಿಸಲಾಯಿತು. ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿದ್ದು, ಕನಿಷ್ಠ 21 ವರ್ಷ ವಯಸ್ಸು ಹೊಂದಿರಬೇಕು. ಕುಟುಂಬದ ವಾರ್ಷಿಕ ಆದಾಯವು ಗ್ರಾಮೀಣ ಪ್ರದೇಶದಲ್ಲಿ 3 ಲಕ್ಷ ಹಾಗೂ ನಗರ ಪ್ರದೇಶದಲ್ಲಿ 5 ಲಕ್ಷ ಮಿತಿಯೊಳಗಿರಬೇಕು. ಅರ್ಜಿದಾರರು ಅಥವಾ ಅವರ ಕುಟುಂಬದವರು ಈ ಹಿಂದೆ ನಿಗಮ ಅಥವಾ ಸರ್ಕಾರದಿಂದ 1 ಲಕ್ಷಕ್ಕಿಂತ ಹೆಚ್ಚಿನ ಮೊತ್ತದ ಸೌಲಭ್ಯವನ್ನು ಪಡೆದು ಕಳೆದ ಮೂರು ವರ್ಷಗಳೊಳಗೆ ಪ್ರಯೋಜನ ಪಡೆದಿದ್ದಲ್ಲಿ, ಪುನಃ ಸೌಲಭ್ಯ ಪಡೆಯಲು ಅರ್ಹರಾಗಿರುವುದಿಲ್ಲ. ಈ ಕುರಿತು ಸರ್ಕಾರದ ಮಾರ್ಗಸೂಚಿಗಳನ್ವಯ ಕ್ರಮ ವಹಿಸಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು. ಅದೇ ರೀತಿ, ಪೌರಕಾರ್ಮಿಕರು ಮತ್ತು ಅವರ ಅವಲಂಬಿತ ಕುಟುಂಬದಲ್ಲಿ ಒಬ್ಬರಿಗೆ ಮಾತ್ರ ನಿಗಮದ ಸೌಲಭ್ಯವನ್ನು ನೀಡಲಾಗುವುದು. ನಗರಸಭೆ, ಪುರಸಭೆ ಅಥವಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಫಾಯಿ ಕರ್ಮಚಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಅಧಿಕೃತ ದಾಖಲೆ ಅಥವಾ ಗುರುತಿನ ಚೀಟಿ ಹೊಂದಿರುವುದು ಕಡ್ಡಾಯವಾಗಿದೆ. ಖಾಯಂ ಪೌರಕಾರ್ಮಿಕರು ಅಥವಾ ಸರ್ಕಾರಿ ನೌಕರರಾಗಿರುವ ಸ್ವಚ್ಛತಾ ಸಿಬ್ಬಂದಿ ನಿಗಮದ ವಿವಿಧ ಸೌಲಭ್ಯಗಳಿಗೆ ಅರ್ಹರಾಗಿರುವುದಿಲ್ಲ ಎಂಬುದನ್ನು ಸಭೆಯಲ್ಲಿ ಸ್ಪಷ್ಟಪಡಿಸಲಾಯಿತು.


ಸರ್ಕಾರದ ಮಾರ್ಗಸೂಚಿಗಳು ಹಾಗೂ ಜಿಲ್ಲೆಗೆ ನಿಗದಿಪಡಿಸಿರುವ ಗುರಿಗೆ ಅನುಗುಣವಾಗಿ ಅರ್ಹ ಫಲಾನುಭವಿಗಳನ್ನು ಸಂಪೂರ್ಣ ಪಾರದರ್ಶಕ, ನ್ಯಾಯಸಮ್ಮತ ಹಾಗೂ ನಿಷ್ಪಕ್ಷಪಾತ ರೀತಿಯಲ್ಲಿ ಆಯ್ಕೆ ಮಾಡುವ ಕುರಿತು ಸಭೆಯಲ್ಲಿ ಚರ್ಚಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಯಿತು.

ಸಭೆಯಲ್ಲಿ ಜಿ.ಪಂ. ಉಪ ಕಾರ್ಯದರ್ಶಿ (ಆಡಳಿತ), ಜಿಲ್ಲಾ ವ್ಯವಸ್ಥಾಪಕರು, ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯ ಸದಸ್ಯರು ಹಾಗೂ ಸಂಬಂಧಿತ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಹೊರವರ್ತುಲ ರಸ್ತೆ ಓಆರ್‌ಆರ್ ಮರು ಅಭಿವೃದ್ಧಿಗೆ 450 ಕೋಟಿ ರೂ. ಅನುದಾನ: ಕೃಷ್ಣ ಬೈರೇಗೌಡ

ಬೆಂಗಳೂರು

ಕೆ.ಆರ್. ಪುರಂನಿಂದ ಸೆಂಟ್ರಲ್ ಸಿಲ್ಕ್ ಬೋರ್ಡ್‌ವರೆಗಿನ ಹೊರವರ್ತುಲ ರಸ್ತೆಯನ್ನು (ORR) ಆಮೂಲಾಗ್ರವಾಗಿ ಮೇಲ್ದರ್ಜೆಗೇರಿಸಲು, ಮೂಲಸೌಕರ್ಯ ಸುಧಾರಿಸಲು ಹಾಗೂ ವಾಹನ ದಟ್ಟಣೆ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ರಾಜ್ಯ ಸರ್ಕಾರವು 450 ಕೋಟಿ ರೂ. ಅನುದಾನ ಮೀಸಲಿಟ್ಟಿದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.



ಗೋಲ್ಡ್‌ಮನ್ ಸ್ಯಾಕ್ಸ್, ಹೆಲಿಯೊಸ್ ಬಿಸಿನೆಸ್ ಪಾರ್ಕ್, ಕಡುಬೀಸನಹಳ್ಳಿಯಲ್ಲಿ ಹೊರ ವರ್ತುಲ ರಸ್ತೆ ಕಂಪನಿಗಳ ಸಂಘ (ORRCA), ಐಟಿ ಪಾರ್ಕ್ ಮಾಲೀಕರು ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಹಾಗೂ ಸ್ಥಳೀಯ ಜನಸಾಮಾನ್ಯರೊಂದಿಗೆ ಶನಿವಾರ ಸಮಾಲೋಚನಾ ಸಭೆ ನಡೆಸಲಾಯಿತು.

ಸಭೆಯಲ್ಲಿ ಹೊರ ವರ್ತುಲ ರಸ್ತೆ ವ್ಯಾಪ್ತಿಯಲ್ಲಿರುವ ಪ್ರಮುಖ ಜಂಕ್ಷನ್‌ಗಳು, ಸರ್ವಿಸ್ ರಸ್ತೆಗಳು, ಪಾದಚಾರಿ ಮಾರ್ಗಗಳು, ಮೆಟ್ರೋ ಕಾಮಗಾರಿಗಳು, ಮಳೆನೀರು ಚರಂಡಿಗಳು, ಸಾರ್ವಜನಿಕ ಸಾರಿಗೆ ಸಂಪರ್ಕ, ವಾಹನ ನಿಲುಗಡೆ ವ್ಯವಸ್ಥೆ ಹಾಗೂ ನಾಗರಿಕರ ಸುರಕ್ಷತೆಯನ್ನು ಒಳಗೊಂಡ ಹಲವು ವಿಷಯಗಳ ಕುರಿತು ಸುದೀರ್ಘವಾಗಿ ಚರ್ಚಿಸಿ ಸಂಬಂಧಿಸಿದ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡಲಾಯಿತು.

ಕಾರಿಡಾರ್ ಎದುರಿಸುತ್ತಿರುವ ಸವಾಲುಗಳು ಹಾಗೂ ಯೋಜನೆಯ ಹಿನ್ನೆಲೆ:

ಹೊರವರ್ತುಲ ರಸ್ತೆಯು ದೇಶದ ಆರ್ಥಿಕತೆಗೆ ಮತ್ತು ಐಟಿ ಕ್ಷೇತ್ರದ ಅಭಿವೃದ್ಧಿಗೆ ಅತ್ಯಂತ ಪ್ರಮುಖವಾದ ಕಾರಿಡಾರ್ ಆಗಿದೆ. ಆದರೆ, ಕಳೆದ 30–40 ವರ್ಷಗಳಿಂದ ಅನಧಿಕೃತ ಹಾಗೂ ನಿಯಮಬಾಹಿರವಾಗಿ ಲೇಔಟ್‌ಗಳು ಮತ್ತು ಕಟ್ಟಡಗಳು ನಿರ್ಮಾಣಗೊಂಡಿದ್ದರಿಂದ ಇಂದು ರಸ್ತೆ ಅಗಲ, ಒಳಚರಂಡಿ ಮತ್ತು ಪಾದಚಾರಿ ಮಾರ್ಗಗಳ ಅಭಾವ ಎದುರಾಗಿದೆ.

ಉದಾಹರಣೆಗೆ ಜಯನಗರದಲ್ಲಿ ಶೇಕಡಾ 23 ರಷ್ಟು ಜಾಗ ರಸ್ತೆಗೆ ಲಭ್ಯವಿದ್ದರೆ, ಈ ಈಸ್ಟ್ ಝೋನ್‌ನಲ್ಲಿ ಶೇಕಡಾ 8 ರಷ್ಟು ಮಾತ್ರ ಲಭ್ಯವಿದೆ. ಜೊತೆಗೆ ಅನಧಿಕೃತ ಕಟ್ಟಡಗಳಿಂದಾಗಿ ಪಾರ್ಕಿಂಗ್ ಜಾಗವಿಲ್ಲದೆ ವಾಹನಗಳು ರಸ್ತೆಯಲ್ಲೇ ನಿಲ್ಲುವುದರಿಂದ ಹಾಗೂ ನಿಯಮಬಾಹಿರವಾಗಿ ಕ್ರಾಸ್ ಆಗುವುದರಿಂದ ಸಂಚಾರ ದಟ್ಟಣೆ ಹೆಚ್ಚಾಗಿದೆ.

ಈ ಸಮಸ್ಯೆಗೆ ಸ್ಪಂದಿಸಿರುವ ಮುಖ್ಯಮಂತ್ರಿಗಳು ಹಾಗೂ ರಾಜ್ಯ ಸರ್ಕಾರವು 450 ಕೋಟಿ ರೂ. ಬಿಡುಗಡೆ ಮಾಡಿದ್ದು, ಅಗತ್ಯವಿದ್ದರೆ ಹೆಚ್ಚುವರಿ ಅನುದಾನ ನೀಡಲು ಬದ್ಧವಾಗಿದೆ. ಕೇವಲ ರಸ್ತೆಯ ಮೇಲ್ಮೈ ಸರಿಪಡಿಸುವುದರಿಂದ ದಟ್ಟಣೆ ಕಡಿಮೆಯಾಗುವುದಿಲ್ಲ, ಬದಲಾಗಿ ಮೂಲಸೌಕರ್ಯ ಸರಿಪಡಿಸುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

## ದೇವಾಲಯದ ಹುಂಡಿ, ಚಿನ್ನಾಭರಣ ಕಳುವು

ಮಾಲೂರು

ತಾಲೂಕು ಟೇಕಲ್ ಹೋಬಳಿ ಹುಳದೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವೆಂಕಟರಾಜನಹಳ್ಳಿ ಹಾಗೂ ತಿಮ್ಮನಾಯಕನ ಹಳ್ಳಿ ಗ್ರಾಮಗಳ 4 ದೇವಾಲಯಗಳಲ್ಲಿ ಯಾರೋ ಅಪರಿಚಿತರು ದೇವಾಲಯದ ಹುಂಡಿ ಹಾಗೂ ಚಿನ್ನಾಭರಣಗಳನ್ನು ಕಳುವು ಮಾಡಿಕೊಂಡು ಹೋಗಿರುವ ಘಟನೆ ಶುಕ್ರವಾರ ರಾತ್ರಿ ನಡೆದಿದೆ.

ಗ್ರಾಮಗಳಲ್ಲಿ ಒಟ್ಟು 4 ದೇವಸ್ಥಾನಗಳು ಬಾಗಿಲು ಮುರಿದು ದೇವಾಲಯ ಪ್ರವೇಶ ಮಾಡಿ ಕಳ್ಳತನ ನಡೆದಿದ್ದು, ಭಕ್ತರಲ್ಲಿ ಬಾರಿ ಆತಂಕ ಉಂಟಾಗಿದೆ ಕಳ್ಳತನವಾಗಿರುವ ದೇವಾಲಯಗಳು ವೆಂಕಟರಾಜನಹಳ್ಳಿ ಗ್ರಾಮದ ರೇಣುಕ ಎಲ್ಲಮ್ಮ ದೇವಸ್ಥಾನದ ಬೆಳ್ಳಿ ಕಿರೀಟ ಖಡ್ಗ ಸರ ಹುಂಡಿ ನಗದು ಕಳವು ಮಾಡಿದ್ದಾರೆ. ಅಂಕಣಮ್ಮ ದೇವಸ್ಥಾನ ದೇವಿಯ ಆಭರಣಗಳು ಮತ್ತು ಹುಂಡಿ ಕಳವು, ತಿಮ್ಮನಾಯಕನಹಳ್ಳಿ ಗ್ರಾಮದ ಸಫಲಮ್ಮ ದೇವಿ ಕಿರೀಟ ಮಾಂಗಲ್ಯ ಸರ ದಾನದ ಹಣ ಕಳವು, ಎಲ್ಲಮ್ಮ ದೇವಸ್ಥಾನ



ಕಳವು ಅಮ್ಮನವರ ಬಳಿ ಇರುವ ಬೆಳ್ಳಿ ಆಭರಣ ಕಳವು ನಾಲ್ಕು ದೇವಾಲಯಗಳಲ್ಲಿ ಒಟ್ಟು 6 ಲಕ್ಷಕ್ಕೂ ಹೆಚ್ಚು ಕಳುವಾಗಿದ್ದು, ಈ ಬಗ್ಗೆ ಗ್ರಾಮಸ್ಥರು ಮಾಸ್ತಿ ಪೋಲಿಸರಿಗೆ ಮಾಹಿತಿ ನೀಡಿದ್ದು ಪೋಲಿಸರು ಸ್ಥಳಕ್ಕೆ ಆಗಮಿಸಿ ಪರಿಶಿಲನೆ ನಡೆಸಿದರು.

ಗ್ರಾಮಸ್ಥರಿಂದ ಆಕ್ರೋಶ ಒಂದೇ ಬಾರಿಗೆ 4 ದೇವಾಲಯಗಳಲ್ಲಿ ಕಳ್ಳತನವಾಗಿರುವುದು ಗ್ರಾಮಸ್ಥರಲ್ಲಿ ಅತಂಕವಾಗಿದ್ದು, ರಾತ್ರಿ ವೇಳೆ ಪೋಲಿಸರು ಗಸ್ತು ಮಾಡದೆ ಇರುವುದರಿಂದ ಕಳ್ಳತನವಾಗಿದ್ದು, ಇತ್ತಿಚಿಗೆ ಗ್ರಾಮದ ತೋಟಗಳಲ್ಲಿರುವ ಪಂಪು ಮೋಟರ್‌ಗಳು ಸಹ ಕಳ್ಳತನವಾಗುತ್ತಿರುತ್ತದೆ ಪೋಲಿಸರು ಕಂಡು ಕಾಣದಂತೆ ಇದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದರು. ವಿಷಯ ತಿಳಿದ ಮಾಸ್ತಿ ಠಾಣೆಯ ಪೋಲಿಸ್ ಇನ್ಸ್‌ಪೆಕ್ಟರ್ ಓಂ ಪ್ರಕಾಶ್ ಗೌಡ ಹಾಗೂ ಸಿಬ್ಬಂದಿ 4 ಸ್ಥಳಗಳನ್ನು ಭೇಟಿ ನೀಡಿ ಪರಿಶೀಲನೆ ನಡೆಸಿದರು.

## ಲಯಬದ್ಧ ಕವಾಯತಿನಿಂದ ಗಮನ
### ಸೆಳೆದ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು


ಚಿಕ್ಕಬಳ್ಳಾಪುರ

ತಾಲೂಕಿನ ಕರ್ನಾಟಕ ಪಬ್ಲಿಕ್ ಶಾಲೆ ಪೋಶೆಟ್ಟಿಹಳ್ಳಿ ಪ್ರೌಢಶಾಲೆಯಲ್ಲಿ ನಾಲ್ಕು ತಂಡದ ವಿದ್ಯಾರ್ಥಿಗಳಿಂದ ಅರ್ಥಪೂರ್ಣವಾಗಿ ಪದಕ ವಾಯಿತು ನಡೆಯಿತು.

ಈ ವೇಳೆ ಶಾಲೆಯ ಪ್ರಭಾರಿ ಮುಖ್ಯ ಶಿಕ್ಷಕಿ ಬಿ.ವಿ. ನಾಗವೇಣಿ ಮಾತನಾಡಿ, ಪದಕವಾಯಿತು. ಎಂಬುದು ಪ್ರಾರ್ಥನಾ ಸಭೆಯ ನಂತರ ದೈಹಿಕ ಶಿಕ್ಷಣ ಅವಧಿಯಲ್ಲಿ ನಡೆಸುವ ಸಮೂಹ ಅಂಗಸಾಧನೆ ಇದು ವಿದ್ಯಾರ್ಥಿಗಳಲ್ಲಿ ಶಿಸ್ತು, ಏಕಾಗ್ರತೆ ಮತ್ತು ದೈಹಿಕ ಸದೃಢತೆಯನ್ನು ಬೆಳೆಸಲು ಸಹಕಾರಿಯಾಗಲಿದೆ ಎಂದ ಅವರು ವಿದ್ಯಾರ್ಥಿಗಳು ದಕ್ಷತೆ ನೆಟ್ಟಗೆ ನಿಲ್ಲುವುದರ ಜೊತೆಗೆ ಕೈಗಳು ಪಕ್ಕದಲ್ಲಿಡಿದಿಟ್ಟು ಹಿಮ್ಮಡಿಗಳನ್ನು ಜಂಟಿಯಾಗಿರುವಂತೆ ನೋಡಿಕೊಳ್ಳಬೇಕಿದೆ. ಅಂತೆಯೇ ಎಡಗಾಲನ್ನು ಪಕ್ಕಕ್ಕೆ ಜರುಗಿಸಿ, ಕೈಗಳನ್ನು ಹಿಂದಕ್ಕೆ ಕಟ್ಟಿ ವಿಶ್ರಮಿಸುವುದಾಗಿ ಸ್ವಸ್ಥ ನಿಲ್ಲಿಸಿ ಸಂಪೂರ್ಣವಾಗಿ ನಿರಾಳವಾಗಿ ನಿಲ್ಲುವುದಾಗಿದೆ ಮಕ್ಕಳನ್ನು ಶಿಸ್ತುಬದ್ಧವಾಗಿ ರೂಪಿಸಲು ಒಂದು ಪಠ್ಯೇತರ ಚಟುವಟಿಕೆ ಆಗಿದೆ ಎಂದ ಅವರು ಎಲ್ಲ ವಿದ್ಯಾರ್ಥಿಗಳು ಒಟ್ಟಿಗೆ, ಒಂದೇ ಲಯದಲ್ಲಿ ಚಲಿಸುವುದರಿಂದ ಅವರಲ್ಲಿ ಸಾಮೂಹಿಕ ಶಿಸ್ತು ಬೆಳೆಯುವುದರ ಜೊತೆಗೆ ದೇಹದ ರಕ್ತಸಂಚಲನೆ ಉತ್ತಮಗೊಳ್ಳುತ್ತದೆ ಮತ್ತು ಜಡತ್ವ ದೂರವಾಗುತ್ತದೆ ಬಹು ಮುಖ್ಯವಾಗಿ ಶಿಕ್ಷಕರ ಆಜ್ಞೆಗಳನ್ನು ಗಮನ ವಿಟ್ಟು ಕೇಳಿ ಪಾಲಿಸುವುದರಿಂದ ಏಕಾಗ್ರತೆ ಹೆಚ್ಚಿ ಕವಾಯತಿನ ಮುಂಚೂಣಿಯಲ್ಲಿ ನಿಂತು ಮುನ್ನಡೆಸುವ ವಿದ್ಯಾರ್ಥಿಯಲ್ಲಿ ನಾಯಕತ್ವದ ಗುಣಗಳು ಬೆಳೆಯುತ್ತವೆ ಇಂತಹ ಪದಕ ವಾಯಿತಿನಲ್ಲಿ ಪ್ರತಿಯೊಬ್ಬರೂ ಸಕ್ರಿಯವಾಗಿ ಪಾಲ್ಗೊಳ್ಳುವಂತಾಗಬೇಕು ಎಂದರು.

ಒಟ್ಟಾರೆಯಾಗಿ ಪದ ಕವಾಯಿತು ಈ ಕಾರ್ಯಕ್ರಮ ಯಾವ ಖಾಸಗಿ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳನ್ನು ಮೀರಿಸುವಂತೆ ಲಯಬದ್ಧವಾಗಿ ಕವಾಯಿತು ಮೂಡಿಬಂದಿತು. ವಿದ್ಯಾರ್ಥಿಗಳ ಈ ಶಿಸ್ತು ಬದ್ದ ಪದಕವಾಯಿತು. ವೀಕ್ಷಿಸಿದ ಸಾರ್ವಜನಿಕರು ಶಬ್ಬಾಸ್ ಹೇಳಿದರು. ಪ್ರತಿಭ, ಪ್ರತಿಷ್ಠಾ, ಪ್ರಕೃತಿ ಹಾಗೂ ಪ್ರಗತಿ ಎಂಬ ನಾಲ್ಕು ತಂಡಗಳಾಗಿ ವಿದ್ಯಾರ್ಥಿಗಳು ಪದಕವಾಯಿತು ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ದೈಹಿಕ ಶಿಕ್ಷಕ ಮನೋಹರ್ ಮತ್ತು ಸಿಬ್ಬಂದಿ ವರ್ಗ ಹೌಸ್ ವೈಸ್‌ಟಿ ಶರ್ಟ್‌ಗಳನ್ನು ವಿತರಿಸಿ ಅಚ್ಚುಕಟ್ಟಾಗಿ ಸ್ಪರ್ಧೆಗಳನ್ನು ಏರ್ಪಡಿಸಿದ್ದರು.



ದೊಡ್ಡಬಳ್ಳಾಪುರ ನಗರದ ದರ್ಜಿ ಪೇಟೆಯ ಪಾಂಡುರಂಗ ವಿಠ್ಠಲ ಸ್ವಾಮಿಯ ದೇವಾಲಯದಲ್ಲಿ ಏಕಾದಶಿ ಪ್ರಯುಕ್ತ ನಡೆದ ವಿಶೇಷ ಧಾರ್ಮಿಕ ಆಚರಣೆಯಲ್ಲಿ ಭಕ್ತಾದಿಗಳು ಶ್ರೀ ಸ್ವಾಮಿಯ ಪಾದ ಸ್ಪರ್ಶ ಮಾಡಲು ಸರತಿ ಸಾಲಿನಲ್ಲಿ ನಿಂತು ವಿಠಲನ ದರ್ಶನ ಪಡೆದು ಪುನೀತರಾದರು.

## ಉತ್ತಮ ಶಿಕ್ಷಣ ಪಡೆದು, ಉನ್ನತ ಹುದ್ದೆ ಅಲಂಕರಿಸಿ: ಗಾಯತ್ರಿ ಬಾಯಿ

ಪಾವಗಡ

ಶಿಕ್ಷಣ ಹಣವಂತರಿಗೆ ಮಾತ್ರ ಸೀಮಿತ ಎಂಬ ಭಾವನೆ ತಪ್ಪು. ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮಾಜ ತಿರುಗಿ ನೋಡಲಿದೆ ಎಂದು ಟ್ರಸ್ಟಿನ ಕಾರ್ಯದರ್ಶಿ ಹಾಗೂ ಜಿ.ಪಂ ಮಾಜಿ ಸದಸ್ಯೆ ಗಾಯತ್ರಿ ಬಾಯಿ ತಿಳಿಸಿದರು.

ಶನಿವಾರ ಪಟ್ಟಣದ ತೇಜಸ್ ಕನ್ವೆನ್ಷನ್ ಹಾಲ್ ನಲ್ಲಿ ತೇಜಸ್ ಚಾರಿಟಬಲ್ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಸರ್ಕಾರಿ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ನೋಟ್ ಬುಕ್ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಣ ಉಳ್ಳವರಿಗೆ ಮಾತ್ರ ಸೀಮಿತ ಎಂಬ ಭಾವನೆ ತಪ್ಪು.ಬಡವರ ಮಕ್ಕಳು ಸಹ ಸರ್ಕಾರಿ ಶಾಲೆಗಳಲ್ಲಿ ಕಲಿತು ಉನ್ನತ ಹುದ್ದೆಗಳನ್ನು ಅಲಂಕರಿಸಿದ್ದಾರೆ. ಅನೇಕ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಉತ್ತಮ ಸಾದನೆ ಮಾಡಿದ್ದಾರೆ. ಪೊಷಕರು ಸಹ ಮಕ್ಕಳನ್ನು ಉತ್ತಮ ಮಾರ್ಗದಲ್ಲಿ ಬೆಳಸಬೇಕು ಎಂಬ ಕನಸು ಇರುತ್ತದೆ. ಆ



ಕನಸನ್ನು ನನಸಾಗಿಸಲು ಈಗಿನ ಶಿಕ್ಷಣ ವ್ಯವಸ್ಥೆಯನ್ನು ಬಳಸಿಕೊಂಡು ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸಬೇಕು. ವಿದ್ಯಾರ್ಥಿಗಳು ಸಹ ಪೊಷಕರು ಬದುಕನ್ನು ಆಸಕ್ತಿವಹಿಸಿ ಕಠಿಣ ಪರಿಶ್ರಮ ವಹಿಸಿ ವಿದ್ಯಾಭ್ಯಾಸ ಮಾಡಿ ಉತ್ತಮ ಶಿಕ್ಷಣ ಪಡೆದು ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳಬೇಕಿದೆ ಎಂದು ತಿಳಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ ಟ್ರಸ್ಟ್ ನ ಅಧ್ಯಕ್ಷ ಹಾಗೂ ಮಾಜಿ ಶಾಸಕ ಸೋಮ್ಲಾ ನಾಯ್ಕ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಗುರಿ ಒಂದಿದ್ದರೆ ಸಾಲದು ಸಾಧಿಸುವ ಛಲವೂ ಇರಬೇಕು. ಆ ನಿಟ್ಟಿನಲ್ಲಿ ಗುರುಗಳಿಗೆ–ಪೋಷಕರಿಗೆ ಗೌರವಿಸಿಕೊಂಡು ವಿದ್ಯೆಯೆಡೆಗೆ ಸಾಗಿ ಉತ್ತಮ ಶಿಕ್ಷಣ ಪಡೆಯಲು ಹೆಚ್ಚಿನ ಆಸಕ್ತಿಯಿಂದ ಮುನ್ನಡೆಯಬೇಕಿದೆ ಎಂದರು. ತೇಜಸ್ ಚಾರಿಟಬಲ್ ಟ್ರಸ್ಟ್ ಬಡವರ,ನಿರ್ಗತಿಕರ ಹಾಗೂ ಗ್ರಾಮೀಣ ಮತ್ತು ಬಡ ಮಕ್ಕಳ ಬೇಧಬಾವ ತೋರದು ಪ್ರತಿವರ್ಷ ತಾಲ್ಲೂಕಿನ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪರಸ್ಕಾರಿಸಿ ಶಿಕ್ಷಣಕ್ಕೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ನಿರಂತರ ಶ್ರಮಿಸುವ ಕಾರ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ 2025–26 ನೇ ಸಾಲಿನಲ್ಲಿ ಪಿಯುಸಿ ಪರೀಕ್ಷೆಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ ತಾಲ್ಲೂಕಿನ 98 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಮಾಡಲಾಯಿತು.ಅಲ್ಲದೆ ವೈ.ಎನ್ ಹೊಸಕೋಟೆ ಸರ್ಕಾರಿ ಶಾಲೆಗೆ ಮತ್ತು ಪಟ್ಟಣದ ಶನಿಮಹಾತ್ಮ ಸರ್ಕಾರಿ ಪ್ರಥಾಮಿಕ ಶಾಲೆಯ ವಿದ್ಯಾರ್ಥಿಗಳಿಗೆ ನೋಟ್ ಬುಕ್, ಸಮವಸ್ತ್ರ ವಿತರಿಸಲಾಯಿತು. ಟ್ರಸ್ಟಿನ ಖಜಾಂವಿ ಹರ್ಷಿತ, ಶಿಕ್ಷಕ ನಾಗರಾಜ್ ನಾಯ್ಕ, ಮಂಜುನಾಥ, ರಾಮಕೃಷ್ಣ, ದೇವನಾಯ್ಕ, ಮಾಳಮ್ಮ ಸುಬ್ಬರಾಯಪ್ಪ, ಗೋಪಾಲಪ್ಪ, ಕನುಮಪ್ಪ, ಪಿ.ಸಿ ಗೋಪಾಲಪ್ಪ, ಬುಡ್ಡಪ್ಪ, ರಾಮಾಂಜಿಪ್ಪ, ವೆಂಕಟೇಶಪ್ಪ, ಮುತ್ಯಾಲು, ನರೇಶ್, ಓಬಳೇಶು, ಕೇಶವರೆಡ್ಡಿ ಸೇರಿದಂತೆ ಹಾಜರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy